ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

KB 12 YEARS 2013

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು , ಬೆಂಗಳೂರು ಗ್ರಾಮಾಂತರ

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು :
ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 168
18–12–2025 ಗುರುವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 168

## ಪರೀಕ್ಷೆ ತಯಾರಿಗೆ ಧಾರವಾಡಕ್ಕೆ ಬಂದಿದ್ದ ಯುವತಿ ರೈಲಿಗೆ ತಲೆಕೊಟ್ಟು ಆತ್ಮಹತ್ಯೆ

**ಧಾರವಾಡ:** ಕಳೆದ 4 ವರ್ಷಗಳಿಂದ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ ನಡೆಸುತ್ತಿದ್ದ ಯುವತಿ ರೈಲು ಹಳಿಗೆ ಬಿದ್ದು ಆತ್ಮಹತ್ಯೆ ಮಾಡಿ ಕೊಂಡಿರುವ ಘಟನೆ ಧಾರವಾಡ ನಗರದ ಶಿವಗಿರಿಯಲ್ಲಿ ನಡೆದಿದೆ.



ಬಳ್ಳಾರಿ ಮೂಲದ ವಿದ್ಯಾರ್ಥಿನಿ ಪಲ್ಲವಿ ಕಗ್ಗಲ್ (25) ಆತ್ಮಹತ್ಯೆ ಮಾಡಿಕೊಂಡ ಯುವತಿ. ನೇಮಕಾತಿಗಳು ನಡೆಯುತ್ತಿಲ್ಲ ಎಂದು ಮನನೊಂದು ಶಿವಗಿರಿಯ ರೈಲ್ವೆ ಟ್ರ್ಯಾಕ್‌ಗೆ ಬಿದ್ದು ಆತ್ಮಹತ್ಯೆ ಮಾಡಿಕೊಂಡಿರುವುದಾಗಿ ತಿಳಿದುಬಂದಿದೆ.

ಮೃತ ಪಲ್ಲವಿ ಕಗ್ಗಲ್ ಕಳೆದ 4 ವರ್ಷಗಳಿಂದ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ ನಡೆಸುತ್ತಿದ್ದರು.

ರೇಲ್ವೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ. ಸ್ಥಳಕ್ಕೆ ರೇಲ್ವೆ ಪೋಲಿಸರು ಭೇಟಿ ಮಾಡಿ ಪರಿಶೀಲನೆ ನಡೆಸಿದ್ದು, ಮೃತದೇಹವನ್ನ ಕಿಮ್ಸ್ ಆಸ್ಪತ್ರೆಗೆ ರವಾನಿಸಿದ್ದಾರೆ.

# ವಿಧಾನಸಭೆಯಲ್ಲಿ 'ಗೃಹಲಕ್ಷ್ಮಿ' ಗಲಾಟೆ

## ಆಡಳಿತ–ಪ್ರತಿಪಕ್ಷಗಳ ನಡುವೆ ಭಾರಿ ವಾಗ್ವಾದ

**ಬೆಳಗಾವಿ, ಡಿ.17–** ರಾಜ್ಯದಲ್ಲಿ ಗೃಹಲಕ್ಷ್ಮಿ ಫಲಾನುಭವಿಗಳಿಗೆ ಹಣ ಪಾವತಿಯಾಗಿರುವ ವಿಚಾರಕ್ಕೆ ಸಂಬಂಧಿಸಿದಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರು ಸದನಕ್ಕೆ ತಪ್ಪು ಮಾಹಿತಿ ನೀಡಿ ಅಗೌರವ ತೋರಿದ್ದಾರೆ ಎಂದು ಆರೋಪಿಸಿ ಬಿಜೆಪಿ ಶಾಸಕರು ಮಾಡಿದ ಆರೋಪ ವಿಧಾನಸಭೆಯಲ್ಲಿಂದು ಆಡಳಿತ ಮತ್ತು ಪ್ರತಿಪಕ್ಷಗಳ ನಡುವೆ ವಾಗ್ವಾದಕ್ಕೆ ಎಡೆ ಮಾಡಿಕೊಟ್ಟು, ಸದನವನ್ನು ಕೆಲಕಾಲ ಮುಂದೂಡಿದ ಪ್ರಸಂಗ ವಿಧಾನಸಭೆಯಲ್ಲಿಂದು ನಡೆಯಿತು.





ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರು ಸದನಕ್ಕೆ ಆಗಮಿಸಿ ನೀಡಿರುವ ಉತ್ತರದ ಬಗ್ಗೆ ಸ್ಪಷ್ಟನೆ ನೀಡಬೇಕು ಎಂದು ಪಟ್ಟುಹಿಡಿದು ಬಿಜೆಪಿ ಸದಸ್ಯರು ಆಗ್ರಹಿಸಿದರಲ್ಲದೆ ಧರಣಿ ನಡೆಸಲು ಮುಂದಾದರು. ಆಡಳಿತ ಮತ್ತು ಬಿಜೆಪಿ ಶಾಸಕರ ನಡುವೆ ಮಾತಿನ ಚಕಮಕಿ, ವಾಗ್ವಾದ ಮುಂದುವರಯುತ್ತಿರುವುದನ್ನು ಗಮನಿಸಿದ ಸಭಾಧ್ಯಕ್ಷ ಯು.ಟಿ.ಖಾದರ್ ಅವರು ಕೆಲಕಾಲ ಸದನದ ಕಲಾಪಗಳನ್ನು ಮುಂದೂಡಿದರು.

ಇಂದು ಬೆಳಗ್ಗೆ ನಿಗದಿತ ಸಮಯಕ್ಕಿಂತ ಸುಮಾರು ಒಂದೂವರೆ ಗಂಟೆ ತಡವಾಗಿ ಸದನ ಆರಂಭವಾದಾಗ, ಬಿಜೆಪಿ ಶಾಸಕರು ಜೈಶ್ರೀರಾಮ್ ಎಂಬ ಘೋಷಣೆ ಕೂಗಿದರು. ತಡವಾಗಿ ಆರಂಭವಾಗಿರುವುದಕ್ಕೆ ಆಕ್ಷೇಪ ವ್ಯಕ್ತಪಡಿಸಿದರು.

ಬಳಿಕ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಮಾತನಾಡಿ, ಕಳೆದ ಮೂರು ದಿನಗಳಿಂದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು ಸದನದಲ್ಲಿ ಕಾಣುತ್ತಿಲ್ಲ. ಗೃಹಲಕ್ಷ್ಮಿ ಹಣವನ್ನು ಫಲಾನುಭವಿಗಳಿಗೆ ಪಾವತಿ ಮಾಡಿರುವ ವಿಚಾರದಲ್ಲಿ ಸದನದಲ್ಲಿ ತಪ್ಪು ಮಾಹಿತಿ ಕೊಟ್ಟಿದ್ದಾರೆ. ಈ ವಿಚಾರವನ್ನು ಶೂನ್ಯವೇಳೆಯಲ್ಲಿ ಪ್ರಸ್ತಾಪಿಸಲು ನೋಟೀಸ್ ನೀಡಲಾಗಿತ್ತು. ಮೂರು ದಿನಗಳಿಂದ ಚರ್ಚೆಯಾಗುತ್ತಿದೆ. ಅವರು ಸದನದಲ್ಲಿ ಕಾಣುತ್ತಿಲ್ಲ.ಅವರುಚಂದ್ರಲೋಕದಲ್ಲಿದ್ದಾರೆಯೇ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಸಚಿವರು ಉತ್ತರ ನೀಡುವಾಗ ನಾವು ಸ್ಪಷ್ಟನೆ ಕೇಳಿದಾಗಲೂ ಫೆಬ್ರವರಿ ತಿಂಗಳ ಹಣ ಕೊಟ್ಟಿದ್ದೇವೆ ಎಂದೇ ಹೇಳಿದ್ದಾರೆ. ಸಚಿವರಾದವರೂ ಅಧಿಕಾರಿಗಳ ಬಳಿ ಸರಿಯಾದ ಮಾಹಿತಿ ಪಡೆದು ಸೂಕ್ತ ಉತ್ತರ ಕೊಡಬೇಕಲ್ಲವೇ? ಸಚಿವರು ನೀಡುವ ಉತ್ತರವನ್ನು ಸತ್ಯವೆಂದೇ ಭಾವಿಸುತ್ತೇವೆ. ಈ ರೀತಿ ಆಗುವುದಾದರೆ ಮಂತ್ರಿಗಳು ಹೇಳುವುದೇ ಸುಳ್ಳೇ ಸುಳ್ಳು ಎಂದಾಗುತ್ತದೆ ಎಂದರು.

ಇದಕ್ಕೆ ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ ಖರ್ಗೆ ಆಕ್ಷೇಪ ವ್ಯಕ್ತಪಡಿಸಿದರು. ಇದಕ್ಕೆ ಪ್ರತಿಯಾಗಿ ಬಿಜೆಪಿ ಸದಸ್ಯರಾದ ಡಾ.ಅಶ್ವತ್ಥನಾರಾಯಣ, ಆರಗ ಜ್ಞಾನೇಂದ್ರ, ಪ್ರಭು ಚವ್ಹಾಣ್, ಸುನೀಲ್‌ಕುಮಾರ್ ಮೊದಲಾದವರು ಪ್ರತಿಯಾಗಿ ಆಕ್ಷೇಪಿಸಿ ಮಾತನಾಡಲು ಮುಂದಾದಾಗ ಸದನದಲ್ಲಿ ಗೊಂದಲದ ವಾತಾವರಣ ನಿರ್ಮಾಣವಾಯಿತು.

ಸಚಿವ ಪ್ರಿಯಾಂಕ್ ಖರ್ಗೆ ಮಾತನಾಡಿ, ಜವಾಬ್ದಾರಿ ನಮದೂ ಇದೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು ಸದನಕ್ಕೆ ಉತ್ತರ ನೀಡಿರುವುದು ಮುಖ್ಯಮಂತ್ರಿಗಳ ಗಮನಕ್ಕೆ ಬಂದಾಗ ಅವರು ಸ್ಪಷ್ಟನೆ ನೀಡಿ–ದ್ದಾರೆ. ಫೆಬ್ರವರಿ ಮತ್ತು ಮಾರ್ಚ್ ತಿಂಗಳ ಹಣ ಪಾವತಿಯಾಗದಿದ್ದರೆ ಆ ಹಣವನ್ನು ಫಲಾನುಭವಿಗಳಿಗೆ ಪಾವತಿಸುವ ಭರವಸೆಯನ್ನು ನೀಡಿದ್ದಾರೆ. ಸದನವನ್ನು ತಪ್ಪು ದಾರಿಗೆ ಎಳೆಯುವ ಯಾವ ಉದ್ದೇಶವೂ ಮಂತ್ರಿಗಳಿಲ್ಲ ಎಂದು ಸ್ಪಷ್ಟನೆ ನೀಡಿದರು. ಇದಕ್ಕೆ ತೃಪ್ತರಾಗದ ಬಿಜೆಪಿ ಸದಸ್ಯರು ಇದಕ್ಕೆ ಸಂಬಂಧಪಟ್ಟ ಸಚಿವರು ಸದನಕ್ಕೆ ಆಗಮಿಸಬೇಕು ಎಂದು ಪಟ್ಟು ಹಿಡಿದರು.

ಸದಸ್ಯ ಸುರೇಶ್‌ಕುಮಾರ್ ಮಾತನಾಡಿ, ಸುಳ್ಳು ಹೇಳುವ ಉದ್ದೇಶ ಸಚಿವರಿಗಿಲ್ಲ ಎಂದು ಸ್ಪಷ್ಟನೆ ನೀಡಿದ್ದಾರೆ. ಗೃಹಲಕ್ಷ್ಮಿ ಹಣವನ್ನು ಚುನಾವಣೆಯ ಹಿಂದಿನ ದಿನ ಫಲಾನುಭವಿಗಳಿಗೆ ಖಾತೆಗೆ ಜಮೆ ಮಾಡುತ್ತಾರೆ. ಅದೇ ರೀತಿ ಅಧಿವೇಶನದ ಕೊನೆಯ ದಿನ ಉತ್ತರ ಕೊಡುತ್ತಾರೆ. ಫಲಾನುಭವಿಗಳಿಗೆ ಗೃಹಲಕ್ಷ್ಮಿಯ ಹಣವೂ ಬರುವುದಿಲ್ಲ. ಸದನದಲ್ಲಿ ನಮಗೆ ಉತ್ತರವೂ ಬರುವುದಿಲ್ಲ ಎಂದು ವ್ಯಂಗ್ಯವಾಡಿದರು.

## ನ್ಯಾಷನಲ್ ಹೆರಾಲ್ಡ್ ಪ್ರಕರಣ:

# ಬೆಳಗಾವಿಯಲ್ಲಿ ಕಾಂಗ್ರೆಸ್ ಪ್ರತಿಭಟನೆ

**ಬೆಳಗಾವಿ:** ನ್ಯಾಷನಲ್ ಹೆರಾಲ್ಡ್ ಕೇಸ್ ಮೂಲಕ ಕೇಂದ್ರ ಸರ್ಕಾರ ಕಾಂಗ್ರೆಸ್ ನಾಯಕರ ವಿರುದ್ಧ ದ್ವೇಷ ರಾಜಕೀಯ ಮಾಡುತ್ತಿದೆ ಎಂದು ಆರೋಪಿಸಿ ಕಾಂಗ್ರೆಸ್ ಪಕ್ಷದ ಸಚಿವರು, ಶಾಸಕರು, ಕಾರ್ಯಕರ್ತರು ಪ್ರತಿಭಟನೆ ನಡೆಸಿದರು. ಬೆಳಗಾವಿ ಸುವರ್ಣಸೌಧದ ಗಾಂಧಿ ಪ್ರತಿಮೆ ಮುಂಭಾಗದಲ್ಲಿ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆ ಶಿವಕುಮಾರ್ ಹಾಗೂ ಕಾಂಗ್ರೆಸ್ ಶಾಸಕರು, ಪರಿಷತ್ ಸದಸ್ಯರು ಭಾಗಿಯಾದರು.




ಕೇಂದ್ರ ಸರ್ಕಾರದ ವಿರುದ್ಧ ಘೋಷಣೆ ಕೂಗಿ, ಪ್ಲೇ ಕಾರ್ಡ್ ಹಿಡಿದುಕೊಂಡು ಕೇಂದ್ರ ಸರ್ಕಾರದ ವಿರುದ್ಧ ಕಾಂಗ್ರೆಸ್ ನಾಯಕರು ವಾಗ್ದಾಳಿ ನಡೆಸಿದರು. ಕೇಂದ್ರ ಸರ್ಕಾರ ದ್ವೇಷದ ರಾಜಕಾರಣ ಮಾಡುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಪ್ರತಿಭಟನೆಯಲ್ಲಿ ಸಿಎಂ ಸಿದ್ದರಾಮಯ್ಯ ಮಾತನಾಡಿ, ಬಿಜೆಪಿ ದ್ವೇಷದ ರಾಜಕೀಯದ ವಿರುದ್ಧದ ಹೋರಾಟ ಇದಾಗಿದೆ. ಅಧಿಕಾರ ಇರುವ ಕಡೆಗಳಲ್ಲಿ ಕಾಂಗ್ರೆಸ್ ನಾಯಕರನ್ನು ಟಾರ್ಗೆಟ್ ಮಾಡಲಾಗ್ತಿದೆ. ಅಪರಾಧಿಯನ್ನಾಗಿ ಮಾಡುವ ಪ್ರಯತ್ನ ನಡೆಸಲಾಗುತ್ತಿದೆ ಎಂದು ಆರೋಪಿಸಿದರು.

ದೇಶದಲ್ಲಿ ಭ್ರಷ್ಟಾಚಾರ, ನಿರುದ್ಯೋಗ ತಾಂಡವವಾಡುತ್ತಿದೆ. ತೆರಿಗೆ ಹೆಚ್ಚಳದ ಮೂಲಕ ರಾಷ್ಟ್ರವನ್ನು ಸಾಲಗಾರ ದೇಶವನ್ನಾಗಿ ಮಾಡಲಾಗ್ತಿದೆ. ಎರಡು ಕೋಟಿ ಉದ್ಯೋಗ ಸೃಷ್ಟಿಯ ಭರವಸೆ ಕೊಡಲಾಗಿತ್ತು. ವಿದೇಶದಲ್ಲಿರುವ ನಮ್ಮ ಅಕ್ರಮ ಹಣ ವಾಪಸ್ ತರುವ ಭರವಸೆ ಕೊಡಲಾಗಿತ್ತು. ಪೆಟ್ರೋಲ್, ಡೀಸೆಲ್, ಗ್ಯಾಸ್ ದರ ಏರಿಕೆ ಆಗುತ್ತಿದೆ. ಹೀಗಿರುವಾಗ ದೇಶದ ಗಮನ ಬೇರೆ ಕಡೆ ಸೆಳೆಯಲು ಈ ರೀತಿ ಮಾಡಲಾಗುತ್ತಿದೆ ಎಂದರು.

ದ್ವೇಷದ ರಾಜಕಾರಣ ಬಿಜೆಪಿ ಆಸ್ತಿ

ಡಿಸಿಎಂ ಡಿಕೆ ಶಿವಕುಮಾರ್ ಮಾತನಾಡಿ, ನ್ಯಾಷನಲ್ ಹೆರಾಲ್ಡ್ ಪತ್ರಿಕೆ ಜನರ ಧ್ವನಿಯಾಗಬೇಕೆಂದು ಪ್ರಾರಂಭಿಸಲಾಗಿತ್ತು. ಆದರೆ ಇದೀಗ ಅಕ್ರಮ ಹಣ ವರ್ಗಾವಣೆ ವಿಚಾರವಾಗಿ ಇಡಿಯಲ್ಲಿ ಪ್ರಕರಣ ದಾಖಲು ಮಾಡಲಾಗಿದೆ. ನನಗೆ ಸೇರಿದಂತೆ ಅನೇಕರಿಗೆ ನೋಟಿಸ್ ಕೊಡಲಾಗಿದೆ. ಎಫ್ ಐ ಆರ್ ಪ್ರತಿ ಕೊಡಿ ಎಂದು ನಾನು ಪತ್ರ ಬರೆದಿದ್ದೇನೆ. ಯಾವ ದಾಖಲೆಯ ಆಧಾರದಲ್ಲಿ ನನ್ನ ವಿರುದ್ಧ ಪ್ರಕರಣ ದಾಖಲು ಮಾಡಲಾಗಿದೆ ಎಂಬುದು ಪ್ರಶ್ನೆಯಾಗಿದೆ ಎಂದರು.

## ಎಸ್.ಪಿ.ಇ. ಕಾಯ್ದೆ ರಕ್ಷಿಸಲು ಆಗ್ರಹಿಸಿ ನಗರದಲ್ಲಿ ಪ್ರತಿಭಟನೆ

**ದಾವಣಗೆರೆ.ಡಿ.17:** ಕರ್ನಾಟಕ ರಾಜ್ಯ ವೈದ್ಯಕೀಯ ಮತ್ತು ಮಾರಾಟ ಪ್ರತಿನಿಧಿಗಳ ಸಂಘದಿಂದ ಎಸ್.ಪಿ.ಇ. ಕಾಯ್ದೆಯನ್ನು ರಕ್ಷಿಸಲು ಆಗ್ರಹಿಸಿ ನಗರದ ರೈಲ್ವೆ ಸ್ಟೇಷನ್ ಪಕ್ಕದಲ್ಲಿರುವ ಎಸಿ ಕಚೇರಿಯ ಮುಂದೆ ಪ್ರತಿಭಟನಾ ಧರಣಿ ನಡೆಸಿ ಕೇಂದ್ರ ಕಾರ್ಮಿಕ ಸಚಿವರಿಗೆ ಎಸಿ ಅವರ ಮುಖಾಂತರ ಮನವಿ ಸಲ್ಲಿಸಿದರು.

ಈ ವೇಳೆ ಮಾತನಾಡಿದ ಪ್ರತಿಭಟನಾಕಾರರು, ಭಾರತ ವೈದ್ಯಕೀಯ ಮತ್ತು ಮಾರಾಟ ಪ್ರತಿನಿಧಿಗಳ ಸಂಘಗಳ ಒಕ್ಕೂಟ ತನ್ನ ಸಂಯೋಜಿತ ಒಕ್ಕೂಟವಾದ ಕರ್ನಾಟಕ ರಾಜ್ಯ ವೈದ್ಯಕೀಯ ಮತ್ತು ಮಾರಾಟ ಪ್ರತಿನಿಧಿಗಳ ಸಂಘ ಜೊತೆಗೂಡಿ ಕೇಂದ್ರ ಸರ್ಕಾರದ ದಮನಕಾರಿ ಕಾರ್ಮಿಕ ಸಂಹಿತೆಗಳ ಜಾರಿಗೆ ತೀವ್ರ ಖಂಡನೆ ಹಾಗೂ 1976ರ ಎಸ್.ಪಿ.ಇ. ಕಾಯ್ದೆಯನ್ನು ರಕ್ಷಿಸಲು ದೇಶವ್ಯಾಪಿ ಪ್ರತಿಭಟನಾ ಕಾರ್ಯಕ್ರಮಗಳನ್ನು ನಡೆಸುತ್ತಿದೆ ಎಂದು ಹೇಳಿದರು.

ಕೇಂದ್ರೀಯ ಟ್ರೇಡ್ ಯೂನಿಯನ್‌ಗಳು, ಸ್ವತಂತ್ರ ಕೈಗಾರಿಕಾ ಫೆಡರೇಶನ್‌ಗಳು ಮತ್ತು ದೇಶದ ಲಕ್ಷಾಂತರ ಕಾರ್ಮಿಕರ ವ್ಯಾಪಕ ವಿರೋಧ ಇದ್ದರೂ ಕೇಂದ್ರದಲ್ಲಿರುವ ಮೋದಿ ಸರ್ಕಾರವು 21 ನವೆಂಬರ್ 2025 ರಿಂದ ಏಕಪಕ್ಷೀಯವಾಗಿ ನಾಲ್ಕು ಕಾರ್ಮಿಕ ಸಂಹಿತೆಗಳನ್ನ ಜಾರಿಗೆ ತಂದಿದೆ, ಈ ಕಾರ್ಮಿಕ ವಿರೋಧಿ ನಡೆಯನ್ನು ಕಟುವಾಗಿ ಟೀಕಿಸಿ ಈಗಾಗಲೇ ಕಾರ್ಮಿಕ ವಿರೋಧಿ ಕಾರ್ಮಿಕ ಸಂಹಿತೆಗಳ ಪ್ರತಿಗಳನ್ನು ದೇಶಾದ್ಯಂತ ಕಾರ್ಮಿಕ ಸಂಘಟನೆಗಳು ಸುಟ್ಟುಹಾಕುವ ಮೂಲಕ ದೇಶವ್ಯಾಪಿ ಪ್ರತಿಭಟನೆ ಮಾಡಿವೆ ಎಂದರು.

ಆದರೂ ಚುನಾವಣಾ ಬಾಂಡ್ ಹೆಸರಲ್ಲಿ ಸಾವಿರಾರು ಕೋಟಿ ಹಣ ಪಡೆದ ಕೇಂದ್ರದಲ್ಲಿ ಆಡಳಿತ ಮಾಡುತ್ತಿರುವ ಬಿಜೆಪಿ ಸರ್ಕಾರವು ಕಾರ್ಪೊರೇಟ್ ಕಂಪನಿಗಳ ಋಣ ತೀರಿಸುವ ಸಲುವಾಗಿ ಇದುವರೆಗೂ ಕಾರ್ಮಿಕ ವಿರೋಧಿ ಕಾರ್ಮಿಕ ಸಂಹಿತೆಗಳನ್ನು ವಾಪಸ್ ಪಡೆಯದೇ ಇರುವುದರಿಂದ ಎಫ್.ಎಂ.ಆರ್.ಎ.ಐ. ತನ್ನ ಹೋರಾಟವನ್ನು ದೇಶವ್ಯಾಪಿ ತೀವ್ರಗೊಳಿಸಿದೆ ಎಂದು ಮಾಹಿತಿ ನೀಡಿದರು.

ಔಷಧ ಮತ್ತು ಮಾರಾಟ ಪ್ರತಿನಿಧಿಗಳ ರಕ್ಷಣೆಗೆ ಇದ್ದಂತಹ ಟ್ರೇಡ್ ಯೂನಿಯನ್ ಅಧಿನಿಯಮ,1926; ಕೈಗಾರಿಕಾ ವಿವಾದ ಅಧಿನಿಯಮ,1947; ಮತ್ತು ಮಾರಾಟ ಪ್ರತಿನಿಧಿಗಳ (ಸರ್ವಿಸ್ ಕಂಡಿಶನ್ಸ್) ಅಧಿನಿಯಮ,1976 (ಎಸ್.ಪಿ.ಇ. ಅಧಿನಿಯಮ) ಸೇರಿದಂತೆ 29 ಅಸ್ತಿತ್ವದಲ್ಲಿರುವ ಕಾರ್ಮಿಕ ಕಾನೂನುಗಳನ್ನು ರದ್ದುಗೊಳಿಸಿದೆ.

## ಹೃದಯಾಘಾತ : ವಿದ್ಯಾರ್ಥಿನಿ ದಿಶಾ ಸಾವು

**ಚಿಕ್ಕಮಗಳೂರು:** ಜಿಲ್ಲೆಯ ಶೃಂಗೇರಿ ತಾಲ್ಲೂಕಿನಲ್ಲಿ ಹೃದಯಾಘಾತದಿಂದ (22) ವರ್ಷದ ವಿದ್ಯಾರ್ಥಿನಿಯೊಬ್ಬರು ಮೃತಪಟ್ಟಿರುವ ದುರ್ಘಟನೆ ನಡೆದಿದೆ. ಮೃತ ವಿದ್ಯಾರ್ಥಿನಿಯನ್ನು ದಿಶಾ (22) ಎಂದು ಗುರುತಿಸಲಾಗಿದೆ.



ದಿಶಾ ಅವರು ಶೃಂಗೇ–ರಿಯ ಜೆಸಿಬಿಎಂ ಕಾಲೇಜಿನಲ್ಲಿ ಅಂತಿಮ ಬಿಕಾಂ ವ್ಯಾಸಂಗ ಮಾಡುತ್ತಿದ್ದು, ಶೃಂಗೇರಿ ಪಟ್ಟಣದ ಬಿಸಿಎಂ ಹಾಸ್ಟೆಲ್‌ನಲ್ಲಿ ವಾಸವಾಗಿದ್ದರು. ಇಂದು ಹಾಸ್ಟೆಲ್‌ನಲ್ಲಿದ್ದ ವೇಳೆ ಹಠಾತ್ ತೀವ್ರ ಎದೆನೋವು ಕಾಣಿಸಿಕೊಂಡು ಕುಸಿದು ಬಿದ್ದಿದ್ದಾರೆ. ತಕ್ಷಣ ಸಹಪಾಠಿಗಳು ನೆರವಿಗೆ ಧಾವಿಸಿದರೂ, ಅದಾಗಲೇ ದಿಶಾ ಅವರು ಕೊನೆಯುಸಿರೆಳೆದಿದ್ದಾರೆ ಎನ್ನಲಾಗಿದೆ.

ಮೃತ ದಿಶಾ ಅವರು ಮೂಲತಃ ಶಿವಮೊಗ್ಗ ಜಿಲ್ಲೆಯ ತೀರ್ಥಹಳ್ಳಿ ತಾಲೂಕಿನವರಾಗಿದ್ದಾರೆ. ಅಕಾಲಿಕ ಸಾವಿನ ಸುದ್ದಿ ಕಾಲೇಜು ವಿದ್ಯಾರ್ಥಿಗಳು, ಶಿಕ್ಷಕರು ಹಾಗೂ ಕುಟುಂಬದವರಲ್ಲಿ ತೀವ್ರ ದುಃಖ ಮತ್ತು ಆಘಾತವನ್ನುಂಟುಮಾಡಿದೆ.

# 15 ವರ್ಷ ಮೀರಿದ ವಾಹನಗಳು ಗುಜುರಿಗೆ

## ಸರ್ಕಾರದಿಂದ ಅನುಮೋದನೆ: ಸಚಿವ ರಾಮಲಿಂಗಾರೆಡ್ಡಿ

**ಬೆಳಗಾವಿ:** ದೆಹಲಿಯಲ್ಲಿ ಈಗಾಗಲೇ ಚಾಲ್ತಿಯಲ್ಲಿರುವ ವಾಹನಗಳ ಗುಜರಿ ನೀತಿ ಇದೀಗ ಕರ್ನಾಟಕದಲ್ಲೂ ಗಂಭೀರವಾಗಿ ಜಾರಿಗೆ ತರಲು ರಾಜ್ಯ ಸರ್ಕಾರ ಚಿಂತನೆಯಲ್ಲಿದೆ.

ಹೌದು..ಕರ್ನಾಟಕ ರಾಜ್ಯ ಸರ್ಕಾರವು ರಾಜ್ಯದ ಎಲ್ಲಾ ಸರಕಾರಿ ಇಲಾಖೆ, ನಿಗಮ, ಮಂಡಳಿ, ನಗರಸಭೆ, ಸರಕಾರದ ಇತ–ರೆ ಅಧೀನ ಸಂಸ್ಥೆಗಳಿಗೆ ಸೇರಿದ ನೋಂದಣಿಯಾಗಿ ಹದಿನೈದು (15) ವರ್ಷ ಮೀರಿದ ವಾಹನಗಳನ್ನು ಕಡ್ಡಾಯವಾಗಿ ರಾಜ್ಯದಲ್ಲಿ ಸ್ಥಾಪಿತವಾಗಿರುವ ರಿಜಿಸ್ಟರ್ಡ ವೆಹಿಕಲ್ ಸ್ಕ್ರ್ಯಾಪಿಂಗ್ ಫೆಸಿಲಿಟಿಗಳಲ್ಲಿಯೇ ಸ್ಕ್ರ್ಯಾಪ್ ಮಾಡಲು ರಾಜ್ಯ ಸರಕಾರವು ಕಳೆದ ಸೆಪ್ಟೆಂಬರ್ 12ರಂದು ಅನುಮೋದನೆ ನೀಡಲಾಗಿದೆ ಎಂದು ಸಾರಿಗೆ ಹಾಗೂ ಮುಜರಾಯಿ ಸಚಿವರಾದ ರಾಮಲಿಂಗಾರೆಡ್ಡಿ ಅವರು ಮಾಹಿತಿ ನೀಡಿದರು.

ವಿಧಾನ ಪರಿಷತ್ತಿನಲ್ಲಿ ಇಂದು ಸದಸ್ಯರಾದ ಗೋವಿಂದ ರಾಜು ಅವರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಚಿವರು, 'ಎನ್.ಐ.ಸಿ. ಅವರು ಒದಗಿಸಿರುವ ಮಾಹಿತಿಯ ಪ್ರಕಾರ ದಿನಾಂಕ: 04–12–2025ರ ಅಂತ್ಯಕ್ಕೆ ಒಟ್ಟು 18,552 ಹದಿನೈದು (15) ವರ್ಷಗಳು ಮೀರಿದ (ಸಾರಿಗೆ ಸಂಸ್ಥೆಗಳ ಬಸ್ಸುಗಳನ್ನು ಹೊರತುಪಡಿಸಿ) ಸರಕಾರಿ ವಾಹನಗಳ ನೋಂದಣಿಯನ್ನು ಕೇಂದ್ರ ಸರಕಾರವು ವಾಹನ್ ಪೋರ್ಟಲಿನಲ್ಲಿ ರದ್ದುಪಡಿಸಲಾಗಿದೆ. ಈ 18,552 ವಾಹನಗಳ ಪೈಕಿ ಆರ್ ವಿಎಸ್ ಎಫ್‌ನಲ್ಲಿ ಒಟ್ಟು 1,493 ವಾಹನಗಳನ್ನು ಸ್ಕ್ರ್ಯಾಪ್ ಮಾಡಲಾಗಿದೆ ಮತ್ತು 17,059 ವಾಹನಗಳನ್ನು ಸ್ಕ್ರ್ಯಾಪ್ ಮಾಡುವುದು ಬಾಕಿ ಇರುತ್ತದೆ ಎಂದು ತಿಳಿಸಿದರು.



2023ರಿಂದ ಇಲ್ಲಿವರೆಗೆ ರಾಜ್ಯದ ನಾಲ್ಕು ನಿಗಮ ಸಂಸ್ಥೆಗಳಲ್ಲಿ 3212 ವಾಹನಗಳು ನಿಷ್ಕ್ರೀಯಗೊಂಡಿವೆ. 579 ವಾಹನಗಳನ್ನು ನಿಷ್ಕ್ರೀಯಗೊಳಿಸಲು ಬಾಕಿ ಇದೆ ಎಂದು ಸಚಿವ ರಾಮಲಿಂಗಾರೆಡ್ಡಿ ಮಾಹಿತಿ ನೀಡಿದರು.

**ಬೌದ್ಧ ಭಿಕ್ಕುಗಳಿಗೆ ಮಾಸಿಕ ವೇತನ:** ಇದೇ ವೇಳೆ ರಾಜ್ಯ ಬೌದ್ಧ ಕೇಂದ್ರಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಬೌದ್ಧ ಭಿಕ್ಕುಗಳಿಗೆ ಮುಜರಾಯಿ ಇಲಾಖೆ ವತಿಯಿಂದ ತತಕ್ಷಣದಿಂದಲೇ ಅನ್ವಯವಾಗುವಂತೆ ಅಲ್ಪಸಂಖ್ಯಾತ ಇಲಾಖೆ ವತಿಯಿಂದ ತಿಂಗಳ ವೇತನವನ್ನು ನೀಡಲಾಗುವುದು ರಾಮಲಿಂಗಾರೆಡ್ಡಿ ತಿಳಿಸಿದರು.

ಪ್ರಶ್ನೋತ್ತರ ವೇಳೆ ಶಿವಕುಮಾರ್.ಕೆ ಅವರು ಕೇಳಿದ ಪ್ರಶ್ನೆಗೆ ವಕ್ಫ್ ಮತ್ತು ಅಲಸಂಖ್ಯಾತ ಕಲ್ಯಾಣ ಸಚಿವ ಜಮೀರ್ ಅಹಮದ್ ಅವರ ಪರವಾಗಿ ಉತ್ತರಿಸಿದ ರಾಮಲಿಂಗಾರೆಡ್ಡಿ ಅವರು, ರಾಜ್ಯದ ನಾನಾ ಕಡೆ ಬೌದ್ಧ ಕೇಂದ್ರಗಳಲ್ಲಿ ಬೌದ್ಧ ಭಿಕ್ಕುಗಳು ಕಾರ್ಯ ನಿರ್ವಹಿಸುತ್ತಿದ್ದಾರೆ. ಕೆಲವು ಕಡೆ ಕೆಲವರಿಗೆ ದೈನಂದಿನ ಜೀವನ ನಿರ್ವಹಣೆ ಮಾಡುವುದು ಕಷ್ಟಕರವಾಗಿದೆ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆ. ಹೀಗಾಗಿ ಇಲಾಖೆ ವತಿಯಿಂದಲೇ ಅವರಿಗೆ ಮಾಸಿಕ ವೇತನ ನೀಡುವುದಾಗಿ ತಿಳಿಸಿದರು.

ಈ ಸಂಬಂಧ ಇಲಾಖೆಯ ಅಧಿಕಾರಿಗಳ ಜೊತೆ ಚರ್ಚಿಸಿ ತತಕ್ಷಣದಿಂದಲೇ ಜಾರಿಯಾಗುವಂತೆ ವೇತನ ನೀಡಲಾಗುವುದು. ಸರ್ಕಾರ ಅವರ ಹಿತ ಕಾಪಾಡಲು ಬದ್ಧವಿದೆ ಎಂದು ಆಶ್ವಾಸನೆ ನೀಡಿದರು.

ಅಲ್ಪಸಂಖ್ಯಾತ ಕಲ್ಯಾಣ ಇಲಾಖೆ ವತಿಯಿಂದ ನೊಂದಾಯಿತ ಜೈನ ಬಸದೀಗಳಲ್ಲಿ ಸೇವೆ ಸಲ್ಲಿಸುತ್ತಿರುವ ಮುಖ್ಯ ಅರ್ಚಕರಿಗೆ 6000, ಸಹಾಯಕ ಅರ್ಚಕರಿಗೆ 5000 ರೂ. ಇದೇ ರೀತಿ ಮಸೀದಿಗಳಲ್ಲಿ ಸೇವೆ ಸಲ್ಲಿಸುತ್ತಿರುವ ಪೇಶ್, ಇಮಾಮ್ ಮತ್ತು ಮುಯಿಜೀನ್ ಅವರುಗಳಿಗೆ ಕ್ರಮವಾಗಿ ಕ್ರಮವಾಗಿ 6 ಸಾವಿರ ಹಾಗೂ 5000 ನೀಡುತ್ತಿದ್ದೇವೆ ಎಂದು ವಿವರಿಸಿದರು.

## ಭಾರತ ಕಮ್ಯೂನಿಷ್ಟ್ ಪಕ್ಷದ ಶತಮಾನೋತ್ಸವ ಜಾಥಾ–ಬಹಿರಂಗ ಸಭೆ

**ದಾವಣಗೆರೆ.ಡಿ.17:** ದೇಶದಲ್ಲಿ ಹೆಚ್ಚುತ್ತಿರುವ ಕೋಮುವಾದ, ಜಾತಿವಾದ, ನಿರುದ್ಯೋಗ, ಭ್ರಷ್ಠಾಚಾರ, ಅತ್ಯಾಚಾರ ಸೇರಿದಂತೆ ಇನ್ನಿತರೆ ಪಿಡುಗುಗಳನ್ನು ಅಳಿಸುವ ಮೂಲಕ ಶಾಂತಿ, ಸೌಹಾರ್ಧತೆ, ಸಹಬಾಳ್ವೆಯ ಜತೆ ಸಮತಾ ರಾಜ್ಯದ ಕನಸನ್ನು ಕಟ್ಟುವ ಕನಸುಗಳೊಂದಿಗೆ ಭಾರತ ಕಮ್ಯೂನಿಷ್ಟ್ ಪಕ್ಷವು ನಡೆಸುತ್ತಿರುವ ರಾಜ್ಯಾದ್ಯಂತ ಜಾಥಾ ನಡೆಸುತ್ತಿದ್ದು, ದಾವಣಗೆರೆಗೆ ಆಗಮಿಸಿತು.

ನವೆಂಬರ್ 30ರಂದು ಕೆಜಿಎಫ್‌ನ ವೇಮಗಲ್‌ನಿಂದ ಆರಂಭಗೊಂಡ ಜಾಥಾವು ತುಮಕೂರು, ಚಿತ್ರದುರ್ಗ, ಬಳ್ಳಾರಿ, ವಿಜಯನಗರ, ಕಲಬುರಗಿ, ಬೀದರ್, ವಿಜಯಪುರ, ಬಾಗಲಕೋಟೆ, ಬೆಳಗಾವಿ, ಧಾರವಾಡ, ಹುಬ್ಬಳ್ಳಿ, ಗದಗ, ಹಾವೇರಿ ಜಿಲ್ಲೆಗಳಲ್ಲಿ ಸಂಚರಿಸಿ ಬುಧವಾರ ದಾವಣಗೆರೆಗೆ ಆಗಮಿಸಿತು.




ನಗರದ ಪಿಬಿ ರಸ್ತೆಯಲ್ಲಿನ ಸಂಗೊಳ್ಳಿ ರಾಯಣ್ಣ ವೃತ್ತದಲ್ಲಿ ಸ್ವಾಗತ ಕೋರಿದ ದಾವಣಗೆರೆ ಜಿಲ್ಲಾ ಸಿಪಿಐ ಮುಖಂಡರು, ಪಿಬಿ ರಸ್ತೆಯ ಮೂಲಕ ಮಹಾತ್ಮಾಗಾಂಧಿ ವೃತ್ತ, ಅಶೋಕ ರಸ್ತೆ, ಜಯದೇವ ವೃತ್ತಕ್ಕೆ ಆಗಮಿಸಿ, ಅಲ್ಲಿ ಬಹಿರಂಗ ಸಭೆ ನಡೆಸಿದರು.

ದಾವಣಗೆರೆಯಲ್ಲಿ ಬಹಿರಂಗ ಸಭೆ ನಡೆಸಿದ ಜಾಥಾವು ನಂತರ ಹದಡಿ ರಸ್ತೆಯ ಮೂಲಕ ನಲ್ಲೂರು, ಚನ್ನಗಿರಿ, ಬೀರೂರು, ಕಡೂರು ಮೂಲಕ ಚಿಕ್ಕಮಗಳೂರು ಜಿಲ್ಲೆಗೆ ಸಾಗಿತು.

ಇದಕ್ಕೂ ಮುನ್ನ ನಡೆದ ಬಹಿರಂಗ ಸಭೆಯಲ್ಲಿ ಮಾತನಾಡಿದ ಸಿಪಿಐ ರಾಜ್ಯಮಂಡಳಿ ಕಾರ್ಯದರ್ಶಿ ಸಾತಿ ಸುಂದರೇಶ್, ಸಮತಾ ರಾಜ್ಯ ನಿರ್ಮಾಣದ ಗುರಿ ಇಟ್ಟುಕೊಂಡು ಅನೇಕ ವಿರೋಧಗಳ ನಡುವೆಯೂ 1925ರಲ್ಲಿ ಸಿಪಿಐ ಪಕ್ಷ ಪ್ರಾರಂಭವಾಯಿತು. 1925ರಲ್ಲಿ ಬ್ರಿಟೀಷ್ ಸಾಮ್ರಾಜ್ಯಶಾಹಿ ಆಡಳಿತ ನಡೆಸುತ್ತಿತ್ತು, ಬ್ರಿಟೀಷರು ಈ ದೇಶದ ಜನಸಾಮಾನ್ಯರನ್ನ, ರೈತರನ್ನ, ದುಡಿಯುವ ಜನರನ್ನ ಅತ್ಯಂತ ಶೋಷಣೆ ಮಾಡುತ್ತಿದ್ದರು. ಜೊತೆಗೆ ದೇಶದ ಬಂಡವಾಳ ಶಾಯಿಗಳು, ಭೂ ಮಾಲೀಕರು ರೈತರನ್ನು ಹಿಂಡಿಹಿಪ್ಪೆ ಮಾಡುತ್ತಿದ್ದರು. ತಳ ವರ್ಗದ ಜನತೆ ಶೋಷಣೆಗೆ ಒಳಗಾಗಿತ್ತು. ಅದೇ ಸಂದರ್ಭದಲ್ಲಿ ಸಮಾತಾ ಸಮಾಜಕ್ಕಾಗಿ ರಷ್ಯಾದಲ್ಲಿ ನಡೆದ ಹೋರಾಟದಂತೆ ಭಾರತದಲ್ಲೂ ಹೋರಾಟ ಮಾಡಲು ನಮ್ಮ ಸಿಪಿಐ ನಾಯಕರು ನಿರ್ಧರಿಸಿ ಹಲವು ವಿರೋಧಗಳ ನಡೆವೆಯೂ ಪಕ್ಷ ಸ್ಥಾಪನೆ ಮಾಡುವಲ್ಲಿ ಯಶಸ್ವಿಯಾದರು ಎಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಮಾನವ ಬಂಧುತ್ವ ವೇದಿಕೆ ರಾಜ್ಯ ಸಂಚಾಕಲ ಎ.ಬಿ.ರಾಮಚಂದ್ರಪ್ಪ ಮಾತನಾಡಿ, ಸ್ವತಂತ್ರ ಪೂರ್ವದಲ್ಲಿ ಬ್ರಾಹ್ಮಣ್ಯವನ್ನೇ ಈ ದೇಶದ ಸಂಸ್ಕೃತಿ ಎಂದು ಬಿಂಬಿಸಿಕೊಂಡು ಬಂದಿದ್ದರು. ಈ ದೇಶದ ಅಧಿಕಾರ ಮತ್ತು ಸಂಪತ್ತು ಕೇವಲ ಮೇಲ್ಜಾತಿಯ ಅಧೀನದಲ್ಲಿತ್ತು. ಭಾರತಕ್ಕೆ ಸ್ವಾತಂತ್ರ್ಯ ಬಂದ ಮೇಲೆ ಈ ದೇಶ ಹಿಂದೂ ರಾಷ್ಟ್ರವಾಗಬೇಕು ಎಂಬ ಉದ್ದೇಶದಿಂದ ಬ್ರಿಟೀಷರ ವಿರುದ್ಧ ಹೋರಾಟ ಪ್ರಾರಂಭ ಮಾಡಿದ್ದರು. ಆಈ ವೇಳೆ ಹೆಚ್.ಎಂ.ಸಂತೋಷ್, ಬಿ.ಸಿ.ಹನುಮೇಗೌಡ, ಪಿ.ಷಣ್ಮುಖಸ್ವಾಮಿ, ಹೆಚ್.ಜಿ.ಉಮೇಶ್ ಅವರಗೆರೆ, ಹೆಚ್.ಕೆ.ಕೊಟ್ರಪ್ಪ, ಜಿ.ಯಲ್ಲಪ್ಪ, ಮಾದಿಹಳ್ಳಿ ಮಂಜುನಾಥ್, ಕಲಿಗಾರ ರಫೀವುಲ್ಲಾ, ಕೆ.ಜಿ.ಶಿವಮೂರ್ತಿ, ಐರಣಿ ಚಂದ್ರು, ಸುರೇಶ್ ಯರಗುಂಟೆ, ಹೆಚ್.ಕೆ.ಆರ್.ಸುರೇಶ್, ಶಿವಕುಮಾರ್ ಡಿ.ಶೆಟ್ಟರ್ ಮತ್ತಿತರರಿದ್ದರು.

## ಕಬ್ಬು ಕಟಾವು ಯಂತ್ರಕ್ಕೆ ಸಿಲುಕಿ ಮಹಿಳಾ ಕಾರ್ಮಿಕರಿಬ್ಬರು ಸಾವು

**ಬೆಳಗಾವಿ :** ಕಬ್ಬು ಕಟಾವು ವೇಳೆ ಯಂತ್ರಕ್ಕೆ ಸಿಲುಕಿ ಮಹಿಳಾ ಕಾರ್ಮಿಕರಿಬ್ಬರು ಸಾವನ್ನಪ್ಪಿರುವಂತಹ ಘಟನೆ ಬೆಳಗಾವಿ ಜಿಲ್ಲೆಯ ಅಥಣಿ ತಾಲೂಕಿನ ಸತ್ತಿ ಗ್ರಾಮದಲ್ಲಿ ನಡೆದಿದೆ. ಬಾರವ್ವ ಕೋಬಡಿ(60), ಲಕ್ಷ್ಮೀಬಾಯಿ ರುದ್ರಗೌಡರ್(65) ಮೃತರು. ಸದ್ಯ ಸ್ಥಳದಲ್ಲಿ ಮೃತರ ಕುಟುಂಬ ಸದಸ್ಯರ ಆಕ್ರಂದನ ಮುಗಿಲು ಮುಟ್ಟಿದೆ. ಅಥಣಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

ನಡೆದದ್ದೇನು?

ಕಬ್ಬಿನ ಗದ್ದೆಗೆ ಕೂಲಿ ಕೆಲಸಕ್ಕೆಂದು ಇಬ್ಬರು ಮಹಿಳೆಯರು ಬಂದಿದ್ದರು. ಕಬ್ಬು ಕಟಾವು ವೇಳೆ ಮುಂದೆ ನೋಡದೇ ಚಾಲಕ ವಾಹನ ಚಲಾಯಿಸಿದ್ದಾನೆ. ಈ ವೇಳೆ ಇಬ್ಬರು ಮಹಿಳೆಯರ ತಲೆ ಯಂತ್ರದಲ್ಲಿ ಸಿಲುಕಿ ಸಾವನ್ನಪ್ಪಿದ್ದಾರೆ. ಚಾಲಕನ ನಿರ್ಲಕ್ಷ್ಯದಿಂದ ಕೂಲಿ ಕಾರ್ಮಿಕರು ಪ್ರಾಣ ಕಳೆದುಕೊಂಡಿದ್ದಾರೆ.

## ವಿದ್ಯಾರ್ಥಿನಿ ನೇಣು ಬಿಗಿದುಕೊಂಡು ಆತ್ಮಹತ್ಯೆ

**ಶಿವಮೊಗ್ಗ:** ವಿದ್ಯಾರ್ಥಿನಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವಂತಹ ಘಟನೆ ಶಿವಮೊಗ್ಗ ಜಿಲ್ಲೆಯ ಹೊಸನಗರ ತಾಲ್ಲೂಕಿನ ವಸವೆ ಗ್ರಾಮದಲ್ಲಿ ನಡೆದಿದೆ. ರಚನಾ (20) ಆತ್ಮಹತ್ಯೆ ಮಾಡಿಕೊಂಡ ವಿದ್ಯಾರ್ಥಿ. ಹೊಸನಗರದ ಕೊಡಚಾದ್ರಿ ಸರ್ಕಾರಿ ಕಾಲೇಜಿನಲ್ಲಿ ಬಿ.ಕಾಂ ವ್ಯಾಸಂಗ ಮಾಡುತಿದ್ದಳು. ಕಾಲೇಜಿನಿಂದ ಮನೆಗೆ ಬಂದ ಬಳಿಕ ನೇಣಿಗೆ ಶರಣಾಗಿದ್ದು, ಆತ್ಮಹತ್ಯೆಗೆ ಕಾರಣ ತಿಳಿದು ಬಂದಿಲ್ಲ. ಹೊಸನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ರಾಶಿ ಭವಿಷ್ಯ

### ಮೇಷ ರಾಶಿ

ಗಾಯಗೊಳ್ಳುವುದನ್ನು ತಪ್ಪಿಸಲು ಕುಳಿತುಕೊಳ್ಳುವಾಗ ವಿಶೇಷ ಕಾಳಜಿ ವಹಿಸಿ. ಅಲ್ಲದೇ ಒಳ್ಳೆಯ ನಿಲುವು ಕೇವಲ ನಿಮ್ಮ ವ್ಯಕ್ತಿತ್ವವನ್ನು ವೃದ್ಧಿಸುವುದಷ್ಟೇ ಅಲ್ಲದೇ ಆರೋಗ್ಯ ಮತ್ತು ವಿಶ್ವಾಸಾರ್ಹತೆಯನ್ನು ಅಭಿವೃದ್ಧಿಪಡಿಸುವಲ್ಲೂ ಪ್ರಮುಖ ಪಾತ್ರ ವಹಿಸುತ್ತದೆ. ದೀರ್ಘಕಾಲದ ಲಾಭಗಳಿಗೆ ಸ್ಟಾಕ್‌ಗಳು ಮತ್ತು ಮ್ಯೂಚುವಲ್ ಫಂಡ್‌ಗಳಲ್ಲಿ ಹೂಡಿಕೆ ಮಾಡುವುದನ್ನು ಶಿಫಾರಸು ಮಾಡಲಾಗಿದೆ.

### ವೃಷಭ ರಾಶಿ

ನೀವು ಚೈತನ್ಯದಿಂದ ತುಂಬಿರುತ್ತೀರಿ ಮತ್ತು ಇಂದು ಅಸಾಮಾನ್ಯವಾದದ್ದೇನಾದರೂ ಸಾಧಿಸುತ್ತೀರಿ. ನಿಮ್ಮ ಹೆಚ್ಚುವರಿ ಹಣವನ್ನು ಒಂದು ಸುರಕ್ಷಿತ ಸ್ಥಳದಲ್ಲಿರಿಸಿ ಹಾಗೂ ಇದು ಮುಂದಿನ ಕಾಲದಲ್ಲಿ ನಿಮಗೆ ಒಳ್ಳೆಯ ಆದಾಯ ತರುತ್ತದೆ. ಕುಟುಂಬದ ಸದಸ್ಯರ ಅಗತ್ಯಗಳಿಗೆ ಆದ್ಯತೆ ನೀಡಿ. ನೀವು ಅವರ ಸಲುವಾಗಿ ಕಾಳಜಿ ತೆಗೆದುಕೊಳ್ಳುತ್ತೀರೆಂದು ಅವರಿಗೆ ಅರ್ಥವಾಗುವ ಹಾಗೆ ಅವರ ಸಂತೋಷವನ್ನು ಹಂಚಿಕೊಳ್ಳಿ.

### ಮಿಥುನ ರಾಶಿ

ಒಬ್ಬ ಸಂತನಿಂದ ಆಧ್ಯಾತ್ಮಿಕ ಜ್ಞಾನ ಸಾಂತ್ವನ ಮತ್ತು ಆರಾಮವನ್ನು ಒದಗಿಸುತ್ತದೆ. ನೀವು ನಿಮ್ಮ ತಂತ್ರಗಳನ್ನು ಅಳವಡಿಸಿದಲ್ಲಿ ಇಂದು ಸ್ವಲ್ಪ ಹೆಚ್ಚುವರಿ ಹಣ ಸಂಪಾದಿಸುತ್ತೀರಿ. ನಿಮ್ಮ ಅತಿಯಾದ ಜೀವನಶೈಲಿ ಮನೆಯಲ್ಲಿ ಆತಂಕ ಸೃಷ್ಟಿಸಬಹುದು ಆದ್ದರಿಂದ ತಡರಾತ್ರಿಯನ್ನು ಹಾಗೂ ಇತರರ ಮೇಲೆ ಬಹಳ ಖರ್ಚು ಮಾಡುವುದನ್ನು ತಪ್ಪಿಸಿ.

### ಕರ್ಕ ರಾಶಿ

ನೀವು ಸಾಮಾನ್ಯವಾಗಿ ಇರುವುದಕ್ಕಿಂತ ಕಡಿಮೆ ಚೈತನ್ಯವನ್ನು ಇಂದು ಕಾಣುತ್ತೀರಿ ನಿಮ್ಮ ಮೇಲೆ ನೀವೇ ಹೆಚ್ಚುವರಿ ಕೆಲಸಕ್ಕೆ ಒತ್ತಡ ಹೇರಬೇಡಿ – ಸ್ವಲ್ಪ ವಿಶ್ರಾಂತಿ ತೆಗೆದುಕೊಳ್ಳಿ ಮತ್ತು ನಿಮ್ಮ ಕೆಲಸಗಳನ್ನು ಇನ್ನೊಂದು ದಿನಕ್ಕೆ ವರ್ಗಾಯಿಸಿ. ಇಂದು ನಿಮ್ಮ ತಂದೆ ತಾಯಿಯರಲ್ಲಿ ಯಾರಾದರೂ ಒಬ್ಬರು ಹಣವನ್ನು ಸಂಗ್ರಹಿಸುವ ಬಗ್ಗೆ ಉಪನ್ಯಾಸಗಳನ್ನು ನೀಡಬಹುದು, ನೀವು ಅವರ ಮಾತುಗಳನ್ನು ಬಹಳ ಗಮನವಾಗಿ ಕೇಳಬೇಕಾದ ಅಗತ್ಯವಿದೆ. ಇಲ್ಲದಿದ್ದರೆ ಮುಂಬರುವ ಸಮಯಲ್ಲಿ ನೀವೇ ತೊಂದರೆಗೊಳಗಾಗಬಹುದು.

### ಸಿಂಹ ರಾಶಿ

ಅನಗತ್ಯ ಆಲೋಚನೆಗಳು ನಿಮ್ಮ ಮನಸ್ಸನ್ನು ಆವರಿಸಬಹುದು. ಖಾಲಿ ಮೆದುಳು ದೆವ್ವಗಳ ಕಾರ್ಖಾನೆಯಾದ್ದರಿಂದ ದೈಹಿಕ ವ್ಯಾಯಾಮದಲ್ಲಿ ನಿಮ್ಮನ್ನು ತೊಡಗಿಸಿಕೊಳ್ಳಲು ಪ್ರಯತ್ನಿಸಿ. ನಿಮ್ಮ ತಾಯಿ ಅಥವಾ ತಂದೆಯ ಆರೋಗ್ಯಕ್ಕಾಗಿ ನೀವು ಇಂದು ಸಾಕಷ್ಟು ಹಣವನ್ನು ಖರ್ಚು ಮಾಡಬೇಕಾಗಬಹುದು. ಇದು ನಿಮ್ಮ ಹಣಕಾಸಿನ ಸ್ಥಿತಿಯನ್ನು ಹದಗೆಡಿಸುತ್ತದೆ ಆದರೆ ಸಂಬಂಧವನ್ನು ಬಲಪಡಿಸುತ್ತದೆ.

### ಕನ್ಯಾ ರಾಶಿ

ನಿಮ್ಮ ಸಂಗಾತಿಯ ನಿಷ್ಠಾವಂತ ಹೃದಯ ಮತ್ತು ಅದ್ಭುತ ಚೈತನ್ಯ ನಿಮಗೆ ಸಂತೋಷ ನೀಡಬಹುದು. ಇಲ್ಲಿಯವರೆಗೆ ಅನಗತ್ಯವಾಗಿ ಹಣವನ್ನು ಖರ್ಚು ಮಾಡುತ್ತಿದ್ದವರು ಜೀವನದಲ್ಲಿ ಹಣದ ಪ್ರಾಮುಖ್ಯತೆ ಏನು ಎಂಬುದನ್ನು ಅರ್ಥಮಾಡಿಕೊಳ್ಳಬಹುದು ಏಕೆಂದರೆ ಇಂದು ಇದ್ದಕ್ಕಿದ್ದಂತೆ ನಿಮಗೆ ಹಣದ ಅಗತ್ಯವಿರುತ್ತದೆ ಮತ್ತು ನಿಮಗೆ ಸಾಕಷ್ಟು ಹಣವಿರುವುದಿಲ್ಲ. ನಿಮ್ಮ ಪ್ರಯತ್ನಗಳು ಹಾಗೂ ನಿಮ್ಮ ಕುಟುಂಬದ ಸದಸ್ಯರು ಒದಗಿಸಿದ ಬೆಂಬಲದ ಫಲವಾದ ಯಶಸ್ಸು ಮತ್ತು ಸಂತೋಷವನ್ನು ಆನಂದಿಸಲು ಈಗ ಒಂದು ಒಳ್ಳೆಯ ಸಮಯ.

### ತುಲಾ ರಾಶಿ

ಗಾಳಿಗೊಡ್ಡಿದ ಆಹಾರ ನಿಮಗೆ ಅನಾರೋಗ್ಯ ತರಬಹುದಾದ್ದರಿಂದ ಅವುಗಳನ್ನು ತಿನ್ನಬೇಡಿ. ಹಣಕ್ಕೆ ಸಂಬಂಧಿಸಿದ ಯಾವುದೇ ವಿಷಯ ನ್ಯಾಯಾಲಯ ಪ್ರಕರಣದಲ್ಲಿ ಸಿಲುಕಿಕೊಂಡಿದ್ದರೆ, ಇಂದು ನೀವು ಅದರಲ್ಲಿ ವಿಜಯವನ್ನು ಪಡೆಯಬಹುದು ಮತ್ತು ನೀವು ಹಣದ ಲಾಭವನ್ನು ಪಡೆಯಬಹುದು. ನಿಮ್ಮ ಮನೆಯ ಪರಿಸ್ಥಿತಿ ಸ್ವಲ್ಪ ಅನಿರೀಕ್ಷಿತವಾಗಿರುತ್ತದೆ. ಇಂದು ನಿಮ್ಮ ಪ್ರಿಯತಮೆಗೆ ತೀರ ಮಧುರವಾದಂಥದ್ದನ್ನು ಹೇಳಬೇಡಿ.

### ವೃಶ್ಚಿಕ ರಾಶಿ

ಮಾನಸಿಕ ಶಾಂತಿಗಾಗಿ ಕೆಲವು ದಾನ ಧರ್ಮಗಳಲ್ಲಿ ನಿಮ್ಮನ್ನು ತೊಡಗಿಸಿಕೊಳ್ಳಿ. ಹಣಕಾಸಿನಲ್ಲಿ ಸುಧಾರಣೆ ನೀವು ಅಗತ್ಯ ವಸ್ತುಗಳನ್ನು ಖರೀದಿಸುವುದನ್ನು ಅನುಕೂಲಕರವಾಗಿಸುತ್ತದೆ. ಮನೆಯ ಚಟುವಟಿಕೆಗಳಲ್ಲಿ ತೊಡಗಿಕೊಂಡಿರಿ. ಅದೇ ಸಮಯದಲ್ಲಿ ಈ ಲಯವನ್ನು ಮುಂದುವರಿಸಲು ಮತ್ತು ನಿಮ್ಮ ದೇಹವನ್ನು ಚೈತನ್ಯದಾಯಕವಾಗಿರಿಸಲು ಮನರಂಜನಾ ಚಟುವಟಿಕೆಗಳಲ್ಲಿ ಸ್ವಲ್ಪ ಸಮಯ ಕಳೆಯಿರಿ.

### ಧನು ರಾಶಿ

ಉತ್ತಮ ಆರೋಗ್ಯ ಕ್ರೀಡಾ ಸ್ಪರ್ಧೆಯಲ್ಲಿ ಭಾಗವಹಿಸಲು ನಿಮ್ಮನ್ನು ಸಕ್ರಿಯಗೊಳಿಸುತ್ತದೆ. ನೀವು ನಿಮ್ಮ ಇಂದಿನ ದಿನವನ್ನು ಉತ್ತಮಗೊಳಿಸಲು ಕಳೆದ ದಿನಗಳಲ್ಲಿ ಹಣವನ್ನು ಹೂಡಿಕೆ ಮಾಡಿದ್ದರೆ, ಅದರ ಪ್ರಯೋಜನವನ್ನು ಇಂದು ನೀವು ಪಡೆಯಬಹುದು. ನಿಮ್ಮ ಜ್ಞಾನ ಮತ್ತು ಒಳ್ಳೆಯ ಹಾಸ್ಯ ನಿಮ್ಮ ಬಳಿಯಿರುವ ಜನರನ್ನು ಆಕರ್ಷಿಸಬಹುದು. ನಿಮ್ಮ ಪ್ರೇಮಿಯನ್ನು ಭೇಟಿ ಮಾಡುತ್ತಿದ್ದ ಹಾಗೆ ನಿಮ್ಮ ಮನಸ್ಸನ್ನು ಪ್ರಣಯ ಆವರಿಸಿಕೊಳ್ಳುತ್ತದೆ.

### ಮಕರ ರಾಶಿ

ನಿಮ್ಮ ಚೈತನ್ಯವನ್ನು ಹೆಚ್ಚಿಸಲು ನಿಮ್ಮ ಮನಸ್ಸಿನಲ್ಲಿ ಒಂದು ಪ್ರಕಾಶಮಾನವಾದ ಸುಂದರವಾದ ಮತ್ತು ಅದ್ಭುತವಾದ ಚಿತ್ರವನ್ನು ಕಲ್ಪಿಸಿಕೊಳ್ಳಿ. ನೀವು ಇಂದು ಗಣನೀಯ ಪ್ರಮಾಣದ ಹಣವನ್ನು ಸಹ ಹೊಂದಿರುತ್ತೀರಿ ಮತ್ತು ಅದರೊಂದಿಗೆ ಮನಸ್ಸಿನ ಶಾಂತಿ ಇರುತ್ತದೆ. ನಿಮ್ಮ ಮಕ್ಕಳ ಜೊತೆ ಒಂದು ಆರರೋಗ್ಯಕರ ಸಂಬಂಧವನ್ನು ಉತ್ತೇಜಿಸಿ. ಕಳೆದದ್ದನ್ನು ಮರೆತುಬಿಡಿ ಹಾಗೂ ಪ್ರಖರವಾದ ಹಾಗೂ ಸಂತಸದ ಸಮಯಗಳನ್ನು ಎದುರುನೋಡಿ. ನಿಮ್ಮ ಪ್ರಯತ್ನ ಸಫಲವಾಗುತ್ತದೆ.

### ಕುಂಭ ರಾಶಿ

ನಿಮ್ಮ ಆಹಾರವನ್ನು ನಿಯಂತ್ರಣದಲ್ಲಿರಿಸಿಕೊಳ್ಳಿ ಮತ್ತು ಫಿಟ್ ಆಗಿ ಉಳಿಯಲು ವ್ಯಾಯಾಮ ಮಾಡಿ. ಹೆಚ್ಚು ಖರೀದಿಸಲು ಧಾವಿಸುವ ಮೊದಲು ನೀವು ಈಗಾಗಲೇಹೊಂದಿರುವುದನ್ನು ಬಳಸಿ. ಬಿಕ್ಕಟ್ಟಿನ ಸಮಯದಲ್ಲಿ ನಿಮಗೆ ಸಹಾಯ ಮಾಡಿದ ಸಂಬಂಧಿಗಳಿಗೆ ನಿಮ್ಮ ಕೃತಜ್ಞತೆಯನ್ನು ವ್ಯಕ್ತಪಡಿಸಿ. ನಿಮ್ಮ ಸಣ್ಣ ಕೃತಜ್ಞತೆ ಅವರಿಗೆ ಚೈತನ್ಯ ನೀಡುತ್ತದೆ. ಕೃತಜ್ಞತೆ ಜೀವನದ ಸೊಗಸನ್ನು ಹೆಚ್ಚಿಸುತ್ತದೆ ಮತ್ತು ಕೃತಘ್ನತೆ ಅದಕ್ಕೆ ಕಲೆಗಳನ್ನು ಹಚ್ಚುತ್ತದೆ.

### ಮೀನ ರಾಶಿ

ಸ್ನೇಹಿತರೊಂದಿಗಿನ ಸಂಜೆ ಆಹ್ಲಾದಕರವಾಗಿದ್ದರೂ ಆದರೆ ವಿಪರೀತವಾಗಿ ತಿನ್ನುವುದು ನಿಮ್ಮ ಮರುದಿನದ ಮುಂಜಾನೆಗೆ ಅಸಮಾಧಾನವುಂಟುಮಾಡಬಹುದು. ಹಣಕಾಸು ಸ್ಥಿತಿ ಊಹಾಪೋಹ ಅಥವಾ ಅನಿರೀಕ್ಷಿತ ಲಾಭದ ಮೂಲಕ ಸುಧಾರಿಸುತ್ತವೆ. ಮನರಂಜನೆ ಇಡೀ ಕುಟುಂಬವನ್ನು ಒಳಗೊಂಡಿದ್ದಲ್ಲಿ ಅದು ಮೋಜಿನ ವಿಷಯವಾಗಿರುತ್ತದೆ.

# ಗ್ರಾಮ ಪಂಚಾಯಿತಿ ನೌಕರರ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹ

**ದಾವಣಗೆರೆ:** ಗ್ರಾಮ ಪಂಚಾಯಿತಿ ನೌಕರರ ವಿವಿಧ ಬೇಡಿಕೆಗಳ ಈಡೇರಿಸುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ಗ್ರಾಮ ಪಂಚಾಯಿತಿ ನೌಕರರ ಸಂಘ, ಸಿಐಟಿಯು ಸಂಯೋಜಿತ ರಾಜ್ಯ ಸಮಿತಿ ವತಿಯಿಂದ ಡಿ.20ರಿಂದ ಬೆಂಗಳೂರಿನ ಫ್ರೀಡಂಪಾರ್ಕ್‌ನಲ್ಲಿ ಬೆಳಿಗ್ಗೆ 10 ಗಂಟೆಗೆ ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹ ನಡೆಸಲಾಗುವುದು ಎಂದು ಸಂಘದ ರಾಜ್ಯ ಉಪಾಧ್ಯಕ್ಷ ಆರ್.ಎಸ್.ಬಸವರಾಜ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗ್ರಾಮ ಪಂಚಾಯತಿಗಳಲ್ಲಿ ಕೆಲಸ ಮಾಡುತ್ತಿರುವ ಡಾಟಾ ಎಂಟ್ರಿ ಆಪರೇಟರ್, ನೀರುಗಂಟಿಗಳು, ಜವಾನ, ಸ್ವಚ್ಛತಾಗಾರರರನ್ನು ಏಕಕಾಲಕ್ಕೆ ಸರಕಾರಿ ನೌಕರರೆಂದು ಘೋಸಿಸಬೇಕು. ಇವತ್ತಿನ ಬೆಲೆ ಏರಿಕೆಯ ಆಧಾರದಲ್ಲಿ ಪಂಚಾಯತ ನೌಕರರಿಗೆ ರೂ.36000 ವೇತನ ನೀಡಬೇಕು. ಸೇವಾ ಹಿರಿತನ ಪರಿಗಣಿಸಿ ವೇತನ ಹೆಚ್ಚಳ ಮಾಡಬೇಕು. ಈಗಾಗಲೇ ಆರ್ಥಿಕ ಇಲಾಖೆಗೆ ಅನುಮೋದನೆಗಾಗಿ ಪ್ರಸ್ತಾವನೆ ಸಲ್ಲಿಸುವುದಕ್ಕೆ ಅನುಮೋದನೆ ಪಡೆಯಬೇಕು ಎಂದರು.

ಗ್ರಾಮ ಪಂಚಾಯತಗಳಲ್ಲಿ ಕೆಲಸ ನಿರ್ವಹಿಸುವ ನೌಕರರಿಗೆ ನಿವೃತ್ತಿ ಅಥವಾ ಮರಣ ಹೊಂದಿದರೆ ಅವರಿಗೆ ಪ್ರತಿ ತಿಂಗಳು ಕನಿಷ್ಠ ರೂ. 6000 ಪಿಂಚಣಿ ಅಥವಾ ಗ್ರಾಮ ಸೇವಕರಿಗೆ ನೀಡಿದಂತೆ ಪಂಚಾಯತ ನೌಕರರಿಗೂ ರೂ 10 ಲಕ್ಷ ಇಡಿಗಂಟು ನೀಡಬೇಕು. ತರಬೇತಿ ಪಡೆದಿರುವ ಎಲ್ಲಾ ಸ್ವಚ್ಛ ವಾಹಿನಿ ನೌಕರರಿಗೆ ಉದ್ಯೋಗ ನೀಡಬೇಕು. ಒಡಂಬಡಿಕೆ ಪತ್ರ ಮತ್ತು ಪ್ರತಿ ವರ್ಷದ ನವೀಕರಣ ಪದ್ಧತಿ ರದ್ದು ಪಡಿಸಬೇಕು. 15ನೇ ಹಣಕಾಸಿನಲ್ಲಿ ವೇತನ ಪಾವತಿ ಮಾಡಬೇಕು. ಪ್ರತಿಯೊಂದು ಪಂಚಾಯತಗೆ ಒಬ್ಬರೇ ಚಾಲಕರೆಂದು ಪರಿಗಣಿಸಿ ರೂ.15000 ವೇತನ ನೀಡಬೇಕು ಎಂದು ಒತ್ತಾಯಿಸಿದರು.

1 ಲಕ್ಷ 20 ಸಾವಿರ ರೂ. ಆದಾಯ ಇರುವ ನೌಕರರ ಮತ್ತು ಕಾರ್ಮಿಕರ ಪಡಿತರ ಚೀಟಿಯನ್ನು ರದ್ದುಪಡಿಸದೇ ಆದಾಯದ ಮಿತಿಯನ್ನು ತಾವು ನಿಗದಿ ಮಾಡುತ್ತಿರುವ ಕನಿಷ್ಠ ವೇತನವನ್ನು ಮಾನದಂಡವಾಗಿಟ್ಟುಕೊಂಡು ಆದಾಯದ ಮಿತಿಯನ್ನು ಹೆಚ್ಚಿಸಬೇಕು.

ಗ್ರಾಮ ಪಂಚಾಯತಿಗಳಿಗೆ ಎರಡನೇ ಡಾಟಾ ಎಂಟ್ರಿ ಆಪರೇಟರ್ ಹುದ್ದೆಗೆ ಅವಕಾಶ ನೀಡಿದ್ದು, ಸ್ವಾಗತ ಆದರೆ ಈಗಾಗಲೇ ಗ್ರಾಮ ಪಂಚಾಯತಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಡಾಟಾ ಎಂಟ್ರಿ ಆಪರೇಟಗಳನ್ನು ನೇಮಕ ಮಾಡಿಕೊಂಡು ಮುಂದುವರೆಸಬೇಕು. ಅಲ್ಲದೆ ಈಗಾಗಲೇ ಗ್ರಾಮ ಪಂಚಾಯತಗಳಲ್ಲಿ ಕೆಲಸ ನಿರ್ವಹಿಸುವ ನೌಕರರು ಕಂಪ್ಯೂಟರ್ ಜ್ಞಾನ ಹಾಗೂ ವಿದ್ಯಾರ್ಹತೆ ಹೊಂದಿದ್ದರೆ ಅವರಿಗೆ ಅವಕಾಶ ನೀಡಬೇಕು ಸೇರಿದಂತೆ ಹಲವು ಬೇಡಿಕೆ ಈಡೇರಿಕೆಗಾಗಿ ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹ ನಡೆಸಲಾಗುವುದು ಇದಕ್ಕೂ ಸರ್ಕಾರ ಬಗ್ಗದಿದ್ದರೆ ಸಿಎಂ ಮನೆ ಮುತ್ತಿಗೆ ಹಾಕಲಾಗುವುದು ಎಂದು ಹೇಳಿದರು.

# ಕೃಷಿಕ ಸಮಾಜದಿಂದ ಅಭಿನಂದನೆ



**ಶಿವಮೊಗ್ಗ:** ಶಿವಮೊಗ್ಗ ಜಿಲ್ಲಾ ಕೃಷಿಕ ಸಮಾಜ ಕಾರ್ಯಕಾರಿ ಸಮಿತಿಯ ಸಭೆಯನ್ನು ಹೆಚ್ ಎನ್ ನಾಗರಾಜ್ ಇವರ ಅಧ್ಯಕ್ಷತೆಯಲ್ಲಿ ಡಿ.10 ರಂದು ನಡೆಯಿತು.

ಈ ಸಭೆಯಲ್ಲಿ ನೂತನವಾಗಿ ಕರ್ನಾಟಕ ಪ್ರದೇಶ ಕೃಷಿಕ ಸಮಾಜದ ಆಡಳಿತ ಅಧ್ಯಕ್ಷರಾಗಿ ನೇಮಕಗೊಂಡಿರುವ ನಗರದ ಮಹಾದೇವಪ್ಪನವರನ್ನು ಹಾಗೂ ಜಾನಪದ ಕ್ಷೇತ್ರದಲ್ಲಿ ರಾಜ್ಯೋತ್ಸವ ಪ್ರಶಸ್ತಿ ಪಡೆದ ಟಾಕಪ್ಪರವರನ್ನು ಅಭಿನಂದಿಸಿ ಸನ್ಮಾನಿಸಲಾಯಿತು.

ಈ ಸಭೆಯಲ್ಲಿ ಶಿವಮೊಗ್ಗ ಜಿಲ್ಲಾ ಕೃಷಿಕ ಸಮಾಜದ ಅಧ್ಯಕ್ಷರಾದ ಹೆಚ್ ಎನ್ ನಾಗರಾಜ್ ಉಪಾಧ್ಯಕ್ಷರಾದ ಎನ್ ಉಮೇಶ್ ಪಾಟೀಲ್, ವಿ.ಜಿ ಶ್ರೀಧರ್, ಹೊಸಮನೆ ಸತೀಶ್, ನಿರ್ದೇಶಕರಾದ ಕೆ.ಎಸ್ ಚಂದ್ರಶೇಖರ,

ಕಸ್ತೂರ, ಮಂಜುನಾಥ ದೇವರಾಜ ಪಾಟೀಲ್, ಸುರೇಶ್ ವಾಟಗೋಡ್, ಎ.ವಿ ಮಲ್ಲಿಕಾರ್ಜುನ, ಸುರೇಶ್ ಗೌಡ್ರು, ಬಿ ನಾಗರಾಜ, ಹುಲ್ಮಾರ್ ಮಹೇಶ್ ಮೋಹನಕುಮಾರ, ಶಿವಕುಮಾರ, ಮಲ್ಲಿಕಾರ್ಜುನ ಗುತ್ತೇರ್ ಮತ್ತು ಜಂಟಿ ಕೃಷಿ ನಿರ್ದೇಶಕರು ಹಾಗೂ ಜಿಲ್ಲಾ ಮಟ್ಟದ ಇಲಾಖಾಧಿಕಾರಿಗಳು ಹಾಜರಿದ್ದರು.

# ರಸ್ತೆ ಅಗಲೀಕರಣ ಕಾಮಗಾರಿಯಲ್ಲಿ ಯಾವುದೇ ಕಳಪೆಯಾಗಿಲ್ಲ



**ಹೊನ್ನಾಳಿ** : ಗದಗ್-ಹೊನ್ನಾಳಿ ರಸ್ತೆ ಅಗಲೀಕರಣ ಕಾಮಗಾರಿಯಲ್ಲಿ ಯಾವುದೇ ಕಳಪೆಯಾಗಿಲ್ಲ,ಕಳಪೆಯಾಗುವ ುದಕ್ಕೆ ನಮ್ಮ ಸರಕಾರ ಬಿಡುವುದಿಲ್ಲ ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ಅವರು ಮಾಡಿರುವ ಆರೋಪ ನಿರಾಧಾರ ಎಂದು ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿ ಅಧ್ಯಕ್ಷ ಎಚ್.ಬಿ.ಮಂಜಪ್ಪ ಸ್ಪಷ್ಟಪಡಿಸಿದರು.

ಮಂಗಳವಾರ ಸುದ್ಧಿಗೋಷ್ಠಿಯಲ್ಲಿ ಅವರು ಮಾತನಾಡಿದರು.

ತನ್ನ ಪ್ರಚಾರಕ್ಕಾಗಿ ಗದಗ್-ಹೊನ್ನಾಳಿ ರಸ್ತೆ ಅಗಲೀಕರಣ ವಿಚಾರವಾಗಿ ಸುಳ್ಳು ಆರೋಪ ಮಾಡುತ್ತಿದ್ದಾರೆ ಸುಳ್ಳು ಆರೋಪಗಳನ್ನು ಕೈಬಿಡದಿದ್ದರೆ ಮುಂದಿನ ದಿನಗಳಲ್ಲಿ ಕಾಂಗ್ರೆಸ್ ಕಾರ್ಯಕರ್ತರು ತಕ್ಕಪಾಠ ಕಲಿಸಲಿದ್ದಾರೆಎಲ್ಲೂ ಸಹ ರಸ್ತೆ ಅಗಲೀಕರಣ ಕಾಮಗಾರಿಯಲ್ಲಿ ಒಂದಿಂಚು ಕಳಪೆಯಾಗಿಲ್ಲ ಎಂದು ತಿಳಿಸಿದರು.

ತಾಲೂಕಿನ ಅರಬಗಟ್ಟೆ ಗೋಮಾಳಾದಲ್ಲಿ ಸೋಲಾರ್ ಅಳವಡಿಕೆ ವಿಚಾರದಲ್ಲೂ ಸುಮ್ಮನೆ ಹೋಗಿ ಗದ್ದಲ್ಲ ಎಬ್ಬಿಸಿ, ರೈತರ ಪರ ಹೋರಾಟ ಮಾಡುವಂತೆ ಬಿಂಬಿಸಿ ತಮ್ಮ ಮನೆಗೆ ಗಿಫ್ಟ್ ಬಂದ ನಂತರ ನಾಪತ್ತೆಯಾದರು, ಕೊನೆಯವರೆವಿಗೂ ರೈತರ ಪರವಾಗಿ ನಿಲ್ಲಲಿಲ್ಲ ಇಂತಹವರು ರೈತರ ಪರ ಎಂದು ಬಿಂಬಿಸಿಕೊಳ್ಳುಲ್ಲು ಹೊರಟಿದ್ದಾರೆ ಎಂದ ಅವರ ಗದಗ್-ಹೊನ್ನಾಳಿ ರಸ್ತೆ ಅಗಲೀಕರಣ ಕಾಮಗಾರಿಯಲ್ಲಿ ಇದೇ ಹಾಗಿರುವುದು ವಿರುದ್ಧ ಟೀಕಿಸಿದರು.


ತಾಲೂಕಿನ ಗೊಲ್ಲರಹಳ್ಳಿಯಿಂದ ಎಚ್. ಕಡದಕಟ್ಟೆ ವೃತ್ತದವರೆಗೆ ಅಳವಡಿಸಿರುವ ಅಲಂಕಾರಿಕ ದೀಪಗಳು ಅಳವಡಿಸಿ ಈಗಲು ಸಾರ್ವಜನಿಕ ಸೇವೆಗೆ ಲಭ್ಯವಾಗಿಲ್ಲ ಅಷ್ಟೂ ಕಳಪೆಯಾಗಿದೆ, ಅಲಂಕಾರಿಕ ದೀಪಗಳನ್ನು ಅಳವಡಿಸಿರುವ ಗುತ್ತಿಗೆದಾರನನ್ನು ಸಂಪರ್ಕಿಸಿದರೆ ನಾನೇನು ಮಾಡಲಿಕ್ಕೆ ಆಗಲ,ಅನ್ನುತ್ತಾನೆ,ಈ ಪುಣ್ಯಾತ್ಮನ ಅಧಿಕಾರವಧಿಯಲ್ಲೇ ಅಲಂಕಾರಿಕ ದೀಪಗಳನ್ನು ಅಳವಡಿಸಿದ್ದು ಎಂದು ಆರೋಪಿಸಿದರು.

ಆಗುತ್ತಿರುವ ಕಾಮಗಾರಿಗಳಿಗೆ ಅಡ್ಡಗಾಲು ಹಾಕುವುದೇ ಈ ಮಾಜಿ ಸಚಿವರ ಕೆಲಸವಾಗಿದೆ,ಈಗಲಾದರು ಎಚ್ಚೆತ್ತುಕೊಂಡು ಸುಮ್ಮನಿದ್ದರೆ ಸರಿ,ಇಲ್ಲವಾದರೆ ನಾನು ನಮ್ಮ ಕಾರ್ಯಕರ್ತರ ಜೊತೆಗೆ ನಿಮ್ಮ ವಿರುದ್ಧ ಪ್ರತಿಭಟನೆ ಮಾಡಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ನಾನು ಎಂಎಲ್‌ಎ ಆಗೇ ಆಗುತ್ತೇನೆ ; ನಾನು ಹೊನ್ನಾಳಿ ಕ್ಷೇತ್ರದ ಶಾಸಕ ಆಗೇ ಆಗುತ್ತೇನೆ,ಹೊನ್ನಾಳಿ ಪಟ್ಟಣದಲ್ಲಿ ನನ್ನದೇ ಆದ ಕಲ್ಪನೆ ಇದೆ, ಅದನ್ನೆಲ್ಲ ಮಾಡಿ ಸುಂದರ ಪಟ್ಟಣವನ್ನಾಗಿ ಮಾಡೇ ಮಾಡುತ್ತೇನೆ ಎಂದರು.

ನೆಲಹೊನ್ನೆ ಮೋಹನ್,ಎಚ್.ಎ.ನರಸಿಂಹಪ್ಪ,ಎಚ್.ಬಿ.ಅಣ್ಣಪ್ಪ,ಕೆ.ವಿ.ಪುಟ್ಟಪ್ಪ,ರೇವಣಸಿದ್ದಪ್ಪಮೂಲಿಮನೆ,ಸರಳಿಮನೆ ರಾಜು, ಮಾದಪ್ಪ,ಹಾಗೂ ಇತರರು ಇದ್ದರು.

# ಶ್ರೀ ಆಂಜನೇಯಸ್ವಾಮಿ ಕಾರ್ತೀಕ ದೀಪೋತ್ಸವ



**ನ್ಯಾಮತಿ** : ನ್ಯಾಮತಿ ತಾಲೂಕಿನ ಒಡೆಯಹತ್ತೂರು ಗ್ರಾಮದ ಶ್ರೀ ಬಸವೇಶ್ವರ ಸ್ವಾಮಿ , ಶ್ರೀ ಆಂಜನೇಯಸ್ವಾಮಿ ಕಾರ್ತೀಕ ದೀಪೋತ್ಸವ ಮತ್ತು ಶ್ರೀ ಆಂಜನೇಯಸ್ವಾಮಿ ಉತ್ಸವ ಮೂರ್ತಿಯ ಮೆರವಣಿಗೆ ಮಂಗಳವಾರ ವಿಜೃಂಭಣೆಯಿಂದ ಜರುಗಿತು. ನ್ಯಾಮತಿ ತಾಲೂಕಿನ ಒಡೆಯಹತ್ತೂರು ಗ್ರಾಮದ ಶ್ರೀ ಬಸವೇಶ್ವರ ಸ್ವಾಮಿ , ಶ್ರೀ ಆಂಜನೇಯಸ್ವಾಮಿ ಕಾರ್ತೀಕ ದೀಪೋತ್ಸವ ಮತ್ತು ಶ್ರೀ ಆಂಜನೇಯಸ್ವಾಮಿ ಉತ್ಸವ ಮೂರ್ತಿಯ ಮೆರವಣಿಗೆ ಅಂಗವಾಗಿ ಸೋಮವಾರ ಕದಳಿ ಕಾರ್ತೀಕ ದೀಪೋತ್ಸವ ಮಾಡಿರುವುದು.

ಕಡೇ ಕಾರ್ತಿಕದ ಕಾರ್ತೀಕ ದೀಪೋತ್ಸವ ಪ್ರಯುಕ್ತ ಸೋಮವಾರ ಬೆಳಗಿನಿಂದಲೇ ಶ್ರೀ ಬಸವೇಶ್ವರ ಸ್ವಾಮಿ , ಶ್ರೀ ಆಂಜನೇಯಸ್ವಾಮಿ ವಿಗ್ರಹ ಮತ್ತು ಶ್ರೀ ಚನ್ನಪ್ಪಸ್ವಾಮೀಜಿಯ ಗದ್ದುಗೆ ಪಂಚಾಮೃತ ಅಭಿಷೇಕ , ರುದ್ರಾಭಿಷೇಕ, ಅರ್ಚನೆ, ಸ್ತೋತ್ರಪಠಣ ಮುಂತಾದ ಧಾರ್ಮಿಕ ಕೈಂಕರ್ಯದ ಮಹಾಮಂಗಳಾರತಿ ಮಾಡಲಾಯಿತು. ಸ್ವಾಮಿಯ ಮೂರ್ತಿಯನ್ನು ವಿಶೇಷವಾಗಿ ಅಲಂಕರಿಸಲಾಗಿತ್ತು. ದೇಗುಲದ ಆವರಣದಲ್ಲಿ ಪ್ರಾಖಾರೋತ್ಸವ ಭಜನಾ ಕಾರ್ಯಕ್ರಮಗಳು ಮಂಗಳವಾರದ ಬೆಳಗ್ಗಿನಜಾವದವರೆಗೆ ನಡೆದು ಶ್ರೀ ಆಂಜನೇಯಸ್ವಾಮಿ ಉತ್ಸವ ಮೂರ್ತಿಯ ಮೆರವಣಿಗೆಯು ಗ್ರಾಮದ ಪ್ರಮುಖ ಬೀದಿಗಳಲ್ಲಿ ನಡೆಯಿತು.

ಶ್ರೀ ಆಂಜನೇಯಸ್ವಾಮಿ ಉತ್ಸವ ಮೂರ್ತಿಯ ಮೆರವಣಿಗೆ ವೀಕ್ಷಿಸಲು ಸುತ್ತಮುತ್ತಲಿನ ಹಳ್ಳಿಯ ನೂರಾರು ಭಕ್ತರು ಆಗಮಿಸಿದ್ದರು. ಶ್ರೀ ಆಂಜನೇಯಸ್ವಾಮಿ ಉತ್ಸವ ಮೂರ್ತಿಯ ಉತ್ಸವ , ಭೂತಗಣಮಕ್ಕಳು ಮಣಿವು ಆಡುವುದರ ಮೂಲಕ ಕಾರ್ತೀಕ ದೀಪೋತ್ಸವಕ್ಕೆ ತೆರೆ ಎಳೆಲಾಯಿತು.

# ಮೆಸ್ಕಾಂ ಜನ ಸಂಪರ್ಕ ಸಭೆ

**ಶಿವಮೊಗ್ಗ:** ಶಿವಮೊಗ್ಗ ಮೆಸ್ಕಾಂ ಗ್ರಾಮೀಣ ಉಪವಿಭಾಗ, ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಕಛೇರಿ, ಪಾಲನೆ ಮತ್ತುನಿರ್ವಹಣೆ ಗ್ರಾಮೀಣ ಉಪವಿಭಾಗ, ಬಾಲರಾಜ್ ಅರಸ್ ರಸ್ತೆ, ರೈಲ್ವೆ ಸ್ಟೇಷನ್ ಹತ್ತಿರ ಇಲ್ಲಿ ಇಂದು ಬೆಳಿಗ್ಗೆ 11.00 ರಿಂದ 01.00 ಗಂಟೆಯವರೆಗೆ ಜನಸಂಪರ್ಕ ಸಭೆ ನಡೆಯಲಿದೆ. ಈ ಸಭೆಯಲ್ಲಿ ಮೆಸ್ಕಾಂನ ಅಧಿಕಾರಿಗಳು ಭಾಗವಹಿಸಲಿದ್ದು, ಸಂಬಂಧಪಟ್ಟ ಪ್ರದೇಶದ ಗ್ರಾಹಕರ ಅಹವಾಲುಗಳನ್ನು ಸ್ವೀಕರಿಸುವುದರಿಂದ ಈ ಅವಕಾಶವನ್ನು ಗ್ರಾಹಕರು ಸದುಪಯೋಗಪಡಿಸಿಕೊಳ್ಳುವಂತೆ ಮೆಸ್ಕಾಂ ಪ್ರಕಟಣೆ ತಿಳಿಸಿದೆ.

# ರಕ್ತದಾನವೇ ಶ್ರೇಷ್ಟ ದಾನವಾಗಿದೆ



**ಶಿವಮೊಗ್ಗ:** ಮುಂದಿನ ದಿನಗಳಲ್ಲಿ ಯುವಕರು ರಕ್ತದಾನ ಮಾಡಲು ಕೂಡ ಅರ್ಹರರಾಗಿರುತ್ತಾರೆಯೇ ಎಂಬ ಪ್ರಶ್ನೆ ನಮ್ಮ ಮುಂದೆ ಇದೆ ಎಂದು ಬಾಪೂಜಿ ಶಿಕ್ಷಣ ಸಮೂಹ ಸಂಸ್ಥೆಗಳ ಅಧ್ಯಕ್ಷ ಎಂ.ವಿ.ಪಿ. ಆರಾಧ್ಯ ಹೇಳಿದರು.

ಅವರು ಇಂದು ಬಾಪೂಜಿ ಶಿಕ್ಷಣ ಸಮೂಹ ಸಂಸ್ಥೆಗಳು, ಶಿವಮೊಗ್ಗ ಜಿಲ್ಲಾ ಪೊಲೀಸ್, ರೋಟರಿ ರಕ್ತ ಕೇಂದ್ರ, ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಬಿಸಿ ಟ್ರಸ್ಟ್ ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ರಕ್ತದಾನ ಶಿಬಿರ ಹಾಗೂ ಉಚಿತ ಆರೋಗ್ಯ ಶಿಬಿರದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಯುವಕರು ಆರೋಗ್ಯವಂತರಾಗಿದ್ದಾಗ ಮಾತ್ರ ರಕ್ತದಾನ ಮಾಡಲು ಅರ್ಹರಾಗಿರುತ್ತಾರೆ. ಆದರೆ, ಯುವಕರು ಇತ್ತೀಚೆಗೆ ಗಾಂಜಾ ಸೇರಿದಂತೆ ಮಾದಕ ವಸ್ತುಗಳಿಗೆ ಬಲಿಯಾಗುತ್ತಿದ್ದಾರೆ. ಇದರಿಂದ ಆರೋಗ್ಯ ಹಾಳು ಮಾಡಿಕೊಳ್ಳುತ್ತಿದ್ದಾರೆ. ಇವರು ಹೇಗೆ ರಕ್ತದಾನ ಮಾಡಲು ಸಾಧ್ಯ. ಹಾಗಾಗಿ ಮುಂದಿನ ದಿನಗಳಲ್ಲಿ ರಕ್ತದಾನ ಶಿಬಿರಗಳಲ್ಲಿ ರಕ್ತದಾನ ಮಾಡುವವರ ಸಂಖ್ಯೆಯ ಕಡಿಮೆಯಾಗಬಹುದು. ಹಾಗಾಗಿ ಯುವಕರು ಮೊದಲು ತಮ್ಮ ಆರೋಗ್ಯದ ಕಡೆ ಗಮನಹರಿಸಬೇಕು ಎಂದು ಕರೆ ನೀಡಿದರು.

ರಕ್ತವು ಜೀವ ದ್ರವ್ಯವಾಗಿ ಪ್ರಾಣ ಉಳಿಸುತ್ತದೆ. ರಕ್ತದಾನ ಮಾಡುವವರು ಭಯಪಡಬೇಕಾದ ಅವಶ್ಯಕತೆ ಇಲ್ಲ. ಇದರಿಂದ ಆರೋಗ್ಯ ಕೂಡ ಸುಧಾರಿತವಾಗುತ್ತದೆ. ನಮ್ಮ ಸಂಸ್ಥೆಯಲ್ಲಿ ಬಹಳಷ್ಟು ವಿದ್ಯಾರ್ಥಿಗಳು ರಕ್ತದಾನ ಮಾಡಿ ಜೀವ ಉಳಿಸಲು ಕಾರಣರಾಗಿದ್ದಾರೆ ಎಂದರು.

ಮಾಜಿ ಸಚಿವ ಎಂ.ಪಿ. ರೇಣುಕಾಚಾರ್ಯ ಮಾತನಾಡಿ, ನಾವು ಏನು ಬೇಕಾದರೂ ಸಂಪಾದಿಸಬಹುದು. ಆರೋಗ್ಯ ಸಂಪಾದನೆ ಮಾಡಲು ಬಹಳ ಕಷ್ಟ. ಆರೋಗ್ಯವೇ ಭಾಗ್ಯ ಎಂಬುದನ್ನು ತಿಳಿಯಬೇಕು. ಬಾಪೂಜಿ ಶಿಕ್ಷಣ ಸಮೂಹ ಸಂಸ್ಥೆಯು ಪೊಲೀಸ್ ಇಲಾಖೆ ಹಾಗೂ ರೋಟರಿ ಸಂಸ್ಥೆ ಮತ್ತು ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಸಹಕಾರದಲ್ಲಿ ಮಹತ್ವದ ರಕ್ತದಾನ ಶಿಬಿರ ಏರ್ಪಡಿಸಿದೆ. ಇದು ಪುಣ್ಯದ ಕೆಲಸ ಎಂದರು.

ಕಾರ್ಯಕ್ರಮದಲ್ಲಿ ಕೆ.ಎಸ್.ಆರ್.ಪಿ. ಅಸಿಸ್ಟೆಂಟ್ ಕಮಾಂಡೆಂಟ್ ರಾಚಪ್ಪ ಕಾಜಗಾರ, ಭದ್ರಾವತಿ ಸಂಚಾರಿ ಪೊಲೀಸ್ ಠಾಣೆಯ ಹಾಲೇಶಪ್ಪ ರಕ್ತದಾನ ಮಾಡುವುದರ ಮೂಲಕ ಶಿಬಿರಕ್ಕೆ ಚಾಲನೆ ನೀಡಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಂಶುಪಾಲರಾದ ಡಾ. ಕವಿತಾ ಎಸ್.ಡಿ., ಡಾ. ಶೀಲಾ, ಡಾ. ನಿರಂಜನ್, ರೋಟರಿ ಬ್ಲಡ್ ಬ್ಯಾಂಕ್ ಪಿ.ಆರ್.ಒ. ಡಾ. ಆನಂದ್, ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಟ್ರಸ್ಟ್ ರಾಘವೇಂದ್ರ ಆಚಾರ್, ಅನ್ನಪೂರ್ಣ, ಮಧು ಹೆಚ್.ಕೆ., ಸೇರಿದಂತೆ ಹಲವರಿದ್ದರು.

ಅನಾ ವಿಜಯೇಂದ್ರ ಕಾರ್ಯಕ್ರಮ ನಿರೂಪಿಸಿದರು. ಅನ್ನಪೂರ್ಣ ಪ್ರಾರ್ಥಿಸಿ ಸ್ವರ್ಣ ಶ್ರೀ ಸ್ವಾಗತಿಸಿದರು. ಸಿಂಚನಾ ವಂದಿಸಿದರು.

# ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರಿಗೆ ಸಹ ಪಠ್ಯತೇರ ಚಟುವಟಿಕೆಗಳ ಕಾರ್ಯಕ್ರಮ



**ಚನ್ನಗಿರಿ** : ಸ್ಪರ್ಧಾತ್ಮಕ ಪ್ರಪಂಚದಲ್ಲಿ ಎಲ್ಲಾ ಕ್ಷೇತ್ರಗಳಲ್ಲಯೂ ಸ್ಪರ್ಧೆ ಇದ್ದು ಅದರ ವೇಗವನ್ನು ಕಾಪಾಡಿಕೊಳ್ಳಬೇಕು ಎಂದು ಬಿ.ಇ.ಓ. ಜಯಪ್ಪ ಹೇಳಿದರು.

ಮಂಗಳವಾರ ಪಟ್ಟಣದ ಸರಕಾರಿ ಜೂನಿಯರ್ ಕಾಲೇಜು ಪ್ರೌಢಶಾಲಾ ವಿಬಾಗದಲ್ಲಿ ಶಿಕ್ಷಕ್ಷರ ಕಲ್ಯಾಣ ನಿಧಿಯಿಂದ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರಿಗೆ ಸಹಪಠ್ಯತೇರ ಚಟುವಟಿಕೆಗಳ ಕುರಿತು ಹಮ್ಮಿಕೊಳ್ಳಲಾಗಿದ್ದ ವಿವಿಧ ಸ್ಪರ್ಧೆಗಳ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ ಶಿಕ್ಷಕರು ಹೊಸ ಪ್ರಪಂಚವನ್ನು ಮತ್ತು ಮಕ್ಕಳಿಗೆ ಜ್ಞಾನನೀಡುವಂತಹ ಶಕ್ತಿ ಇರುವ ಶಿಕ್ಷಕರು ಸೃಜನಶೀಲತೆ ಬಹುಮುಖ ವ್ಯಕ್ತಿತ್ವ, ಸೇವಾಮನೋಬಾವ ಹೊಂದಿರಬೇಕು ಎಂದರು.ಇದರಿಂದ ಸಾಕಷ್ಟು ಬದಲಾವಣೆಯನ್ನು ಸಹ ತರಬಹುದಾಗಿದೆ. ಶಿಕ್ಷಕರು ಇಂತಹ ಕಾರ್ಯಕ್ರಮಗಳಲ್ಲಿ ಹೆಚ್ಚು ಹೆಚ್ಚು ಬಾಗವಹಿಸಿ ತಾಲೂಕು,ಜಿಲ್ಲಾ ಹಂತ ಮತ್ತು ರಾಜ್ಯಮಟ್ಟಗಳಲ್ಲಿ ಬಾಗವಹಿಸಬೇಕು. ಶೈಕ್ಷಣಿಕ ಪ್ರಗತಿ ಚನ್ನಾಗಿರಬೇಕಾದರೆ ಶಿಕ್ಷಕರು ಪ್ರತಿದಿನವೂ ವಿದ್ಯಾರ್ಥಿಗಳು ಆಗಬೇಕು ಎಂದರು. ಕ್ಷೇತ್ರ ಸಮನ್ವಯಾಧಿಕಾರಿ ಡಾ.ಎಸ್.ಶಂಕರಪ್ಪ ಮಾತನಾಡಿ ಶಿಕ್ಷಕರಲ್ಲಿ ಸಾಕಷ್ಟು ಪ್ರತಿಭೆಗಳಿದ್ದು ಇಂತಹ ಕಾರ್ಯಕ್ರಮದಲ್ಲಿ ಸ್ಪರ್ಧೆಯಲ್ಲಿ ಬಾಗವಹಿಸಬೇಕು. ಶಿಕ್ಷಣ ಇಲಾಖೆ ಶಿಕ್ಷಕರನ್ನು ಸದಾಕ್ರಿಯಾಶೀಲರನ್ನಾಗಿಸುವ ಉದ್ದೇಶದಿಂದ ಇಂತಹ ಸಾಕಷ್ಟು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದೆ ಎಂದರು.

ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ಅಧ್ಯಕ್ಷ ಗಣೇಶ್ ಮಾತನಾಡಿ ಶಿಕ್ಷಕರ ಶ್ರೇಯೋಭಿವೃದ್ದಿಗಾಗಿ ಶಿಕ್ಷಕರ ಸಂಘ ಮತ್ತು ಕಲ್ಯಾಣ ನಿಧಿಗಳನ್ನು ಸ್ಥಾಪನೆ ಮಾಡಲಾಗಿದ್ದು ಶಿಕ್ಷಕರು ಸದ್ಬಳಕೆ ಮಾಡಿಕೊಳ್ಳಬೇಕು.ಪ್ರತಿದಿನವೂ ಪಾಠ ಪ್ರವಚನಗಳಲ್ಲಿ ತೊಡಗಿರುವಂತಹ ಶಿಕ್ಷಕರಿಗೆ ಇಂತಹ ಕಾರ್ಯಕ್ರಮಗಳನ್ನು ಚೈತನ್ಯವನ್ನು ನೀಡುತ್ತವೆ ಎಂದರು. ಈ ಸಂದರ್ಭದಲ್ಲಿ ಶಿಕ್ಷಕರ ಸಂಘದ ರಾಜ್ಯ ಪರಿಷತ್ ಸದಸ್ಯ ತಿಪ್ಪೇಶಪ್ಪ, ಶಿಕ್ಷಕರ ಸಂಘದ ಅಧ್ಯಕ್ಷ ಜಯಪ್ರಕಾಶ್, ಮುಖ್ಯೋಪದ್ಯಾಯರಾದ ಹಾಲಸಿದ್ದಪ್ಪ, ಎಂ.ಆರ್. ಸಂತೋಷ್‌ಕುಮಾರ್ ಸೇರಿದಂತೆ ಇತರರು ಹಾಜರಿದ್ದರು.

# ನಿಧನ ಸುದ್ದಿಗಳು

### ಸೋಮಶೇಖರ ನಿಧನ

**ನ್ಯಾಮತಿ:** ಪಟ್ಟಣದ ಗಾಂಧಿ ರಸ್ತೆಸಮೀಪದ ನಿವಾಸಿ, ಚಹಾ ವ್ಯಾಪಾರಿ ಮೆರವಣಿಗೆ ಸೋಮಶೇಖರ (67) ಮಂಗಳವಾರ ನಿಧನರಾದರು. ಇವರಿಗೆ ಪತ್ನಿ, ಪುತ್ರ ಇದ್ದಾರೆ. ಅಂತ್ಯಕ್ರಿಯೆ ನಡೆಯಿತು.

### ಹನುಮಂತ ರಾವ್ ನಿಧನ

**ತ್ಯಾವಣಿಗೆ:** ಸಮೀಪದ ನವಿಲೇಹಾಳ್ ಗ್ರಾಮದ ಹನುಮಂತ (78) ಮಂಗಳವಾರ ನಿಧನರಾದರು. ಇವರು 20 ವರ್ಷ 'ಪ್ರಜಾವಾಣಿ' ದಿನಪತ್ರಿಕೆ ವಿತರಕರಾಗಿ ಕರ್ತವ್ಯ ನಿರ್ವಹಿಸಿದ್ದರು. ಇವರಿಗೆ ಪತ್ನಿ ಇದ್ದಾರೆ. ಬುಧವಾರ ಮಧ್ಯಾಹ್ನ 1 ಗಂಟೆಗೆ ಅಂತ್ಯಕ್ರಿಯೆ ನಡೆದಿದೆ ಎಂದು ಕುಟುಂಬದವರು ತಿಳಿಸಿದ್ದಾರೆ.

### ಶಂಕರ್ ರಾವ್ ಪವಾರ್ (ಪಿಳ್ಳಿ) ನಿಧನ

**ದಾವಣಗೆರೆ** : ಕೊಂಡಜ್ಜಿ ರಸ್ತೆ, ವಿಜಯ ನಗರ ಬಡಾವಣೆ 2ನೇ ಕ್ರಾಸ್ ವಾಸಿ ಶಂಕರ್ ರಾವ್ ಪವಾರ್ (ಪಿಳ್ಳಿ) 58 ಇವರು ದಿನಾಂಕ 16.12.2025ರ ಮಂಗಳವಾರ ನಿಧನರಾದರು. ಪತ್ನಿ, ಓರ್ವ ಪುತ್ರ, ಓರ್ವ ಪುತ್ರಿ ಹಾಗೂ ಅಪಾರ ಬಂಧು – ಬಳಗವನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯು ದಿನಾಂಕ 17.12.2025ರ ಬುಧವಾರ ಮಧ್ಯಾಹ್ನ 1 ಗಂಟೆಗೆ ಬೂದಾಳ್ ರಸ್ತೆಯಲ್ಲಿರುವ ಸಾರ್ವಜನಿಕ ಹಿಂದೂ ರುದ್ರಭೂಮಿಯಲ್ಲಿ ನೆರವೇರಿದೆ.

### ಮುರುಳಿಧರನ್ ಎಂ. ನಿಧನ

**ದಾವಣಗೆರೆ** : ಸಿಟಿ, ಕೆ.ಬಿ. ಬಡಾವಣೆ: ಕಾವೇರಮ್ಮ ಸ್ಕೂಲ್ ಹಿಂಭಾಗದ ವಾಸಿ ಮುರುಳಿಧರನ್ ಎಂ. (74) ಅವರು ದಿನಾಂಕ : 15.12.2025ರ ಸೋಮವಾರ ಸಂಜೆ 6.50ಕ್ಕೆ ನಿಧನರಾದರು. ಪತ್ನಿ, ಓರ್ವ ಪುತ್ರ, ಓರ್ವ ಪುತ್ರಿ, ಅಳಿಯ, ಸೊಸೆ, ।ಮೊಮ್ಮಕ್ಕಳು ಹಾಗೂ ಅಪಾರ ಬಂಧು-ಬಳಗವನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯು ದಿನಾಂಕ : 17.12.2025 ರ ಬುಧವಾರ ಬೆಳಿಗ್ಗೆ 10.30ಕ್ಕೆ ಆರ್.ಹೆಚ್. ಬೃಂದಾವನದಲ್ಲಿ ನೆರವೇರಿದೆ.

ಆದಿವಾಸಿ ಮ್ಯಾಸ ನಾಯಕರ ಚಿನ್ನಹಗರಿ ಉತ್ಸವ ಅಂಗವಾಗಿ

# ಇಂದು ಚಿತ್ರದುರ್ಗದ ರಾಜವೀರ ಮದಕರಿ ನಾಯಕ ಪ್ರತಿಮೆ ಬಳಿ ಉತ್ಸವದ ಪೋಸ್ಟರ್ ಬಿಡುಗಡೆ




**ಚಿತ್ರದುರ್ಗ**: ಆದಿವಾಸಿ ಮ್ಯಾಸ ನಾಯಕರ ಚಿನ್ನಹಗರಿ ಉತ್ಸವ–2026ರ ಅಂಗವಾಗಿ ಇದೇ ಡಿ.18ರಂದು ಚಿತ್ರದುರ್ಗ ನಗರದ ರಾಜವೀರ ಮದಕರಿ ನಾಯಕರ ಪ್ರತಿಭೆ ಬಳಿ ಉತ್ಸವದ ಪೋಸ್ಟರ್ ಬಿಡುಗಡೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಮ್ಯಾಸಬೇಡ (ಮ್ಯಾಸನಾಯಕ) ಬುಡಕಟ್ಟು ಸಂಸ್ಕೃತಿ ಸಂರಕ್ಷಣಾ ಸಮಿತಿ ಅಧ್ಯಕ್ಷ ಡಾ.ಗೆರೆಗಲ್ ಪಾಪಯ್ಯ ತಿಳಿಸಿದರು.

ನಗರದ ಪತ್ರಿಕಾಭವನದಲ್ಲಿ ಮಂಗಳವಾರ "ಆದಿವಾಸಿ ಮ್ಯಾಸ ನಾಯಕರ ಚಿನ್ನಹಗರಿ ಉತ್ಸವ" ಅಂಗವಾಗಿ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.

ವಿಜಯನಗರ ಜಿಲ್ಲೆಯ ಕೂಡ್ಲಿಗಿ ತಾಲ್ಲೂಕು ಪೂಜಾರಹಳ್ಳಿ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ತಿಪ್ಪೇಹಳ್ಳಿ (ಹೊನ್ನಿನ ಹಳ್ಳಿ) ಹತ್ತಿರ ಚಿನ್ನಹಗರಿ ನದಿ ಹರಿಯುತ್ತಿದ್ದು, ಇಲ್ಲಿ ಪ್ರತಿ ವರ್ಷದಂತೆ ಈ ವರ್ಷವೂ 2026ರ ಜನವರಿ 15ರಂದು ಬೆಳಿಗ್ಗೆ 8 ರಿಂದ ಸಂಜೆ 6 ರವರೆಗೆ ಮ್ಯಾಸನಾಯಕ ಬುಡುಕಟ್ಟು ಜನರ ಸಾಂಸ್ಕೃತಿಕ ಭಾಗವಾಗಿ "ಆದಿವಾಸಿ ಮ್ಯಾಸ ನಾಯಕರ ಚಿನ್ನಹಗರಿ ಉತ್ಸವ–2026" ಹಮ್ಮಿಕೊಳ್ಳಲಾಗಿದೆ ಎಂದು ಮಾಹಿತಿ ನೀಡಿದರು.

ಈ ಕಾರ್ಯಕ್ರಮವನ್ನು ಮ್ಯಾಸಬೇಡ (ಮ್ಯಾಸನಾಯಕ) ಬುಡಕಟ್ಟು ಸಂಸ್ಕೃತಿ ಸಂರಕ್ಷಣಾ ಸಮಿತಿ ಮತ್ತು ಚಿನ್ನಹಗರಿ ಪ್ರಕಾಶನ ಹಾಗೂ ಗಾದ್ರಿ ಪಾಲನಾಯಕ ದೇವಸ್ಥಾನ ಅಭಿವೃದ್ಧಿ ಸಮಿತಿ ಸಹಯೋಗದಲ್ಲಿ ಉತ್ಸವ ಆಚರಿಸಲಾಗುತ್ತಿದ್ದು, ಈ ಬಾರಿ ಉತ್ಸವವನ್ನು ವಿಜೃಂಭಣೆಯಿಂದ ಆಚರಿಸಲು ನಿರ್ಧರಿಸಲಾಗಿದೆ ಎಂದರು.

ನಮ್ಮ ಮ್ಯಾಸ ನಾಯಕ ಬುಡಕಟ್ಟಿಗೂ ಮತ್ತು ನಾಯ್ಕಡ ಬುಡಕಟ್ಟಿಗೂ ಸಾಮ್ಯತೆ ಇರುವ ಬುಡಕಟ್ಟು ಲಕ್ಷಣಗಳನ್ನು ಅಧ್ಯಯನ ಮಾಡಿ ಪರಿಶೀಲಿಸಿ, ಈ ಎರಡೂ ಬುಡಕಟ್ಟುಗಳು ಒಂದೇ ಎಂದು ಭಾರತ ಸಂಸತ್ತು ನಮ್ಮನ್ನು ಪರಿಷ್ಟ ಪಂಗಡಕ್ಕೆ ಸೇರಿಸಿರುತ್ತದೆ. ಆದ್ದರಿಂದ, ಈ ಅನನ್ಯ ಬಡುಕಟ್ಟು ಲಕ್ಷಣಗಳನ್ನು ಸಂರಕ್ಷಸಿಕೊಂಡು ಹೋಗುವುದು ನಮ್ಮ ಈ ಕಾರ್ಯಕ್ರಮದ ಉದ್ದೇಶ. ನಮ್ಮ ಬುಡಕಟ್ಟು ಲಕ್ಷಣಗಳನ್ನು ನಾಶಮಾಡಲು, ನಮ್ಮೊಳಗೆ ಅನ್ಯ ಜಾತಿಯವರು ನುಸಿಳಿದ್ದಾರೆ ಮತ್ತು ನಮ್ಮ ಮೀಸಲಾತಿ ಕದಿಯುತ್ತಿದ್ದಾರೆ ಇದರ ಬಗ್ಗೆ, ನಮ್ಮ ಮ್ಯಾಸ ನಾಯಕ ಬಂಧುಗಳನ್ನು ಎಚ್ಚರಿಸಲಾಗುವುದು ಎಂದರು.

ನಮ್ಮದಲ್ಲದ ವೈದಿಕ ಪರಂಪರೆಯಿಂದ ದೂರ ಇದ್ದು, ಉದಿ–ಪದಿ ಸಂಪ್ರದಾಯ ಪಾಲಿಸಿಕೊಂಡು ಬಂದಿರುವವರು. ನಮ್ಮ ಪೂರ್ವಜರ ಅತ್ಮಗಳು ನಮ್ಮ ದೇವರ ಎತ್ತುಗಳಲ್ಲಿ ನೆಲೆಸಿವೆ ಎಂದು ದೇವರ ಎತ್ತುಗಳನ್ನೇ ದೇವರೆಂದು ಪೂಜಿಸುತ್ತಿರುವವರು. ಇದೇ ಧಾರ್ಮಿಕ ನಂಬಿಕೆಯು ನಾಯ್ಕಡ ಪಂಗಡಲ್ಲಿಯೂ ಇರುತ್ತದೆ. ನಮ್ಮ ಮ್ಯಾಸನಾಯಕ ಬಡಕಟ್ಟು ನಾಯ್ಕಡ ಆದಿವಾಸಿ ಜನಾಂಗದಿಂದ ಬೇರ್ಪಟ್ಟು ಚಿತ್ರದುರ್ಗ,

ಮೊಳಕಾಲ್ಮುರು, ಕೂಡ್ಲಿಗಿ ಭಾಗಕ್ಕೆ ಹೇಗೆ ಅಲೆಮಾರಿಗಳಾಗಿ ಬಂದರು ಎಂದು ಸಾಂಸ್ಕೃತಿಕ ಇತಿಹಾಸ ನೆನಪಿಸಿಕೊಳ್ಳುವುದು ಈ ಉತ್ಸವದ ಆಚರಣೆಯ ಉದ್ದೇಶವಾಗಿದೆ ಎಂದು ತಿಳಿಸಿದರು. ರಾಜ್ಯ ವಾಲ್ಮೀಕಿ ನಾಯಕರ ಮಹಾ ವೇದಿಕೆ ರಾಜ್ಯಾಧ್ಯಕ್ಷ ರಾಜಣ್ಣ ಲಕ್ಕೀಸಾಗರ ಮಾತನಾಡಿ, ಬುಡಕಟ್ಟು ಜನರ ಸಾಂಸ್ಕೃತಿಕ ಕಾರ್ಯಕ್ರಮಕ್ಕೆ ಎಲ್ಲಾ ಮ್ಯಾಸ ನಾಯಕ ಬಂಧುಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಮನವಿ ಮಾಡಿದರು.ಪತ್ರಿಕಾಗೋಷ್ಠಿಯಲ್ಲಿ ಮ್ಯಾಸಬೇಡ (ಮ್ಯಾಸನಾಯಕ) ಬುಡಕಟ್ಟು ಸಂಸ್ಕೃತಿ ಸಂರಕ್ಷಣಾ ಸಮಿತಿ ಉಪಾಧ್ಯಕ್ಷ ಸಿ.ಎಸ್.ಜೋಗೇಶ್, ಸಂಚಾಲಕರಾದ ಕೆ.ಬಿ.ಓಬಣ್ಣ, ಎನ್.ನಟರಾಜ್, ಸದಸ್ಯ ಕೆ.ಟಿ.ನಾಗೇಶ್, ಜಿಲ್ಲಾ ಪರಿಷತ್ ಮಾಜಿ ಸದಸ್ಯ ಸತ್ಯನಾರಾಯಣ, ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ದೇವರಾಜ್ ಇದ್ದರು.

# ಒಂದೇ ತಿಂಗಳಲ್ಲಿ ಎರಡು ಪ್ರತಿಷ್ಠಿತ ಯೂರೋಪ್ ಪದವಿ ಪಡೆದ ವೈದ್ಯ



**ಹಾಸನ:** ಜಿಲ್ಲೆಯ ಖ್ಯಾತ ವೈದ್ಯರಾದ ಡಾ. ದೇವದಾಸು ಹೆಚ್.ಆರ್. (ಆನಂದದಾಸ್ ಡಯಾಗ್ನೋಸ್ಟಿಕ್ ಲ್ಯಾಬ್) ಹಾಗೂ ಡಾ. ಕೆ.ವಿ. ಸುಜಾತಾ (ದಾಸ್ ಸ್ಕ್ಯಾನಿಂಗ್ ಸೆಂಟರ್) ಅವರ ಪುತ್ರಿ ಡಾ. ತೃಪ್ತಿ ದಾಸ್ ಅವರು ಯುರೋಪಿಯನ್ ಡಿಪ್ಲೊಮಾ ಇನ್ ರೇಡಿಯಾಲಜಿ (ಇಆುಖ) ಪರೀಕ್ಷೆಯನ್ನು ಯಶಸ್ವಿಯಾಗಿ ಉತ್ತೀರ್ಣರಾಗುವ ಮೂಲಕ ಜಿಲ್ಲೆಯ ಮೊದಲ ಮಹಿಳಾ ವೈದ್ಯ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ

ಡಾ. ತೃಪ್ತಿ ಅವರು ಇದೀಗ ಯುರೋಪಿಯನ್ ಬೋರ್ಡ್ ಪ್ರಮಾಣಿತ ತಜ್ಞರಾಗಿ ಗುರುತಿಸಲ್ಪಟ್ಟಿದ್ದಾರೆ. ಇದೇ ವೇಳೆ, ಅವರು ಡಯಾಗ್ನೋಸ್ಟಿಕ್ ರೇಡಿಯಾಲಜಿ (ಇಆುಖ) ಮತ್ತು ಇಂಟರ್ವೆನ್ಶನಲ್ ರೇಡಿಯಾಲಜಿ (ಇಃಖುಖ) ಎಂಬ ಎರಡೂ ಕ್ಷೇತ್ರಗಳಲ್ಲಿ ಕೇವಲ ಒಂದು ತಿಂಗಳಲ್ಲಿ ಯುರೋಪಿಯನ್ ಮಟ್ಟದ ಎರಡು ಪ್ರಮಾಣಪತ್ರಗಳನ್ನು ಪಡೆದಿರುವುದು ವಿಶೇಷ ಸಾಧನೆಯಾಗಿದೆ.

ಒಃಃಖ, ಒಅ, ಆಓಃ, ಈಗಿಖಖ, ಇಃಖುಖ, ಇಆುಖ ಸೇರಿದಂತೆ ಅಂತರಾಷ್ಟ್ರೀಯ ಮಟ್ಟದ ಪ್ರತಿಷ್ಠಿತ ಪದವಿಗಳನ್ನು ಗಳಿಸಿರುವ ಅವರು ಪ್ರತಿಭಾವಂತ ರೇಡಿಯಾಲಜಿಸ್ಟ್ ಆಗಿ ಗುರುತಿಸಿಕೊಂಡಿದ್ದಾರೆ. ಈ ರೀತಿ ಸಾಧನೆ ಮಾಡಿದಂತಹ ಬೆರಳೆಣಿಕೆ ಮಂದಿಯಲ್ಲಿ ಇವರು ಕೂಡ ಒಬ್ಬರು

ಮಂಗಳೂರಿನ ಯೆನೆಪೋಯ ವೈದ್ಯಕೀಯ ಕಾಲೇಜಿನಲ್ಲಿ ಎಂಬಿಬಿಎಸ್ ಶಿಕ್ಷಣ ಪೂರ್ಣಗೊಳಿಸಿದ ಡಾ. ತೃಪ್ತಿ ದಾಸ್ ಅವರು ನಾಲ್ಕೂ ವರ್ಷಗಳಲ್ಲಿ ಡಿಸ್ಟಿಂಕ್ಷನ್ ಸಾಧಿಸುವುದರ ಜೊತೆಗೆ ವಿಶ್ವವಿದ್ಯಾಲಯ ಮಟ್ಟದಲ್ಲಿ ಅಗ್ರ ಶ್ರೇಣಿಯ ರ್ಯಾಂಕ್ ಪಡೆದು ಗಮನ ಸೆಳೆದಿದ್ದರು. ನಂತರ ದಾವಣಗೆರೆಯ ಜೆಜೆಎಂ ವೈದ್ಯಕೀಯ ಕಾಲೇಜಿನಲ್ಲಿ ರೇಡಿಯಾಲಜಿಯಲ್ಲಿ ಎಂಡಿ ಪದವಿ ಪಡೆದ ಅವರು, ಕಾಲೇಜಿಗೆ ಚಿನ್ನದ ಪದಕವನ್ನು ಗಳಿಸಿದ್ದು, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯಕ್ಕೆ (ಖಉಗಊಖ) 4ನೇ ರ್ಯಾಂಕ್ ಪಡೆಯುವ ಮೂಲಕ ತಮ್ಮ ಶೈಕ್ಷಣಿಕ ಸಾಮರ್ಥ್ಯವನ್ನು ಮತ್ತೊಮ್ಮೆ ಸಾಬೀತುಪಡಿಸಿದರು.ಇದಲ್ಲದೆ ರೇಡಿಯಾಲಜಿಯಲ್ಲಿ ಡಿಪ್ಲೊಮೇಟ್ ಆಫ್ ನ್ಯಾಷನಲ್ ಬೋರ್ಡ್ (ಆಓಃ) ಪದವಿಯನ್ನೂ ಅವರು ಯಶಸ್ವಿಯಾಗಿ ಪೂರ್ಣಗೊಳಿಸುವ ಮೂಲಕ ಹಲವು ಯುವ ವೈದ್ಯರಿಗೆ ಪ್ರೇರಣೆಯಾಗಿದ್ದಾರೆ.

ಇಂಟರ್ವೆನ್ಷನಲ್ ರೇಡಿಯಾಲಜಿ ಕ್ಷೇತ್ರದಲ್ಲಿ ವಿಶೇಷ ಆಸಕ್ತಿ ಹೊಂದಿರುವ ಡಾ. ತೃಪ್ತಿ ದಾಸ್ ಅವರು 2023 ರಿಂದ 2025ರವರೆಗೆ ಬೆಂಗಳೂರಿನ ಮಣಿಪಾಲ್ ಆಸ್ಪತ್ರೆಯಲ್ಲಿ ಈಗಿಖಖ

(ಫೆಲೋಶಿಪ್ ಇನ್ ವಾಸ್ಕುಲರ್ ಅಂಡ್ ಇಂಟರ್ವೆನ್ಷನಲ್ ರೇಡಿಯಾಲಜಿ) ತರಬೇತಿಯನ್ನು ಪೂರ್ಣಗೊಳಿಸಿದ್ದಾರೆ. ಇದೇ ವೇಳೆ ಕೇವಲ ಒಂದೇ ತಿಂಗಳ ಅವಧಿಯಲ್ಲಿ ಯುರೋಪಿನ ಎರಡು ಅತ್ಯಂತ ಪ್ರತಿಷ್ಠಿತ ಮತ್ತು ಕಠಿಣವೆಂದು ಪರಿಗಣಿಸಲ್ಪಡುವ ಪದವಿಗಳಾದ ಯುರೋಪಿಯನ್ ಡಿಪ್ಲೊಮಾ ಇನ್ ರೇಡಿಯಾಲಜಿ (ಇಆುಖ) ಹಾಗೂ ಯುರೋಪಿಯನ್

ಬೋರ್ಡ್ ಆಫ್ ಇಂಟರ್ವೆನ್ಷನಲ್ ರೇಡಿಯಾಲಜಿ (ಇಃಖುಖ) ಗಳಿಸುವ ಮೂಲಕ ಅಪರೂಪದ ಸಾಧನೆ ಮಾಡಿದ್ದಾರೆ. ಈ ಪ್ರಮಾಣಪತ್ರಗಳನ್ನು ಪಡೆದಿರುವ ಭಾರತದ ಕೆಲವೇ ಕೆಲವು ಮಹಿಳಾ ರೇಡಿಯಾಲಜಿಸ್ಟ್‌ಗಳಲ್ಲಿ ಡಾ. ತೃಪ್ತಿ ದಾಸ್ ಒಬ್ಬರಾಗಿದ್ದಾರೆ.

ಪ್ರಸ್ತುತ ಡಾ. ತೃಪ್ತಿ ದಾಸ್ ಅವರು ಬೆಂಗಳೂರಿನ ಪೀಪಲ್ ಟ್ರೀ ಆಸ್ಪತ್ರೆಯಲ್ಲಿ ಪೂರ್ಣಕಾಲಿಕ ಕನ್ಸಲ್ಟೆಂಟ್ ಆಗಿ ಸೇವೆ ಸಲ್ಲಿಸುತ್ತಿದ್ದು, ಅಲ್ಲಿನ ಇಂಟರ್ವೆನ್ಷನಲ್ ರೇಡಿಯಾಲಜಿ ವಿಭಾಗದ ಮುಖ್ಯಸ್ಥರಾಗಿದ್ದಾರೆ. ಜೊತೆಗೆ ಎಂ.ಎಸ್. ರಾಮಯ್ಯ ವೈದ್ಯಕೀಯ ಕಾಲೇಜು ಹಾಗೂ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ಸಂದರ್ಶಕ ಕನ್ಸಲ್ಟೆಂಟ್ ಆಗಿಯೂ ಕಾರ್ಯನಿರ್ವಹಿಸುತ್ತಿದ್ದಾರೆ.

ರೇಡಿಯಾಲಜಿಯಲ್ಲಿ ಕೃತಕ ಬುದ್ಧಿಮತ್ತೆ (ಂಖ) ಬಳಕೆ, ಶೈಕ್ಷಣಿಕ ಸಂಶೋಧನೆ ಹಾಗೂ ರೋಗಿಗಳಿಗೆ ಸುಧಾರಿತ ಮತ್ತು ಕಡಿಮೆ ಅಪಾಯದ ಚಿಕಿತ್ಸೆ ನೀಡುವಲ್ಲಿ ಅವರು ವಿಶೇಷ ಆಸಕ್ತಿ ಹೊಂದಿದ್ದಾರೆ. ಇಮೇಜ್?ಗೈಡೆಡ್ ಇಂಟರ್ವೆನ್ಷನ್ ಕ್ಷೇತ್ರದಲ್ಲಿ ನೂತನ ತಂತ್ರಜ್ಞಾನ ಮತ್ತು ಆವಿಷ್ಕಾರಗಳನ್ನು ಅಳವಡಿಸುವ ನಿಟ್ಟಿನಲ್ಲಿ ಅವರು ನಿರಂತರವಾಗಿ ಶ್ರಮಿಸುತ್ತಿದ್ದಾರೆ.

ಜಿಲ್ಲೆಯ ಹೆಮ್ಮೆಯ ಪುತ್ರಿಯಾಗಿರುವ ಡಾ. ತೃಪ್ತಿ ದಾಸ್ ಅವರ ಈ ಸಾಧನೆಗಳು ಯುವ ವೈದ್ಯರು ಹಾಗೂ ವೈದ್ಯಕೀಯ ವಿದ್ಯಾರ್ಥಿಗಳಿಗೆ ಪ್ರೇರಣೆಯಾಗಿದ್ದಾರೆ. ಇವರ ಈ ಸಾಧನೆಗೆ ಪೋಷಕರು ಸಂಬಂಧಿಕರು ಸ್ನೇಹಿತರು ಸೇರಿದಂತೆ ಜಿಲ್ಲೆಯ ಹಲವು ವೈದ್ಯರು ಕೂಡ ಅಭಿನಂದಿಸಿ ಶುಭ ಹಾರೈಸಿದ್ದಾರೆ

## ಸಹಾಯಧನ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಧರ್ತಿ ಆಭಾ ಜನ ಜಾತಿಯ ಗ್ರಾಮ ಉತ್ಕರ್ಷ ಅಭಿಯಾನದಡಿ ಬುಡಕಟ್ಟು ಸಮುದಾಯದ ಪರಿಶಿಷ್ಟ ಪಂಗಡದವರಿಗೆ ಮೀನು ಮಾರಾಟಕ್ಕಾಗಿ ಐಸ್ ಬಾಕ್ಸ್ ನೊಂದಿಗೆ ದ್ವಿಚಕ್ರ ವಾಹನ / ಐಸ್ ಬಾಕ್ಸ್‌ನೊಂದಿಗೆ ತ್ರಿಚಕ್ರ ವಾಹನ ಮತ್ತು ಜೀವಂತ ಮೀನು ಮಾರಾಟ ಕೇಂದ್ರಗಳನ್ನು ಪಿ.ಎಂ.ಎಂ.ಎಸ್.ವೈ ಯೋಜನೆಯ ಘಟಕ ವೆಚ್ಚದಂತೆ ಸ್ಥಾಪಿಸಲು ಗುರಿಯನ್ನು ನಿಗಧಿಪಡಿಸಿದ್ದು, ಸಹಾಯಧನವು ಘಟಕ ವೆಚ್ಚದ 90% ಆಗಿರುತ್ತದೆ. ಈ ಯೋಜನೆಯನ್ನು 2025–26ನೇ ಸಾಲಿನಲ್ಲಿ ಅನುಷ್ಠಾನಗೊಳಿಸಲಾಗಿದ್ದು, ಸಹಾಯಧನ ಸೌಲಭ್ಯಕ್ಕಾಗಿ ಪರಿಶಿಷ್ಟ ಪಂಗಡದ ಮೀನುಗಾರರಿಂದ ಅರ್ಜಿ ಆಹ್ವಾನಿಸಲಾಗಿದೆ.

ಯೋಜನೆಯ ಗುರಿ : ದ್ವಿಚಕ್ರ ವಾಹನ 03, ತ್ರಿಚಕ್ರ ವಾಹನ 01 ಮತ್ತು ಜೀವಂತ ಮೀನು ಮಾರಾಟ ಮಳಿಗೆ 1 ಆಗಿದೆ.

ಜಿಲ್ಲೆಯ ಚಿಂತಾಮಣಿ ತಾಲ್ಲೂಕಿನ ಕುರುಮಾರ್ಲಹಳ್ಳಿ, ಹುಸೇನ್ ಪುರ, ಮಲ್ಲಿಕಾಪುರ ಮತ್ತು ಮಾರಪಲ್ಲಿ ಹಾಗೂ ಶಿಡ್ಲಘಟ್ಟ ತಾಲ್ಲೂಕಿನ ಕಾಮನಹಳ್ಳಿ, ದಡಮಘಟ್ಟ, ತಟ್ಟಹಳ್ಳಿ, ಆನೂರು ಹುಣಸೇನಹಳ್ಳಿ, ದಬರ್ಗಾನಹಳ್ಳಿ ಮತ್ತು ಕನ್ನಮಂಗಲ ಈ ಹಳ್ಳಿಗಳ ಮೀನುಗಾರರು ಮಾತ್ರ ಅರ್ಜಿ ಸಲ್ಲಿಸಬಹುದು. ಅರ್ಜಿಗಳನ್ನು ಡಿಸೆಂಬರ್ 24 ರೊಳಗೆ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಚಿಂತಾಮಣಿ ತಾಲ್ಲೂಕು ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಿ, ಅರ್ಜಿ ಸಲ್ಲಿಸಬಹುದು ಎಂದು ಚಿಂತಾಮಣಿ ತಾಲ್ಲೂಕು ಮೀನುಗಾರಿಕೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರೋತ್ಸಾಹಧನಕ್ಕೆ ಅರ್ಜಿ ಆಹ್ವಾನ

**ಗದಗ :** 2025–26ನೇ ಸಾಲಿನಲ್ಲಿ ವಿವಿಧ ಕ್ರೀಡಾಕೂಟದಲ್ಲಿ ರಾಷ್ಟ್ರಮಟ್ಟ ಹಾಗೂ ಅಂತರರಾಷ್ಟ್ರೀಯ ಮಟ್ಟದಲ್ಲಿ ಭಾಗವಹಿಸಿ ವಿಜೇತರಾದ ಗದಗ ಜಿಲ್ಲೆಯ ಕ್ರೀಡಾಪಟುಗಳಿಗೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಪ್ರೋತ್ಸಾಹಧನವನ್ನು ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿರುತ್ತದೆ.

ಜ. 1–2025 ರಿಂದ ಡಿ. 31–2025 ರವರೆಗೆ ವಿವಿಧ ಕ್ರೀಡಾಕೂಟಗಳಲ್ಲಿ ಭಾಗವಹಿಸಿ ರಾಷ್ಟ್ರ ವಿಶ್ವವಿದ್ಯಾಲಯ ಮತ್ತು ಅಂತರರಾಷ್ಟ್ರೀಯ ಮಟ್ಟದಲ್ಲಿ ವಿಜೇತರಾದ ಗದಗ ಜಿಲ್ಲೆಯ ಕ್ರೀಡಾಪಟುಗಳು ಈ ಕೆಳಕಾಣಿಸಿದ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಬಹುದು. ಕ್ರೀಡಾಕೂಟದಲ್ಲಿ ಭಾಗವಹಿಸಿದ ಬಗ್ಗೆ ಪ್ರಮಾಣಪತ್ರ, ಕ್ರೀಡಾಪಟುಗಳ ಆಧಾರ ಕಾರ್ಡ, ಕ್ರೀಡಾಪಟುಗಳ ಬ್ಯಾಂಕ ಪಾಸ್ ಬುಕ್, ಪಾಸ್ ಪೂರ್ಟ ಅಳತೆಯ ಪೋಟೋ–01, ದಾಖಲಾತಿಗಳೊಂದಿಗೆ ಅರ್ಜಿಯನ್ನು ಸಹಾಯಕ ನಿರ್ದೇಶಕರ ಕಾರ್ಯಾಲಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣ, ಗದಗ ಇಲ್ಲಿ ಲಭ್ಯವಿದ್ದು, ಡಿ. 31 ರೊಳಗಾಗಿ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08372–238345ಗೆ ಸಂಪರ್ಕಿಸಲು ಕೋರಲಾಗಿದೆ ಎಂದು ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕಲರು ಇವರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ಡಿ.18 ರಂದು ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿ ಸಭೆ

**ಬಳ್ಳಾರಿ:** ಲೋಕೋಪಯೋಗಿ ಇಲಾಖೆ ಬಳ್ಳಾರಿ ವಿಭಾಗದ ವತಿಯಿಂದ ಡಿ.18 ರಂದು ಮಧ್ಯಾಹ್ನ 12 ಗಂಟೆಗೆ ನಗರದ ಹಳೆಯ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿ ಸಭೆ ಏರ್ಪಡಿಸಲಾಗಿದೆ.

ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿಯ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಅಧ್ಯಕ್ಷತೆ ವಹಿಸುವರು ಎಂದು ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿಯ ಸದಸ್ಯ ಕಾರ್ಯದರ್ಶಿಯೂ ಆದ ಲೋಕೋಪಯೋಗಿ ಇಲಾಖೆ ಬಳ್ಳಾರಿ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ ಅವರು ತಿಳಿಸಿದ್ದಾರೆ.

## ಡಿ.23 ರಂದು ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆ

**ಬಳ್ಳಾರಿ:** ಜಿಲ್ಲೆಯಲ್ಲಿ ಬೆಳೆ ಕಟಾವು ಪ್ರಯೋಗಗಳ ಪ್ರಗತಿ ಪರಿಶೀಲನೆ, ಜನನ–ಮರಣ ನಾಗರಿಕ ನೋಂದಣಿ ಪದ್ಧತಿ, ಬೆಳೆ ಕ್ಷೇತ್ರ ಮರು ಹೊಂದಾಣಿಕೆ ಹಾಗೂ ಇತರೆ ವಿಷಯಗಳ ಕುರಿತು ಚರ್ಚಿಸಲು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರ ಅಧ್ಯಕ್ಷತೆಯಲ್ಲಿ ಡಿ.23 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಕೆಸ್ವಾನ್ ವಿಡಿಯೋ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆ ಏರ್ಪಡಿಸಲಾಗಿದೆ ಎಂದು ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳು ತಿಳಿಸಿದ್ದಾರೆ.

# ರಾಷ್ಟ್ರ ಮಟ್ಟದ ಕರಾಟೆ ಪಂದ್ಯಾವಳಿಯಲ್ಲಿ ವಿನಯ್ ಕನ್ನಾರ್ ಪ್ರಥಮ ಸ್ಥಾನ



**ಚಿಕ್ಕಮಗಳೂರು:** ಹೊಯ್ಸಳ ಕಪ್–2025ರ 6ನೇ ಅಖಿಲ ಭಾರತಓಪನ್‌ಕರಾಟೆ ಚಾಂಪಿಯನ್‌ಶಿಪ್ ಇವರಸಹಯೋಗದಲ್ಲಿಬೇಲೂರು ನಗರದ ಒಳಾಂಗಣ ಕ್ರೀಡಾಂಗಣದಲ್ಲಿನೆಡೆದಬೇಲೂರುಓಪನ್ 6ನೇ ರಾಷ್ಟ್ರ ಮಟ್ಟದಕರಾಟೆ ಪಂದ್ಯಾವಳಿ ವಿನಯ್‌ಕನ್ನಾರ್.ಡಿಕಮಿಟೆ ಬ್ರೌನ್ ಬೆಲ್ಟ್‌ನಲ್ಲಿ ಪ್ರಥಮ ಸ್ಥಾನ ಪಡೆದುರಾಷ್ಟ್ರ ಮಟ್ಟದ ಪ್ರಶಸ್ತಿಯನ್ನು ಗಳಿಸಿದ್ದಾರೆ. ಚಿಕ್ಕಮಗಳೂರುತಾಲ್ಲೂಕಿನಕಟ್ರಮನೆಗ್ರಾಮದಧರ್ಮೇಂದ್ರಕನ್ನಾರ್ ಮತ್ತು ದಿವ್ಯಜ್ಯೋತಿರವರ ಪುತ್ರಇವರುಇಲ್ಲಿಯ ಉಪ್ಪಳ್ಳಿ ಜ್ಞಾನರಶ್ಮಿ ಶಾಲೆಯಲ್ಲಿ 8ನೇ ತರಗತಿ ವ್ಯಾಸಂಗ ಮಾಡುತ್ತಿದ್ದು. ಶೋಟಕಾನ್‌ಕರಾಟೆ ಶಾಲೆಯಲ್ಲಿ ವೆಂಕಟೇಶ್.ಸಿ.ಆರ್ ರವರ ಮಾರ್ಗದರ್ಶನದಲ್ಲಿತರಬೇತಿ ಪಡೆಯುತ್ತಿದ್ದಾರೆ.

# ಶಿವಸಿಂಪಿ ಸಮಾಜದಿಂದ ಎಸ್ ಎಸ್ ಗೆ ಶ್ರದ್ಧಾಂಜಲಿ

**ದಾವಣಗೆರೆ:** ವೀರಶೈವ ಮಹಾಸಭಾದ ರಾಷ್ಟ್ರೀಯ ಅಧ್ಯಕ್ಷರು ಹಾಗೂ ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಹಿರಿಯ ಶಾಸಕರು ಆದ ಡಾ. ಶಾಮನೂರು ಶಿವಶಂಕರಪ್ಪನವರಿಗೆ ದಾವಣಗೆರೆ ಜಿಲ್ಲಾ ಶಿವಸಿಂಪಿ ಸಮಾಜದ ವತಿಯಿಂದ, ಸಮಾಜ ಬಾಂಧವರು ಅಂತಿಮ ದರ್ಶನ ಪಡೆದು, ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಶಾಸಕರು ನಮ್ಮ ಸಮಾಜಕ್ಕೆ ಅಪಾರ ಕೊಡುಗೆ ನೀಡಿದ್ದು, ಹಾಗೂ ದಾವಣಗೆರೆಯಲ್ಲಿ ವಿದ್ಯಾಸಂಸ್ಥೆಗಳ ಮೂಲಕ ಹೆಸರು ಮಾಡುವ ಮೂಲಕ ಬಡ ಜನತೆಗೆ ಸಹಾಯ ಹಸ್ತ ನೀಡುತ್ತಾ ಬಂದಿರುವುದು ಎಲ್ಲರಿಗೂ ತಿಳಿದ ವಿಷಯವಾಗಿದೆ. ಅವರ ಬದುಕು ನಮ್ಮೆಲ್ಲರಿಗೂ ಆದರ್ಶಪ್ರಾಯವಾಗಿದೆ. ಅವರ ಸಾವಿನಿಂದ ವೀರಶೈವ ಲಿಂಗಾಯತ ಸಮಾಜಕ್ಕೆ ಅಪಾರ ನಷ್ಟ ಉಂಟಾಗಿದೆ ಎಂದು ಶಿವಸಿಂಪಿ ಸಮಾಜದ ಬಂಧುಗಳು ಕಂಬನಿ ಮಿಡಿದಿದ್ದಾರೆ.

3–4 ಸಾವಿರ ಕೋಟಿ ರೂ. ಅನುದಾನ ಸಾಧ್ಯತೆ

# ಉತ್ತರಕ್ಕೆ ವಿಶೇಷ ಪ್ಯಾಕೇಜ್ ಗಿಫ್ಟ್!



**ಬೆಳಗಾವಿ:** ಉತ್ತರ ಕರ್ನಾಟಕಕ್ಕೂ ನಮ್ಮ ಸರ್ಕಾರ ಉತ್ತರದಾಯಿ.ಇತಿಮಿತಿಯಲ್ಲೇ ರಸ್ತೆ. ಹಲವು ಯೋಜನೆ

ಈ ಭಾಗದ ಅಭಿವೃದ್ಧಿಗೂ ನಮ್ಮ ಕೊಡುಗೆ ಇದೆ ಎಂದು ಭರವಸೆ ಬಿತ್ತಲು ವಿಧಾನ ಮಂಡಲ ಅಧಿವೇಶನ ಸಂದರ್ಭದಲ್ಲಿ ವಿಶೇಷ ಪ್ಯಾಕೇಜ್ ಘೋಷಿಸುವ ಸಂಪ್ರದಾಯ ರೂಢಿಸಿಕೊಂಡು ಬಂದಿರುವ ಸರ್ಕಾರ, ಈ ಬಾರಿ 3–4 ಸಾವಿರ ಕೋಟಿ ರೂ. ಮೊತ್ತದ ಪ್ಯಾಕೇಜ್ ಘೋಷಿಸಲು ಸಿದ್ಧತೆ ನಡೆಸಿದೆ. ಆರ್ಥಿಕ ಇತಿಮಿತಿಯಲ್ಲೇ * ಮೂಲಸೌಕರ್ಯ, ನೀರಾವರಿ, ಶಿಕ್ಷಣ, ಕೈಗಾರಿಕೆ ಸೇರಿದಂತೆ ವಿವಿಧ ಕ್ಷೇತ್ರಕ್ಕೆ ಅನುದಾನ ಘೋಷಿಸಲು ಉದ್ದೇಶಿಸಿದ್ದು, ಇಲಾಖಾವಾರು ಮಾಹಿತಿ ಸಂಗ್ರಹಿಸುವ ಕೆಲಸ ಭರದಿಂದ ನಡೆದಿದೆ. ಚಳಿಗಾಲದ ಅಧಿವೇಶನ ಸಂದರ್ಭದಲ್ಲಿ ಉತ್ತರ ಕರ್ನಾಟಕ ಪ್ರಾಂತ್ಯಕ್ಕೆ ಸಂಬಂಧಿಸಿದ ವಿಷಯಗಳಿಗೆ ಆದ್ಯತೆ ನೀಡಬೇಕಿರುವುದರಿಂದ ಶೀಘ್ರವಾಗಿ ಸಚಿವ ಸಂಪುಟ ಶಾಖೆಗೆ ತಮ್ಮ ಇಲಾಖೆಯ ಪ್ರಸ್ತಾವನೆಗಳನ್ನು ಸಲ್ಲಿಸುವಂತೆ ಮುಖ್ಯಕಾರ್ಯದರ್ಶಿ ಈಗಾಗಲೇ ಎಲ್ಲಾ ಇಲಾಖೆ ಅಪರ ಮುಖ್ಯಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಯವರಿಗೆ ಸೂಚನೆಯನ್ನೂ ನೀಡಿದ್ದಾರೆ. ಉತ್ತರ ಕರ್ನಾಟಕಕ್ಕೆ ಸಂಬಂಧಿಸಿದ ಯೋಜನೆಗಳಿಗೆ ಸಂಪುಟ ಅನುಮೋದನೆ ಬಾಕಿ ಇರುವ ಪ್ರಕರಣಗಳನ್ನು ಒಟ್ಟಾಗಿಸಿ ಅದನ್ನು ಸಂಪುಟ ಸಭೆಯಲ್ಲಿ ಚರ್ಚೆ ಮಾಡಿ ನಿರ್ಣಯ ಮಾಡಿ, ವಿಧಾನಸಭೆಯಲ್ಲಿ ಘೋಷಿಸುವುದು ಈ ಪ್ರಯತ್ನದ ಉದ್ದೇಶವಾಗಿದೆ.

## ಸಾಧನೆ ವಿವರಣೆ

ಅಭಿವೃದ್ಧಿ ವಿಚಾರದಲ್ಲಿ ನಾಡಿನ ಉತ್ತರ ಭಾಗ ಕಡೆಗಣನೆಯಾಗಿದೆ ಎಂಬ ಕೂಗು ಸದಾ ಇದ್ದು, ವಿಧಾನ ಸಭೆ, ವಿಧಾನ ಪರಿಷತ್‌ನಲ್ಲಿ ಚರ್ಚೆಯಾಗಿದೆ. ಪ್ರತ್ಯೇಕ ರಾಜ್ಯದ ಕೂಗೂ ಸಹ ವ್ಯಕ್ತವಾಗಿದೆ. ಶಾಸಕರು ಜನರ ಸಂಕಟವನ್ನು ಸಹ ಭಿನ್ನವಿಸಿಕೊಂಡಿದ್ದಾರೆ. ಇದೀಗ ಜನರು ಹಾಗೂ ಜನ ಪ್ರತಿನಿಧಿಗಳಿಗೆ ಸ್ಪಂದಿಸುವ ಸರ್ಕಾರ ನಮ್ಮದು ಎಂದು ಪ್ರತಿಪಾದಿಸಲು ಪೂರಕವಾಗಿ ಪ್ರತಿಕ್ರಿಯಿಸುವುದಕ್ಕೆ ತಯಾರಿ ಮಾಡಿಕೊಳ್ಳಲಾಗುತ್ತಿದೆ. ಉತ್ತರ ಕರ್ನಾಟಕ ಕುರಿತ ಚರ್ಚೆಗೆ ಮುಖ್ಯಮಂತ್ರಿಯವರು ಬುಧವಾರ ಉತ್ತರ ನೀಡಲಿದ್ದು, ಈ ಸಂದ ರ್ಭದಲ್ಲಿ ತಮ್ಮ ಸರ್ಕಾರ ಈ ಭಾಗದ ಜಿಲ್ಲೆ ಗಳಿಗೆ ಏನೆಲ್ಲ ಮಾಡಿದೆ? ಕಳೆದ ಎರಡೂವರೆ ವರ್ಷದಲ್ಲಿ ಕೈಗೊಂಡ ಕಾರ್ಯಕ್ರಮಗಳ ವಿವರವನ್ನು ಸದನದ ಮುಂದಿಡಲಿದ್ದಾರೆ.

# ಶ್ಯಾಮನೂರು ಶಿವಶಂಕರಪ್ಪ ಲಿಂಗೈಕ್ಯ ಶಾಸಕ ಹೆಚ್.ಡಿ. ತಮ್ಮಯ್ಯ ಶ್ರದ್ಧಾಂಜಲಿ



**ಚಿಕ್ಕಮಗಳೂರು:** ರಾಷ್ಟ್ರೀಯ ವೀರಶೈವ ಲಿಂಗಾಯತ ಮಹಾಸಭಾಅಧ್ಯಕ್ಷ, ಹಿರಿಯ ಶಾಸಕರೂಆದ ಶರಣ ಶ್ರೀ ಶಾಮನೂರು ಶಿವಶಂಕರಪ್ಪನವರ ಅಗಲಿಕೆಗೆ ಚಿಕ್ಕಮಗಳೂರು ವಿಧಾನಸಭಾಕ್ಷೇತ್ರದ ಶಾಸಕ ಎಚ್. ಡಿತಮ್ಮಯ್ಯನವರು ಸಂತಾಪ ಸೂಚಿಸಿದ್ದಾರೆ.

ಅವರುದಾವಣಗೆರೆಯಲ್ಲಿಅಗಲಿದ ಶ್ರೀ ಶಾಮನೂರು ಶಿವಶಂಕರಪ್ಪನವರ ಪಾರ್ಥಿವ ಶರೀರಕ್ಕೆ ಪುಷ್ಪಗುಚ್ಛ ಇರಿಸಿ ಅಂತಿಮ ನಮನ ಸಲ್ಲಿಸಿದರು.

ಶರಣ ಶ್ರೀ ಶಾಮನೂರು ಶಿವಶಂಕರಪ್ಪನವರ ಅಗಲಿಕೆಯಿಂದ ವೀರಶೈವ ಲಿಂಗಾಯತ ಸಮಾಜದಲ್ಲಿ ಶೂನ್ಯ ಭಾವ ಆವರಿಸಿದಂತಾಗಿದೆ. ಅವರು ಸಮಾಜಕ್ಕೆ ಸಲ್ಲಿಸಿದ ಅವಿಸ್ಮರಣೀಯ ಸೇವೆ ಅನುಕರಣೀಯಎಂದರು.

ಶ್ರೀ ಶಾಮನೂರು ಶಿವಶಂಕರಪ್ಪನವರು ಸ ವ ಾ ಜ ವ ನ ್ನ ಒ ಗ ೂ ಡಿ ಸ ಲು ಹ ು ಟ್ಟಿ ಬ ಂ ದ ಂ ಯ ು ಗ ಪು ರ ು ಷ. ದಾವಣಗೆರೆಯನ್ನುಆವಊಲಾಗ್ರವಾಗಿ ಅಭಿವೃದ್ಧಿಪಡಿಸಿ,ದಾವಣಗೆರೆಜನರಿಗೆಉದ್ಯೋಗ ನೀಡಿ ಬಡವರಆಶಾಕಿರಣವಾಗಿದ್ದರು. ಇಂಥ ಮೇರು ವ್ಯಕ್ತಿತ್ವ ಮತ್ತೊಮ್ಮೆ ಹುಟ್ಟಿಬರಲಿ ಎಂದು ಪ್ರಾರ್ಥಿಸುತ್ತ, ದೇವರು ಶಾಮನೂರು ಶಿವಶಂಕರಪ್ಪನವರ ಅಭಿಮಾನಿಗಳಿಗೆ ಹಾಗೂ ಕುಟುಂಬದವರಿಗೆದುಃಖಭರಿಸುವ ಶಕ್ತಿ ನೀಡಲ 'ಂದುಕೋರುತ್ತೇನೆಎಂದಿದ್ದಾರೆ.

# ಬೇಡ ಜಂಗಮ ಸಮಾಜದ ಕಾರ್ಯಕಾರಿಣಿ ಸಭೆ

**ಶಿವಮೊಗ್ಗ:** ಶಿವಮೊಗ್ಗ ಜಿಲ್ಲಾ ಬೇಡ ಜಂಗಮ ಸಮಾಜದ ಕಾರ್ಯಕಾರಿಣಿ ಸಭೆಯು ನಗರದ ಶ್ರೀ ಬಸವೇಶ್ವರ ಶಾಲೆಯ ಗ್ರಂಥಾಲಯ ಭವನದಲ್ಲಿ ನಡೆಯಿತು.

2026ರ ಮುಂದಿನ ಸಾಲಿನ ಅವಧಿಯಲ್ಲಿ ಕಾರ್ಯ ನಿರ್ವಹಿಸಲು ಆಡಳಿತ ಮಂಡಳಿಯಲ್ಲಿ ಜಿಲ್ಲಾ ಅಧ್ಯಕ್ಷರು, ಕಾರ್ಯದರ್ಶಿ ಹಾಗೂ ತಾಲ್ಲೂಕು ಅಧ್ಯಕ್ಷರ ಬದಲಾವಣೆ ಮಾಡಿ ಜಿಲ್ಲಾ ಅಧ್ಯಕ್ಷರಾಗಿ ಭದ್ರಾವತಿಯ ಅಡವಿಶಯ್ಯ. ಎಸ್. ಕಾರ್ಯದರ್ಶಿಯಾಗಿ ಲೋಕೇಶ್ ದೊಡ್ಡ ಮಠ ಎಚ್.ಎಮ್. ಮತ್ತು ತಾಲ್ಲೂಕು ಅಧ್ಯಕ್ಷರಾಗಿ ಟಿ.ಬಿ.ಮಲ್ಲಿಕಾರ್ಜುನಯ್ಯ ರವರನ್ನು ಅವಿರೋಧವಾಗಿ ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು.



ಜಿಲ್ಲಾ ಪ್ರಧಾನ ಕಾರ್ಯದರ್ಶಿ

ಸೋಮನಾಥ್ ಕೆ. ಅರ್. ರವರು ಸಭೆಗೆ ಅಧಿಕೃತವಾಗಿ ಹೊಸ ಪದಾಧಿಕಾರಿಗಳ ಹೆಸರನ್ನು ಘೋಷಿಸಿ ಮುಂದಿನ ದಿನಗಳಲ್ಲಿ ಸದಸ್ಯರು ಹಿಂದಿನ ಅವಧಿಯಲ್ಲಿ ಸಹಕಾರ ನೀಡಿದುಕ್ಕಿಂತ ಹೆಚ್ಚು ಸಹಕಾರ ನೀಡಿ ಸಂಘಟನೆ ಯನ್ನು ಬಲಪಡಿಸಿ ಒಳ್ಳೆ ಕಾರ್ಯಕ್ರಮ ಗಳನ್ನು ಸಮಾಜಕ್ಕೆ ನೀಡುವಂತಾಗಬೇಕು ಎಂದರು.

ಹಿರಿಯ ಉಪಾಧ್ಯಕ್ಷರಾದ ಸೋಮಶೇಖರಯ್ಯ, ಸುಜಯ ಪ್ರಸಾದ, ಖಜಾಂಚಿ ಉಮೇಶ್ ಹಿರೇಮಠ್, ಮಹಿಳಾ ಘಟಕದ ಪ್ರಧಾನ ಕಾರ್ಯದರ್ಶಿ ಜ್ಯೋತಿ ನಾಗರಾಜಯ್ಯ ಸೇರಿದಂತೆ ಹಲವರು ಪಾಲ್ಗೊಂಡಿದ್ದರು.

## ವಸತಿ ಶಾಲೆ ಉದ್ಘಾಟನೆ ಕಾರ್ಯಾಕ್ರಮ

**ಶಿವಮೊಗ್ಗ:** ಸಮಾಜ ಕಲ್ಯಾಣ ಇಲಾಖೆ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ–ಬೆಂಗಳೂರು, ಶಿವಮೊಗ್ಗ ಜಿಲ್ಲಾಡಳಿತ, ಶಿವಮೊಗ್ಗ ಜಿಲ್ಲಾ ಪಂಚಾಯತ್, ಹೊಸನಗರ ತಾಲೂಕು ಪಂಚಾಯತ್, ಕೋಡೂರು ಮತ್ತು ಹುಂಚ ಗ್ರಾಮ ಪಂಚಾಯತ್ ಇವರುಗಳ ಸಹಯೋಗದಲ್ಲಿ ಡಿ. 26 ರಂದು ಮಧ್ಯಾಹ್ನ 3.00 ಕ್ಕೆ ಹೊಸನಗರ ತಾಲೂಕು ಹುಂಚ– ಯಳಗಲ್ಲು ಗ್ರಾಮದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ವಸತಿ ಶಾಲೆಯ ಉದ್ಘಾಟನೆ ಸಮಾರಂಬವನ್ನು ಏರ್ಪಡಿಸಲಾಗಿದೆ.

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಸ್. ಮಧು ಬಂಗಾರಪ್ಪರವರ ಘನ ಉಪಸ್ಥಿತಿಯಲ್ಲಿ ಸಮಾಜ ಕಲ್ಯಾಣ ಇಲಾಖೆ ಸಚಿವ ಡಾ. ಹೆಚ್.ಸಿ. ಮಹಾದೇವಪ್ಪರವರು ವಸತಿ ಶಾಲೆಯ ಉದ್ಘಾಟನೆಯನ್ನು ನೆರವೇರಿಸುವರು. ತೀರ್ಥಹಳ್ಳಿ ಕ್ಷೇತ್ರ ಸಚಿವ ಆರಗ ಜ್ಞಾನೇಂದ್ರರವರು ಅಧ್ಯಕ್ಷತೆ ವಹಿಸುವರು. ಸಾಗರ–ಹೊಸನಗರ ಕ್ಷೇತ್ರ ಶಾಸಕರು ಹಾಗೂ ಕ.ಅ.ಕೈ.ನಿಗಮದ ಅಧ್ಯಕ್ಷ ಗೋಪಾಲಕೃಷ್ಣ ಬೇಳೂರು ಹಾಗೂ ಭದ್ರಾವತಿ ಕ್ಷೇತ್ರ ಶಾಸಕ ಹಾಗೂ ಕ.ಗ್ರಾ.ಮೂ.ಸೌ.ಅ.ನಿಗಮದ ಅಧ್ಯಕ್ಷ ಬಿ.ಕೆ. ಸಂಗಮೇಶ್ವರ ಇವರುಗಳು ವಿಶೇಷ ಆಹ್ವಾನಿತರು.ಕಾರ್ಯಕ್ರಮದಲ್ಲಿ ತಾಲೂಕು ಹಾಗೂ ಗ್ರಾಮ ಪಂಚಾಯತಿ ಅಧ್ಯಕ್ಷರು/ಸದಸ್ಯರುಗಳು ಹಾಗೂ ಜಿಲ್ಲೆಯ ಚುನಾಯಿತ ಪ್ರತಿನಿಧಿಗಳು, ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿ / ಸಿಬ್ಬಂದಿಗಳು, ವಸತಿ ಶಾಲೆಯ ಬೋಧಕರು ಮತ್ತು ಬೋಧಕೇತರ ಸಿಬ್ಬಂದಿಗಳು, ಶಾಲಾ ವಿದ್ಯಾರ್ಥಿಗಳು ಮತ್ತು ಕೋಡೂರ ಮತ್ತು ಹುಂಚ ಗ್ರಾಮಗಳ ಸಮಸ್ತ ನಾಗರೀಕರು ಕಾರ್ಯಕ್ರಮದಲ್ಲಿ ಉಪಸ್ಥಿತರಿರಲಿದ್ದಾರೆ

## ಕುಡಿಯುವ ನೀರಿನ ವಿತರಣೆಯಲ್ಲಿ ವ್ಯತ್ಯಯ

**ದಾವಣಗೆರೆ :** ಕೆಯುಐಡಿಎಸ್ ಸಿ ಇಲಾಖೆಯ ವತಿಯಿಂದ ದಾವಣಗೆರೆ ನಗರದಲ್ಲಿ 24/7 ಜಲಸಿರಿ ಯೋಜನೆಯನ್ನು ಕೈಗೊಳ್ಳಲಾಗಿದ್ದು ಅದರಂತೆ ರಾಜನಹಳ್ಳಿ ಜಾರ್‌ವೆಲ್ ನಿಂದ ಬಾತಿ ನೀರು ಶುದ್ಧೀಕರಣ ಘಟಕಕ್ಕೆ ನೀರನ್ನು ಸರಬರಾಜು ಮಾಡುವ ಪೈಪ್‌ಲೈನ್ ದುರಸ್ತಿ ಕಾರ್ಯವನ್ನು ದಿನಾಂಕ:17–12–2025 ರಿಂದ 19–12–2025 ರವರೆಗೆ ಕೈಗೊಳ್ಳಲು ಉದ್ದೇಶಿಸಿದ್ದು ಸದರಿ ದಿನಗಳಂದು ದಾವಣಗೆರೆ ನಗರಕ್ಕೆ ಸರಬರಾಜು ಆಗುವ 24/7 ಕುಡಿಯುವ ನೀರಿನ ವಿತರಣೆಯಲ್ಲಿ ವ್ಯತ್ಯಯ ಉಂಟಾಗಲಿದೆ ಎಂದು ದಾವಣಗೆರೆ ಮಹಾನಗರ ಪಾಲಿಕೆ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೆತ್ತಲೆ ಮಸಾಜ್ ಮಾಡಿಸಿಕೊಂಡ ಸ್ವಾಮೀಜಿಯ ವಿಡಿಯೊ ಬಯಲು, ಬ್ಲ್ಯಾಕ್‌ಮೇಲ್

**ಧಾರವಾಡ:** ಧಾರವಾಡ ಜಿಲ್ಲೆಯ ಕವಲಗೇರಿ ಮಠದ ಶಿವಾನಂದ ಮಠದ ಸರಸ್ವತಿ ಸ್ವಾಮೀಜಿಯ ಕಾಮಪುರಾಣ ಬಯಲಾಗಿದೆ. ಮಠದ ಆವರಣದಲ್ಲೇ ಮಹಿಳೆಯೊಬ್ಬರಿಂದ ಬೆತ್ತಲೆಯಾಗಿ ಮಸಾಜ್ ಮಾಡಿಸಿಕೊಂಡಿರುವ ವಿಡಿಯೋ ವೈರಲ್ ಆಗಿದೆ. ಈ ವಿಡಿಯೋ ಇಟ್ಟುಕೊಂಡು ಗುಂಪೊಂದು ಸ್ವಾಮೀಜಿಯನ್ನು ಬ್ಲ್ಯಾಕ್‌ಮೇಲ್ ಮಾಡಿದ್ದು, ಡೀಲ್ ಕುದುರಿಸಲು ಕೂಡ ಸ್ವಾಮೀಜಿ ಮುಂದಾಗಿರುವುದು ಗೊತ್ತಾಗಿದೆ.



ಶಿವಾನಂದ ಮಠದ ಸರಸ್ವತಿ ಸ್ವಾಮೀಜಿ ಗ್ರಾಮಸ್ಥರ ಮುಂದೆ ಸನ್ಯಾಸಿಯಂತೆ ಪೋಸ್ ಕೊಡುತ್ತಿದ್ದು, ಮಠದ ಆವರಣದಲ್ಲಿ ಮಹಿಳೆಯ ಜೊತೆ ಬೆತ್ತಲೆಯಾಗಿ ಸ್ನಾನ ಮಾಡಿಸಿಕೊಂಡು ಮೈಯಲ್ಲಾ ಮಸಾಜ್ ಮಾಡಿಸಿಕೊಂಡಿದ್ದಾರೆ. ಗ್ರಾಮಸ್ಥರ ಆಧ್ಯಾತ್ಮಿಕ ಕೇಂದ್ರವಾಗಿದ್ದ ಮಠವನ್ನೇ ಸ್ವಾಮಿ ಮಸಾಜ್ ಪಾರ್ಲರ್ ಆಗಿ ಮಾಡಿಕೊಂಡಿದ್ದು ಭಕ್ತರ ಧಾರ್ಮಿಕ ಭಾವನೆಗಳಿಗೆ ತೀವ್ರ ನೋವನ್ನುಂಟು ಮಾಡಿದೆ ಎಂದು ಆರೋಪಿಸಲಾಗಿದೆ.

ವಿಡಿಯೋ ವೈರಲ್ ಆಗುತ್ತಿದ್ದಂತೆ ಸ್ಥಳೀಯರು ಕೆರಳಿದ್ದು, ಸ್ವಾಮೀಜಿ ವಿರುದ್ಧ ತೀವ್ರ ಆಕ್ರೋಶ ಹೊರಹಾಕಿದ್ದಾರೆ. ಈ ಬೆನ್ನಲ್ಲೇ ಮಹಿಳೆ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದರೇ ಅನ್ನೋ ಆರೋಪವೂ ಕೇಳಿಬಂದಿದೆ.

ಸುಮಾರು 5 ಜನರ ಗುಂಪು ಈ ವಿಡಿಯೋವನ್ನಿಟ್ಟುಕೊಂಡು ಸ್ವಾಮೀಜಿಯನ್ನ ಬ್ಲ್ಯಾಕ್‌ಮೇಲ್ ಮಾಡಿ 20 ಲಕ್ಷ ರೂಪಾಯಿಗೆ ಡಿಮ್ಯಾಂಡ್ ಮಾಡಿತ್ತು. ಗ್ರಾಮದ ವ್ಯಕ್ತಿಯೊಬ್ಬರ ಸಮ್ಮುಖದಲ್ಲಿ 10 ಲಕ್ಷಕ್ಕೆ ಡೀಲ್ ಓಕೆ ಆಗಿತ್ತು. ಬಳಿಕ ಸ್ವಾಮೀಜಿ ವಿಡಿಯೋ ಡಿಲೀಟ್ ಮಾಡುವಂತೆ ಹೇಳಿ ಮಠಕ್ಕೆ ಕರೆಸಿಕೊಂಡು 7 ಲಕ್ಷ ರೂಪಾಯಿ ಕೊಟ್ಟಿದ್ದಾರೆ. ಬಾಕಿ 3 ಲಕ್ಷ ಹಣ ಬಂದಿಲ್ಲ ಅಂತ ಗುಂಪಿನವರು ವಿಡಿಯೋ ವೈರಲ್ ಮಾಡಿದ್ದಾರೆ.

ಶ್ರದ್ಧಾ ಥರ ಕತ್ತರಿಸಿ ಹಾಕುವೆ ಎಂದು ಯುವತಿಗೆ ಬೆದರಿಕೆ; ಲೈಂಗಿಕ ದೌರ್ಜನ್ಯ, ಬ್ಲ್ಯಾಕ್‌ಮೇಲ್

ಸದ್ಯ ವಿಡಿಯೋ ಮಾಡಿ ಹಣ ವಸೂಲಿ ಮಾಡಿದ ಗ್ಯಾಂಗ್ ವಿರುದ್ಧ ಜೆಎಂಎಫ್‌ಸಿ ಕೋರ್ಟ್‌ನಲ್ಲಿ ಸ್ವಾಮೀಜಿ ದೂರು ದಾಖಲಿಸಿದ್ದಾರೆ. ವಿಡಿಯೋ ಇಟ್ಟುಕ್ಕೊಂಡು ಬ್ಲ್ಯಾಕ್ ಮೇಲ್ ಮಾಡಿರುವ ಐವರ ವಿರುದ್ಧ ಧಾರವಾಡ ಗ್ರಾಮೀಣ ಪೊಲೀಸ್ ಠಾಣೆಯಲ್ಲೂ ದೂರು ದಾಖಲಿಸಲು ಮುಂದಾಗಿದ್ದಾರೆ.

## ಬಾಲಕಿ ಮೇಲೆ ಲೈಂಗಿಕ ದೌರ್ಜನ್ಯ ಆರೋಪ;ಮೈಲಾರಿ ಅರೆಸ್ಟ್

**ಬಾಗಲಕೋಟೆ:** ಪೋಕ್ಸೊ ಪ್ರಕರಣದಲ್ಲಿ ಜಾನಪದ ಗಾಯಕ ಮ್ಯೂಸಿಕ್ ಮೈಲಾರಿ ಬಂಧನವಾಗಿದೆ. ಕೊಪ್ಪಳ ಜಿಲ್ಲೆಯ ಯಲಬುರ್ಗಾ ತಾಲೂಕಿನ ಕುಡಗುಂಟಿ ಗ್ರಾಮದ ನಿವಾಸಿಯಾಗಿರುವ ಮ್ಯೂಸಿಕ್ ಮೈಲಾರಿ ವಿರುದ್ಧ ಬಾಲಕಿ ಮೇಲೆ ಲೈಂಗಿಕ ದೌರ್ಜನ್ಯ ನಡೆಸಿದ ಆರೋಪ ಕೇಳಿಬಂದಿತ್ತು.



ಈ ಸಂಬಂಧ ಬಾಗಲಕೋಟೆ ಜಿಲ್ಲೆಯ ಮಹಾಲಿಂಗಪುರ ಠಾಣೆಯಲ್ಲಿ ಪೋಕ್ಸೊ ಕೇಸ್ ದಾಖಲಾಗಿತ್ತು. ದೂರು ದಾಖಲಿಸಿಕೊಂಡಿದ್ದ ಪೊಲೀಸರು, ವಿಜಯಪುರ ಬಳಿಯ ತಿಕೋಟಾದಲ್ಲಿ ಆರೋಪಿಯನ್ನು ಬಂಧಿಸಿದ್ದಾರೆ.

ಈ ಬಗ್ಗೆ ಮಾಹಿತಿ ನೀಡಿರುವ ಬಾಗಲಕೋಟೆ ಎಸ್ಪಿ ಸಿದ್ಧಾರ್ಥ್ ಗೋಯಲ್ ಅವರು, ಪ್ರಕರಣ ದಾಖಲಾಗುತ್ತಿದಂತೆ ಮೈಲಾರಿ ಬಂಧನಕ್ಕೆ ಬಾಗಲಕೋಟೆ ಪೊಲಿಸರು ಬಲೆ ಬೀಸಿದ್ದರು. ನೆನ್ನೆಯಿಂದ ನಮ್ಮ ತಂಡ ಮೈಲಾರಿ ಬೆನ್ನು ಬಿದ್ದಿತ್ತು. ವಿಜಯಪುರ ಮಾರ್ಗವಾಗಿ ತಿಕೋಟಾದಿಂದ ವಿಜಯಪುರಕ್ಕೆ ಪ್ರಯಾಣ ಮಾಡುತ್ತಿದ್ದ ವೇಳೆ ಅರೆಸ್ಟ್ ಮಾಡಲಾಗಿದೆ ಎಂದು ತಿಳಿಸಿದ್ದಾರೆ.

ಅಕ್ಟೋಬರ್ 24ರಂದು ಬಾಗಲಕೋಟೆ ಜಿಲ್ಲೆಯ

# ಇಥಿಯೋಪಿಯಾದ ಅತ್ಯುನ್ನತ ಗೌರವ ಪ್ರಶಸ್ತಿ ದಿ ಗ್ರೇಟ್ ಆನರ್ ನಿಶಾನ್ ಆಫ್ ಇಥಿಯೋಪಿಯಾ ಸ್ವೀಕರಿಸಿದೆ ಪ್ರಧಾನಿ ಮೋದಿ

**ಅಡಿಸ್ ಅಬಾಬಾ:** ಜೋರ್ಡಾನ್ ಜೊತೆಗೆ ಐದು ಪ್ರಮುಖ ವ್ಯಾಪಾರ ಒಪ್ಪಂದ ಮಾಡಿಕೊಂಡ ಬಳಿಕ ಇಥಿಯೋಪಿಯಾಗೆ ತೆರಳಿರುವ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಇಥಿಯೋಪಿಯಾ ರಾಷ್ಟ್ರದ ಅತ್ಯುನ್ನತ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗಿದೆ. ನರೇಂದ್ರ ಮೋದಿ ಅವರು ಈ ಪ್ರಶಸ್ತಿಯನ್ನು ಪಡೆದ ಮೊದಲ ಪ್ರಧಾನಿಯಾಗಿದ್ದಾರೆ. ಅಡಿಸ್ ಅಬಾಬಾದ ಅಡಿಸ್ ಅಂತಾರಾಷ್ಟ್ರೀಯ ಸಮಾವೇಶ ಕೇಂದ್ರದಲ್ಲಿ ನಡೆದ ವಿಶೇಷ ಸಮಾರಂಭದಲ್ಲಿ ಪ್ರಧಾನಿ ಮೋದಿ ಅವರಿಗೆ ಈ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಇಥಿಯೋಪಿಯಾದ ಅತ್ಯುನ್ನತ ಪ್ರಶಸ್ತಿಯಾದ 'ದಿ ಗ್ರೇಟ್ ಆನರ್ ನಿಶಾನ್ ಆಫ್ ಇಥಿಯೋಪಿಯಾ' ಅನ್ನು ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರಿಗೆ ಇಥಿಯೋಪಿಯಾದ ಪ್ರಧಾನಿ ಅಬಿ ಅಹ್ಮದ್ ಅಲಿ ಅವರು ಮಂಗಳವಾರ ಪ್ರದಾನ ಮಾಡಿದರು.

ಭಯೋತ್ಪಾದನೆ ನಿಗ್ರಹಕ್ಕೆ ಭಾರತದೊಂದಿಗೆ ಕೈಜೋಡಿಸಿದ ಜೋರ್ಡಾನ್



ಈ ಕುರಿತು ಮಾಹಿತಿ ನೀಡಿರುವ ವಿದೇಶಾಂಗ ಕಾರ್ಯಾಲಯ, ಭಾರತ ಮತ್ತು ಇಥಿಯೋಪಿಯಾ ಪಾಲುದಾರಿಕೆಯನ್ನು ಬಲಪಡಿಸುವಲ್ಲಿ ಪ್ರಧಾನಿ ಮೋದಿ ಅವರ ಅಸಾಧಾರಣ ಕೊಡುಗೆ ಮತ್ತು ಜಾಗತಿಕ ರಾಜಕಾರಣಿಯಾಗಿ ಅವರ ದೂರದೃಷ್ಟಿಯ ನಾಯಕತ್ವಕ್ಕಾಗಿ ಈ ಪ್ರಶಸ್ತಿಯನ್ನು ಇಥಿಯೋಪಿಯಾ ನೀಡಿ ಗೌರವಿಸಿದೆ. ಜಾಗತಿಕ ಮಟ್ಟದ ನಾಯಕರು ಮತ್ತು ದೇಶದ ಮುಖ್ಯಸ್ಥರಲ್ಲಿ ಈ ಪ್ರಶಸ್ತಿಯನ್ನು ಪಡೆದ ಮೊದಲ ನಾಯಕ ಪ್ರಧಾನಿ ಮೋದಿ ಎಂದು ತಿಳಿಸಿದೆ.

ಪ್ರಶಸ್ತಿ ಸ್ವೀಕರಿಸಿ ಎಕ್ಸ್ ನಲ್ಲಿ ಮಾಹಿತಿ ಹಂಚಿಕೊಂಡಿರುವ ಪ್ರಧಾನಿ ಮೋದಿ, ಇಥಿಯೋಪಿಯಾದ ಮಹಾನ್ ಆನರ್ ನಿಶಾನ್ ಪ್ರಶಸ್ತಿಯನ್ನು ಪಡೆದಿರುವುದು ನನಗೆ ಗೌರವ ತಂದಿದೆ. ನಾನು ಇದನ್ನು ಭಾರತದ 140 ಕೋಟಿ ಜನರಿಗೆ ಅರ್ಪಿಸುತ್ತೇನೆ ಎಂದು ಹೇಳಿದ್ದಾರೆ.

ಪ್ರಶಸ್ತಿ ಸ್ವೀಕರಿಸಿ ಮಾತನಾಡಿರುವ ಮೋದಿ, ಈ ಪ್ರಶಸ್ತಿಯನ್ನು ಸ್ವೀಕರಿಸುತ್ತಿರುವುದು ತಮಗೆ ದೊರೆತ ಅತ್ಯಂತ ಶ್ರೇಷ್ಠ ಗೌರವ. ಇದನ್ನು ನಮ್ರತೆ ಮತ್ತು ಕೃತಜ್ಞತೆಯಿಂದ ಸ್ವೀಕಾರ ಮಾಡಿದ್ದೇನೆ. ಈ ಗೌರವಕ್ಕಾಗಿ ಪ್ರಧಾನಿ ಅಬಿ ಮತ್ತು ಇಥಿಯೋಪಿಯಾದ ಜನರಿಗೆ ಹೃತ್ಪೂರ್ವಕ ಕೃತಜ್ಞತೆಗಳು ಎಂದು ಅವರು ತಿಳಿಸಿದರು.

ಇದೇ ಸಂದರ್ಭದಲ್ಲಿ ರಾಷ್ಟ್ರ ನಿರ್ಮಾಣಕ್ಕಾಗಿ ಜ್ಞಾನದ ಮಹತ್ವದ ಬಗ್ಗೆಯೂ ಅವರು ಮಾಹಿತಿ ನೀಡಿದ ಅವರು, ಈ ಪ್ರಶಸ್ತಿಯು ಭಾರತ ಮತ್ತು ಇಥಿಯೋಪಿಯಾ ನಡುವಿನ ನಿಕಟ ಪಾಲುದಾರಿಕೆ ಮತ್ತು ಜಾಗತಿಕ ದಕ್ಷಿಣದ ಸಕಾರಾತ್ಮಕ ಕಾರ್ಯಸೂಚಿಯನ್ನು ಮುಂದುವರಿಸುವಲ್ಲಿ ಒಂದು ಮೈಲುಗಲ್ಲು ಎಂದು ಅವರು ಹೇಳಿದರು.

## ಆಪರೇಷನ್ ಸಿಂದೂರ್‌ನ ಮೊದಲ ದಿನವೇ ಭಾರತೀಯ ಸೇನೆ ಸೋತಿದೆ; ನಾಲಿಗೆ ಹರಿಬಿಟ್ಟ ಕೈ ಶಾಸಕ ಪೃಥ್ವಿರಾಜ್

**ಪುಣೆ:** ಕಾಶ್ಮೀರದ ಪಹಲ್ಗಾಮ್‌ನ ಬೈಸರನ್ ಕಣಿವೆಯಲ್ಲಿ ಕಳೆದ ಏಪ್ರಿಲ್ ತಿಂಗಳಾಂತ್ಯದಲ್ಲಿ ನಡೆದ ಭಯೋತ್ಪಾದನಾ ದಾಳಿಗೆ ಪ್ರತಿಯಾಗಿ ಮೇ 7ರಂದು ಭಾರತೀಯ ಸೇನೆ ನಡೆಸಿದ ಆಪರೇಷನ್ ಸಿಂದೂರ್ ಕಾರ್ಯಾಚರಣೆಯ ಮೊದಲ ದಿನವೇ ಭಾರತೀಯ ವಾಯುಸೇನೆಗೆ ಭಾರಿ ಪ್ರಮಾಣದಲ್ಲಿ ಸೋಲುಂಟಾಗಿದೆ ಎಂದು ಮಹಾರಾಷ್ಟ್ರದ ಮಾಜಿ ಮುಖ್ಯಮಂತ್ರಿ ಮತ್ತು ಹಿರಿಯ ಕಾಂಗ್ರೆಸ್ ನಾಯಕ ಪೃಥ್ವಿರಾಜ್ ಚವಾಣ್ ಅವರು ವಿವಾದಾತ್ಮಕ ಹೇಳಿಕೆ ನೀಡಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಆಪರೇಷನ್ ಸಿಂದೂರ್ ನ ಮೊದಲ ದಿನವೇ ಭಾರತೀಯ ವಾಯುಸೇನೆ ಸೋತಿದೆ ಎಂದು ಹೇಳಿದ್ದಾರೆ.



ಆಪರೇಷನ್ ಸಿಂದೂರ್‌ನ ಮೊದಲ ದಿನವೇ ಭಾರತ ಸೋತಿತು. ನಾಲ್ಕು ದಿನಗಳ ಸಂಘರ್ಷದಲ್ಲಿ ಭಾರತೀಯ ವಿಮಾನಗಳನ್ನು ಹೊಡೆದುರುಳಿಸಲಾಗಿದೆ. ಪಾಕಿಸ್ತಾನದಿಂದ ಹೊಡೆದುರುಳಿಸುವ ಸಾಧ್ಯತೆಯ ನಡುವೆಯೇ ಭಾರತೀಯ ವಾಯುಪಡೆಯ ಯುದ್ಧವಿಮಾನಗಳು ಸಂಪೂರ್ಣವಾಗಿ ನೆಲ ಕಚ್ಚಿವೆ ಎಂದು ಹೇಳಿದ್ದಾರೆ.

ಮೇ 7ರಂದು ನಡೆದ ಅರ್ಧ ಗಂಟೆಯ ವೈಮಾನಿಕ ಕಾರ್ಯಾಚರಣೆಯಲ್ಲಿ ನಾವು ಸಂಪೂರ್ಣವಾಗಿ ಸೋತಿದ್ದೇವೆ. ಭಾರತೀಯ ವಿಮಾನಗಳನ್ನು ಹೊಡೆದುರುಳಿಸಲಾಗಿದೆ. ವಾಯುಪಡೆಯನ್ನು ಸಂಪೂರ್ಣವಾಗಿ ನೆಲಸಮ ಮಾಡಲಾಗಿದೆ. ಒಂದೇ ಒಂದು ವಿಮಾನವೂ ಕೂಡ ಹಾರಲಿಲ್ಲ. ಗ್ವಾಲಿಯರ್, ಬಟಿಂಡಾ ಅಥವಾ ಸಿರ್ಸಾದಿಂದ ಯಾವುದೇ ವಿಮಾನ ಹಾರಾಟ ನಡೆಸಿದ್ದರೆ ಪಾಕಿಸ್ತಾನವು ಅದನ್ನು ಹೊಡೆದುರುಳಿಸುತ್ತಿತ್ತು. ಅದಕ್ಕಾಗಿ ಇಲ್ಲಿನ ವಾಯುಪಡೆಯನ್ನು ಸಂಪೂರ್ಣವಾಗಿ ನೆಲಸಮ ಮಾಡಲಾಯಿತು ಎಂದು ಅವರು ತಿಳಿಸಿದ್ದಾರೆ.

ಭಾರತೀಯ ವಾಯುಸೇನೆಯು ಯುದ್ಧಗಳನ್ನು ಗಾಳಿಯಲ್ಲಿ ನಡೆಸುತ್ತದೆ. ಇದಕ್ಕಾಗಿ ದೊಡ್ಡ ಮಿಲಿಟರಿ ಪಡೆಗಳನ್ನು ನಿರ್ವಹಿಸುವ ಅಗತ್ಯವೇನಿದೆ ಎಂದು ಪ್ರಶ್ನಿಸಿರುವ ಅವ್ರು, ಆಪರೇಷನ್ ಸಿಂದೂರ್ ನಲ್ಲಿ ಮಿಲಿಟರಿಯ ಒಂದು ಕಿಲೋಮೀಟರ್ ಕೂಡ ಚಲಿಸಿಲ್ಲ. ಎರಡು ಅಥವಾ ಮೂರು ದಿನಗಳಲ್ಲಿ ನಡೆದಿರುವುದು ಕೇವಲ ವೈಮಾನಿಕ ಮತ್ತು ಕ್ಷಿಪಣಿ ಯುದ್ಧವಾಗಿತ್ತು. ಭವಿಷ್ಯದಲ್ಲಿಯೂ ಸಹ ಇದೇ ರೀತಿಯ ಯುದ್ಧಗಳು ನಡೆಯುತ್ತವೆ. ಹೀಗಿರುವಾಗ 12 ಲಕ್ಷ ಸೈನಿಕರ ಸೈನ್ಯವನ್ನು ನಿರ್ವಹಿಸುವ ಅಗತ್ಯವಿದೆಯೇ ಎಂದು ಅವರು ಪ್ರಶ್ನಿಸಿದ್ದಾರೆ.

ಕಾಂಗ್ರೆಸ್ ಶಾಸಕನ ಹೇಳಿಕೆಗೆ ಈ ಹಿಂದೆಯೇ ವಾಯುಸೇನೆ ಪ್ರತಿಕ್ರಿಯೆ ನೀಡಿತ್ತು. ಆದರೂ ಇಂಡೋನೇಷ್ಯಾದಲ್ಲಿ ನಡೆದ ವಿಚಾರ ಸಂಕಿರಣವೊಂದರಲ್ಲಿ ಅವರ ಹೇಳಿಕೆಯನ್ನು ಭಾರತ ನಿರಾಕರಿಸಿದೆ.

ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಪ್ರತಿಕ್ರಿಯೆಯಾಗಿ ಮೇ 7 ರಂದು ಆಪರೇಷನ್ ಸಿಂದೂರ್ ಕಾರ್ಯಾಚರಣೆಯನ್ನು ನಡೆಸಿದ್ದು, ಇದರಲ್ಲಿ 26 ಮಂದಿ ಪ್ರಾಣ ತ್ಯಾಗ ಮಾಡಿದ್ದಾರೆ. ಭಾರತೀಯ ವಾಯುಸೇನೆ ನಡೆಸಿದ ಆಪರೇಷನ್ ಸಿಂದೂರ್ ಕಾರ್ಯಾಚರಣೆಯು ಮೇ 7 ರಿಂದ 10 ರವರೆಗೆ ಭಾರತ ಮತ್ತು ಪಾಕಿಸ್ತಾನದ ನಡುವಿನ ಸಂಘರ್ಷಕ್ಕೆ ಕಾರಣವಾಗಿತ್ತು. ಈ ಸಂಘರ್ಷದಲ್ಲಿ 100 ಕ್ಕೂ ಹೆಚ್ಚು ಭಯೋತ್ಪಾದಕರು ಸಾವನ್ನಪ್ಪಿದ್ದಾರೆ ಎಂದು ಭಾರತೀಯ ಸೇನೆ ತಿಳಿಸಿದೆ.

# ಸಮರ್ಪಕವಾಗಿ ಒಳಮೀಸಲಾತಿ ಜಾರಿಗೊಳಿಸದಿದ್ರೆ ಸರ್ಕಾರ ಕಿತ್ತೊಗೆಯುವ ಸಂಕಲ್ಪ: ಎ.ನಾರಾಯಣಸ್ವಾಮಿ

**ಬೆಳಗಾವಿ:** ಒಳಮೀಸಲಾತಿಯನ್ನು ರಾಜ್ಯದಲ್ಲಿ ಸಮರ್ಪಕವಾಗಿ ಜಾರಿ ಮಾಡದೇ ಇದ್ದಲ್ಲಿ ಈ ಸರ್ಕಾರವನ್ನು ಕಿತ್ತೊಗೆಯುವ ಸಂಕಲ್ಪವನ್ನು ರಾಜ್ಯದ ಶೋಷಿತ ಮಾದಿಗರು, ಉಪ ಜಾತಿಗಳು ಮಾಡಲಿವೆ ಎಂದು ಕೇಂದ್ರದ ಮಾಜಿ ಸಚಿವ ಎ. ನಾರಾಯಣಸ್ವಾಮಿ ಎಚ್ಚರಿಸಿದ್ದಾರೆ.

ಬೆಳಗಾವಿಯಲ್ಲಿ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಅವರು, ಮುಂಬಡ್ತಿ ಮೀಸಲಾತಿ ಅನುಷ್ಠಾನ ಸಂಬಂಧ ಈ ಸದನದಲ್ಲಿ ತಿದ್ದುಪಡಿ ಮಾಡಬೇಕು ಎಂದು ಆಗ್ರಹಿಸಿದರು.

ಹರಿಯಾಣ, ಪಂಜಾಬ್, ಆಂಧ್ರಪ್ರದೇಶದಲ್ಲಿ ಮುಂಬಡ್ತಿ ಮೀಸಲಾತಿ ಇದೆ. ತಮಿಳುನಾಡಿನಲ್ಲೂ ಇದೆ. ಕರ್ನಾಟಕದಲ್ಲಿ ಇದು ಆಗಬೇಕು ಎಂದು ತಿಳಿಸಿದ ಅವರು, ಕಳೆದ 20 ವರ್ಷಗಳಿಂದ ನಾನು ಹೋರಾಟದ ಭಾಗವಾಗಿದ್ದೇನೆ ಎಂದು ಹೇಳಿದರು

2023ರಲ್ಲಿ ಸಿದ್ದರಾಮಯ್ಯ ಅವರು



ಮಾದಿಗ ಉಪ ಜಾತಿಗಳಿಗೆ ಒಳ ಮೀಸಲಾತಿ ಕೊಡುವುದಾಗಿ ಮತ್ತೊಮ್ಮೆ ಪ್ರಣಾಳಿಕೆಯಲ್ಲಿ ತಿಳಿಸಿ ಅಧಿಕಾರಕ್ಕೆ ಬಂದರು. ಬಳಿಕ ಜನತೆಯ ದಿಕ್ಕು ತಪ್ಪಿಸಿದ್ದರು ಎಂದು ಆರೋಪಿಸಿದರು.

ಒಳ ಮೀಸಲಾತಿ ಜಾರಿಯ ನಂತರ ಮೀಸಲಾತಿ ಮಿತಿಯು ಶೇ. 50 ಅನ್ನು ಮೀರಬಾರದು ಎಂದು ಸುಪ್ರೀಂ ಕೋರ್ಟಿನ ನಿರ್ದೇಶನ ಇದ್ದರೂ, ಯಾವ ರಾಜ್ಯದಲ್ಲಿ ಶೇ. 50 ಮಿತಿಯಿಂದ ಹೆಚ್ಚು ನೀಡುವ ಅವಶ್ಯಕತೆ ಇದ್ದರೆ, ಮಿತಿಯನ್ನು ಮೀರಬಹುದೆಂದು ತೀರ್ಪಿತ್ತಿದ್ದಾರೆ. ಛತ್ತೀಸಗಡದಲ್ಲಿ ಶೇ.58 ಮಾಡಿದ್ದರು. ಅಲ್ಲಿ ಹೈಕೋರ್ಟಿನ ತಡೆಯಾಜ್ಞೆಯನ್ನು ಸುಪ್ರೀಂ ಕೋರ್ಟ್ ತೆರವುಗೊಳಿಸಿದೆ ಎಂದು ತಿಳಿಸಿದರು.

ಚಳಿಗಾಲದ ಅಧಿವೇಶನ ಇಲ್ಲಿ ನಡೆಯುತ್ತಿದೆ. ಒಳಮೀಸಲಾತಿಯ ಪ್ರಮುಖ ಚರ್ಚೆ ಆಗಬೇಕಿದೆ. ರಾಜ್ಯದಲ್ಲಿ 35 ವರ್ಷಗಳಿಂದ ಒಳಮೀಸಲಾತಿಯ ಹೋರಾಟ ನಡೆದಿದೆ. ಸದಾಶಿವ ಆಯೋಗದ ವರದಿ, ಮಾಧುಸ್ವಾಮಿ ವರದಿ, ನಾಗಮೋಹನದಾಸ್ ವರದಿ ಸೇರಿ ಅನೇಕ ಆಯೋಗದ ವರದಿಗಳು ಬಂದ ನಂತರವೂ ನ್ಯಾಯ ಸಿಕ್ಕಿಲ್ಲ ಎಂದು ದೂರಿದರು.

ವಿಧಾನಸಭೆಯಲ್ಲಿ ಗ್ರೇಟರ್ ಬೆಂಗಳೂರು ಆಡಳಿತ 2ನೇ ತಿದ್ದುಪಡಿ ವಿಧೇಯಕಕ್ಕೆ ಅಂಗೀಕಾರ

ಪತ್ರಿಕಾಗೋಷ್ಠಿಯಲ್ಲಿ ಶಾಸಕರಾದ ದುರ್ಯೋಧನ ಐಹೊಳೆ, ಬಸವರಾಜ್ ಮತ್ತಿಮಡು, ಎಸ್.ಸಿ. ಮೋರ್ಚಾ ರಾಜ್ಯ ಉಪಾಧ್ಯಕ್ಷ ಹೂಡಿ ಮಂಜುನಾಥ್, ಮುಖಂಡರಾದ ಅನಂತ್, ಸತ್ಯಪ್ರಸಾದ್, ರಾಜೇಂದ್ರ, ಸಿದ್ದು, ರಮೇಶ್, ಅಜಿತ್, ಮೋಹನ್, ಪ್ರಶಾಂತ್ ಸೇರಿ ಹಲವು ಮುಖಂಡರು ಭಾಗವಹಿಸಿದ್ದರು.

## ರಸ್ತೆ ಬದಿ ನಿಂತಿದ್ದ ಯುವತಿಯನ್ನು ಅನುಚಿತವಾಗಿ ಸ್ಪರ್ಶಿಸಿದ ಯುವಕ

**ಲಖನೌ:** ರಸ್ತೆ ಬದಿ ನಿಂತಿದ್ದ ಯುವತಿಯನ್ನು ಯುವಕನೊಬ್ಬ ಅನುಚಿತವಾಗಿ ಸ್ಪರ್ಶಿಸಿದ ಆಘಾತಕಾರಿ ಘಟನೆ ಉತ್ತರ ಪ್ರದೇಶದ ಝಾನ್ಸಿಯಲ್ಲಿ ನಡೆದಿದೆ. ಇದರ ದೃಶ್ಯ ಸಿಸಿ ಕ್ಯಾಮರಾದಲ್ಲಿ ಸೆರೆಯಾಗಿದ್ದು, ವಿಡಿಯೊ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗಿದೆ.

ಈಗ ವೈರಲ್ ಆಗಿರುವ ವಿಡಿಯೊದ ಆರಂಭದಲ್ಲಿ ಇಬ್ಬರು ಯುವತಿಯರು ವಸತಿ ಪ್ರದೇಶದ ಲೇನ್‌ನಲ್ಲಿ ತಮ್ಮ ಮನೆಯ ಗೇಟ್‌ನಲ್ಲಿ ನಿಂತು ಮಾತನಾಡುತ್ತಿರುವುದನ್ನು ಕಾಣಬಹುದು.

ಇದ್ದಕ್ಕಿದ್ದಂತೆ ಬೈಕ್‌ನಲ್ಲಿ ಇಬ್ಬರು ಪುರುಷರು ಬಂದಿದ್ದಾರೆ. ಬೈಕ್ ಸ್ವಲ್ಪ ಸಮಯದವರೆಗೆ ನಿಧಾನವಾಗುತ್ತದೆ.

ಆಗ ಹಿಂಬದಿಯ ಸವಾರ ಇಳಿದು ಇಬ್ಬರು ಯುವತಿಯರ ಬಳಿಗೆ ಹೋಗಿದ್ದಾನೆ. ನಂತರ ಅವನು ಒಬ್ಬ ಹುಡುಗಿಯ ಎದೆಯನ್ನು ಮುಟ್ಟಿ ಬೈಕ್ ಹತ್ತಿ ಪರಾರಿಯಾಗಿದ್ದಾನೆ.

ಯುವತಿಯು ತಕ್ಷಣ ಅಸಭ್ಯ ನಡವಳಿಕೆ ಎಂದು ಕೂಗಿದ್ದಾಳೆ. ಘಟನೆಯಿಂದ ಆಕೆ ನಡುಗಿ ಹೋಗಿದ್ದಾಳೆ.

ಈ ವಿಡಿಯೊ ವೈರಲ್ ಆದ ಬೆನ್ನಲ್ಲೇ ಝಾನ್ಸಿ ಪೊಲೀಸರು ಎಫ್‌ಐಆರ್ ದಾಖಲಿಸಿದ್ದಾರೆ. ಇಬ್ಬರು ದುಷ್ಕರ್ಮಿಗಳ ವಿರುದ್ಧ ಕ್ರಮ ಕೈಗೊಂಡಿರುವುದಾಗಿ ಪೊಲೀಸರು ಪ್ರತಿಕ್ರಿಯಿಸಿದ್ದಾರೆ.

# ಬಲೂನ್ ಮೂಲಕ ಪಾಕಿಸ್ತಾನ ಬೇಹುಗಾರಿಕೆ; ಹಿಮಾಚಲದಲ್ಲಿ ಪತ್ತೆಯಾಯ್ತು ಸ್ಫೋಟಕ ಮಾಹಿತಿ

**ಶಿಮ್ಲಾ:** ಮನೆಯೊಂದರ ಛಾವಣಿಯ ಮೇಲೆ ಪಾಕಿಸ್ತಾನದ ಗುರುತುಗಳನ್ನು ಹೊಂದಿರುವ ಅನುಮಾನಾಸ್ಪದ ಬಲೂನ್ ಪತ್ತೆಯಾಗಿರುವ ಘಟನೆ ಹಿಮಾಚಲ ಪ್ರದೇಶದ ಉನಾ ಜಿಲ್ಲೆಯಲ್ಲಿ ನಡೆದಿದ್ದು, ಗ್ರಾಮದ ನಿವಾಸಿಗಳಲ್ಲಿ ಆತಂಕ ಮೂಡಿಸಿದೆ. ಆ ಬಲೂನ್ ವಿಮಾನವನ್ನು ಹೋಲುತ್ತಿದ್ದು, ಪಾಕಿಸ್ತಾನಿ ಧ್ವಜದ ಗುರುತುಗಳು ಮತ್ತು ಅದರ ಮೇಲೆ (ಪಾಕಿಸ್ತಾನ ಅಂತಾರಾಷ್ಟ್ರೀಯ ವಿಮಾನಯಾನ ಸಂಸ್ಥೆ) ಎಂದು ಬರೆಯಲಾಗಿದೆ. ಉನಾ ಜಿಲ್ಲೆಯ ಮತ್ತೊಂದು ಗ್ರಾಮದಲ್ಲಿ ಇದೇ ರೀತಿಯ ಘಟನೆ ವರದಿಯಾದ ಕೆಲವು ದಿನಗಳ ನಂತರ ಈ ಘಟನೆ ನಡೆದಿದ್ದು, ಸ್ಥಳೀಯರಲ್ಲಿ ಆತಂಕಕ್ಕೆ ಕಾರಣವಾಗಿದೆ.

ಆಸ್ಟ್ರೇಲಿಯಾದ ಬೊಂಡಿ ಬೀಚ್‌ನಲ್ಲಿ ಯಹೂದಿಯರ ರಕ್ತಪಾತಗೈದ ಹಂತಕನಿಗೆ ಭಾರತೀಯ ಲಿಂಕ್





ಚಾಲೆಟ್ ಗ್ರಾಮದ ನಿವಾಸಿಯೊಬ್ಬರು ತಮ್ಮ ಮನೆಯ ಛಾವಣಿಯ ಮೇಲೆ ಬಲೂನ್ ಅನ್ನು ಕಂಡು ದೌಲತ್‌ಪುರ ಪೊಲೀಸ್ ಠಾಣೆಗೆ ಮಾಹಿತಿ ನೀಡಿದರು. ಪೊಲೀಸ್ ಠಾಣೆಯ ಉಸ್ತುವಾರಿ ರವಿಪಾಲ್ ತಮ್ಮ ತಂಡದೊಂದಿಗೆ ಸ್ಥಳಕ್ಕೆ ತಲುಪಿ ಪರಿಸ್ಥಿತಿಯನ್ನು ಅವಲೋಕಿಸಿದರು. ಪೊಲೀಸರು ಬಲೂನನ್ನು ವಶಕ್ಕೆ ಪಡೆದಿದ್ದಾರೆ.

ಇದರ ನಂತರ, ಮುನ್ನೆಚ್ಚರಿಕೆ ಕ್ರಮವಾಗಿ ಪೊಲೀಸರು ಸುತ್ತಮುತ್ತಲಿನ ಪ್ರದೇಶವನ್ನು, ಇತರ ಅನುಮಾನಾಸ್ಪದ ವಸ್ತುಗಳನ್ನು ಪರಿಶೀಲಿಸಿದರು. ಇದಕ್ಕೂ ಮೊದಲು, ಡಿಸೆಂಬರ್ 8 ರಂದು ಗ್ಯಾಗ್ರೆಟ್ ಉಪವಿಭಾಗದ ಟಟೆಹ್ರಾ ಗ್ರಾಮದಲ್ಲಿ ಅಂತಹ ಮೂರು ಬಲೂನ್‌ಗಳು ಕಂಡುಬಂದಿದ್ದವು. ಆ ಬಲೂನ್‌ಗಳ ಮೇಲೆ ಪಾಕಿಸ್ತಾನಿ ಧ್ವಜದ ಗುರುತುಗಳಿದ್ದು, ಅವುಗಳ ಮೇಲೆ ಐ ಲವ್ ಪಾಕಿಸ್ತಾನ್ ಎಂದು ಬರೆಯಲಾಗಿತ್ತು.

ಬಲೂನ್‌ಗಳಿಗೆ ಯಾವುದೇ ಸಾಧನಗಳನ್ನು ಜೋಡಿಸಲಾಗಿಲ್ಲ ಎಂದು ಪೊಲೀಸ್ ತಂಡ ತಿಳಿಸಿದೆ. ಇನ್ನು ಈ ಬಲೂನ್ ಅನ್ನು ಹಾರಿಸಿದವರು ಯಾರು ಎಂಬ ಬಗ್ಗೆ ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

## ಅಕ್ರಮ ಪಿಂಚಣಿ ಮಂಜೂರು ಮಾಡಿದ ಭ್ರಷ್ಟ ಅಧಿಕಾರಿಗಳ ಅಮಾನತು: ಮೀನಾನಾಗರಾಜ್

**ಚಿಕ್ಕಮಗಳೂರು:** ಕಡೂರು ತಾಲ್ಲೂಕು ಕಂದಾಯ ಇಲಾಖೆಯ ಸಾಮಾಜಿಕ ಭದ್ರತಾ ಯೋಜನೆಯ ಸಂಧ್ಯಾ ಸುರಕ್ಷಾ ಮತ್ತು ವೃದ್ಧಾಪ್ಯ ವೇತನದ ಅಕ್ರಮ ಪಿಂಚಣಿ ಮಂಜೂರು ಮಾಡಿದ 11 ಜನ ಅಧಿಕಾರಿ ಸಿಬ್ಬಂದಿಗಳ ಮೇಲೆ ಜಿಲ್ಲಾಧಿಕಾರಿ ಸಿ.ಎನ್ ಮೀನಾ ನಾಗರಾಜ್ ಶಿಸ್ತುಕ್ರಮ ಕೈಗೊಂಡು ಅಮಾನತ್ತು ಮಾಡಿದ್ದಾರೆ. ಈ ಬಗ್ಗೆ ಕಡೂರು ತಾಲ್ಲೂಕಿನ ಕಸಬಾ ಹೋಬಳಿಯ ಸಂಧ್ಯಾ ಸುರಕ್ಷಾ ಮತ್ತು ವೃದ್ಧಾಪ್ಯ ವೇತನದ ಪಿಂಚಣಿ ಅಕ್ರಮದ ಒಟ್ಟು 64 ಪ್ರಕರಣಗಳಿಗೆ ಸಂಬಂಧಿಸಿದಂತೆ NK-5 ತಂತ್ರಾಂಶದ ಲಾಗಿನ್‌ನಲ್ಲಿ ಅಕ್ರಮವಾಗಿ ಮಧ್ಯವಯಸ್ಸಿನವರಿಗೆ ಮಂಜೂರು ಮಾಡಿರುವ ಬಗ್ಗೆ ಹಿಂದಿನ ಉಪವಿಭಾಗಾಧಿಕಾರಿಗಳಿಂದ ತನಿಖೆ ನಡೆಸಿ ಅಕ್ರಮದಲ್ಲಿ ಭಾಗಿಯಾದ ಅಧಿಕಾರಿ ಸಿಬ್ಬಂದಿಗಳ ಮೇಲೆ ಶಿಸ್ತುಕ್ರಮ ಕೈಗೊಳ್ಳಲು ಹಾಗೂ ಸರ್ಕಾರದ ಖಜಾನೆ ಮತ್ತು ಬೊಕ್ಕಸಕ್ಕೆ ಆರ್ಥಿಕ ನಷ್ಟ ಉಂಟುಮಾಡಿರುವ 9 ಲಕ್ಷ ಹಣವನ್ನು ವಾಪಸ್ಸು ಸರ್ಕಾರಕ್ಕೆ ಮರು ಬವಣೆ ಮಾಡಿ ಎಲ್ಲ ಅಧಿಕಾರಿ ಸಿಬ್ಬಂದಿಗಳ ಮೇಲೆ ಅವರ ಕಾರ್ಯವ್ಯಾಪ್ತಿಯ ಪೊಲಿಸ್ ಠಾಣೆಯಲ್ಲಿ ಕ್ರಿಮಿನಲ್ ಪ್ರಕರಣ ದಾಖಲಿಸಿ ಮಾಡಿ 18 ದಿನಗಳು ಕಳೆದ ಮೇಲೆ ನೆನ್ನೆ ಅಮಾನತು ಮಾಡಿದ್ದಾರೆ.





**ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ**

ಬೆಂಗಳೂರು ದಕ್ಷಿಣ ಜಿಲ್ಲಾ ಪಂಚಾಯತ್,
ಕಾರ್ಯಪಾಲಕ ಅಭಿಯಂತರವರ ಕಛೇರಿ,
ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ರಾಮನಗರ,
ಬೆಂಗಳೂರು ದಕ್ಷಿಣ ಜಿಲ್ಲೆ

ಇ-ಪ್ರೊಕ್ಯೂರ್‌ಮೆಂಟ್ ಟೆಂಡರ್ ಪ್ರಕಟಣೆ ಸಂಖ್ಯೆ :
27/1353-1362/2025-26 ದಿನಾಂಕ : 10-12-2025

**ಟೆಂಡರ್ ಪ್ರಕಟಣೆ**

(ಇ-ಪ್ರೊಕ್ಯೂರ್‌ಮೆಂಟ್ ಪೋರ್ಟಲ್ ಮುಖಾಂತರ ಮಾತ್ರ)

ಲೋಕೋಪಯೋಗಿ ಇಲಾಖೆಯಲ್ಲಿ ನೊಂದಾವಣೆ ಮಾಡಿಸಿಕೊಂಡಿರುವ **ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ,** ಕರ್ನಾಟಕ ಸರ್ಕಾರ ಇಲ್ಲಿ ಅಧಿಕೃತ ಅರ್ಹ ಗುತ್ತಿಗೆದಾರರಿಂದ ಹಾಗೂ ಸರ್ಕಾರಿ ನೊಂದಾಯಿತ ಕಂಪನಿಯವರಿಂದ ಇ-ಪ್ರೊಕ್ಯೂರ್‌ಮೆಂಟ್ **ವೆಬ್‌ಸೈಟ್ : https://kppp.karnataka.gov.in** ಮುಖಾಂತರ **ಈ ಕಛೇರಿ ವ್ಯಾಪ್ತಿಯಲ್ಲಿ ಬೆಂಗಳೂರು ದಕ್ಷಿಣ ಜಿಲ್ಲೆಯ ರಾಮನಗರ, ಚನ್ನಪಟ್ಟಣ, ಕನಕಪುರ ಮತ್ತು ಮಾಗಡಿ ತಾಲ್ಲೂಕಿನಲ್ಲಿ** ಲೆಕ್ಕ ಶೀರ್ಷಿಕೆ : ವಿವಿಧ ಯೋಜನೆಯಡಿಯಲ್ಲಿ ಕಾಮಗಾರಿಗಳಿಗೆ ಅಲ್ಪಾವಧಿ ಟೆಂಡರ್‌ನ್ನು ಆಹ್ವಾನಿಸಲಾಗಿದೆ.

**1) ಕನಿಷ್ಠ ಅಂದಾಜು ಮೊತ್ತ : ರೂ. 10.00 ಲಕ್ಷಗಳು, ಗರಿಷ್ಠ ಅಂದಾಜು ಮೊತ್ತ : ರೂ. 16.00 ಲಕ್ಷಗಳು, 2) ಟೆಂಡರ್ ಸಲ್ಲಿಸುವ ಕಡೆಯ ದಿನಾಂಕ : 24-12-2025 ರ ಸಂಜೆ 4.00 ಗಂಟೆಯವರೆಗೆ. 3) ಟೆಂಡರ್ ತಾಂತ್ರಿಕ ಬಿಡ್ ತೆರೆಯುವ ದಿನಾಂಕ : 26-12-2025 ರ ಸಂಜೆ 4.30 ಗಂಟೆಯ ನಂತರ.**

ಇತರೆ ಮಾಹಿತಿಗಳನ್ನು ಈ ಕಛೇರಿಯಿಂದ ಅಥವಾ **https://kppp.karnataka.gov.in** ವೆಬ್‌ಸೈಟ್ ಮೂಲಕ ಪಡೆಯಬಹುದು.

ಸಹಿ/- ಕಾರ್ಯಪಾಲಕ ಅಭಿಯಂತರರು,
ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ,
ರಾಮನಗರ, ಬೆಂಗಳೂರು ದಕ್ಷಿಣ ಜಿಲ್ಲೆ.

ಡಿಐಪಿಆರ್/ರಾಮನಗರ/495/ಮಣಿಪಾಲ್/2025-26


# ವಿದ್ಯಾರ್ಥಿಗಳಲ್ಲಿ ಕುತೂಲಹದ ಜೊತೆಗೆ ಪ್ರತಿಭೆ ಹೊರತರಲು ವಿಜ್ಞಾನ ವಸ್ತು ಪ್ರದರ್ಶನ ಉಪಯುಕ್ತ: ಡಾ. ಸಿ.ಟಿ ಜಯದೇವ

**ಚಿಕ್ಕಮಗಳೂರು:** ವಿದ್ಯಾರ್ಥಿಗಳಲ್ಲಿ ಕತೂಹಲ ಮೂಡಿಸುವ ಜೊತೆಗೆ ಅವರಲ್ಲಿರುವ ಪ್ರತಿಭೆಗಳನ್ನು ಹೊರತರಲು ವಿಜ್ಞಾನ ವಸ್ತುಪ್ರದರ್ಶನ ಬಹಳ ಉಪಯುಕ್ತವಾಗಿದೆ ಎಂದು ಎಐಟಿ ಪ್ರಾಂಶುಪಾಲ ಡಾ. ಸಿ.ಟಿ ಜಯದೇವ ತಿಳಿಸಿದರು.

ಅವರು ಇಂದು ನಗರದ ವಿಜಯಪುರದಲ್ಲಿರುವ ಜೆವಿಎಸ್ ಶಾಲೆಯಲ್ಲಿ ಆಯೋಜಿಸಲಾಗಿದ್ದ ವಿಜ್ಞಾನ ವಸ್ತು ಪ್ರದರ್ಶನದ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು.

ವಿಜ್ಞಾನ, ತಂತ್ರಜ್ಞಾನ, ಕೃಷಿ ಮುಂತಾದವುಗಳಿಗೆ ಸಂಬಂದಿಸಿದ ವಸ್ತುಗಳ ತಯಾರಿಕೆ ಬಗ್ಗೆ ಬಹಳಷ್ಟು ಶಿಕ್ಷಕರು ಮಾರ್ಗದರ್ಶನದ ಮೂಲಕ ಶ್ರಮಿಸಿದ್ದಾರೆ. ವಿದ್ಯಾರ್ಥಿಗಳ ಉಜ್ವಲ ಭವಿಷ್ಯದ ಹಿನ್ನೆಲೆಯಲ್ಲಿ ಜೆವಿಎಸ್ ಶಾಲೆ



ಇಂತಹ ವಿಜ್ಞಾನ ವಸ್ತುಪ್ರದರ್ಶನ ಆಯೋಜನೆ ಮಾಡಿರುವುದು ಶ್ಲಾಘನೀಯ. ಇದರಿಂದಾಗಿ ವಿದ್ಯಾರ್ಥಿಗಳು ವಿಜ್ಞಾನದ ಬಗ್ಗೆ ಹೆಚ್ಚು ಹೆಚ್ಚು ತಿಳಿದುಕೊಳ್ಳಲು ಸಹಕಾರಿಯಾಗಿದೆ ಎಂದರು.

ವಿದ್ಯಾರ್ಥಿಗಳು ವಿಜ್ಞಾನ ವಿಷಯದಲ್ಲಿ ಅಧ್ಯಯನ ಮಾಡಿ ಪ್ರಾಯೋಗಿಕವಾಗಿ ಉಪಯೋಗಿಸಿಕೊಳ್ಳುವ ಬಗ್ಗೆ ತಿಳಿದುಕೊಂಡಿರುವುದಿಲ್ಲ. ಈ ಸಂಬಂಧ ಸಮಾಜಕ್ಕೆ ಉಪಯೋಗವಾಗುವ ರೀತಿ ವಸ್ತುಪ್ರದರ್ಶನಗಳು ಬಳಕೆಯಾಗಬೇಕೆಂದು ಹೇಳಿದರು.

ಸಾರ್ವಜನಿಕರಿಗೆ ವಿಜ್ಞಾನವಿಲ್ಲದೆ ಬದುಕು ದುಸ್ತರವಾಗುತ್ತದೆ, ಇಂದು ವಿಜ್ಞಾನ ಕ್ಷೇತ್ರದಲ್ಲಿ ನೂತನ ಎಐ ತಂತ್ರಜ್ಞಾನದಂತಹ ಆವಿಷ್ಕಾರಗಳಾಗುತ್ತಿದ್ದು, ಈ ಬಗ್ಗೆ ವಿದ್ಯಾರ್ಥಿಗಳು ತಿಳಿದುಕೊಳ್ಳುವ ಅಗತ್ಯ ಇದೆ ಎಂದು ಹೇಳಿದರು.

ಮುಂದಿನ ದಿನಗಳಲ್ಲಿ ಕೌಶಲ್ಯ ಮತ್ತು ಸಾಮಾನ್ಯ ಜ್ಞಾನ ಬೆಳೆಸಿಕೊಳ್ಳಬೇಕು, ಇಲ್ಲದಿದ್ದರೆ ವಿದ್ಯಾರ್ಥಿಗಳ ಭವಿಷ್ಯ ಕಷ್ಟಸಾಧ್ಯ ಎಂದು ತಿಳಿಸಿದರು.

ನಿನ್ನೆ ನಡೆದ ವಿಜ್ಞಾನ ವಸ್ತುಪ್ರದರ್ಶನದಲ್ಲಿ ಸುಮಾರು 114 ಕ್ಕೂ ಹೆಚ್ಚು ವಿವಿಧ ರೀತಿಯ ವಸ್ತುಪ್ರದರ್ಶನ ನಡೆದಿರುವುದು ವಿದ್ಯಾರ್ಥಿಗಳಲ್ಲಿ ಆಸಕ್ತಿ ಮೂಡಿಸಲು ಸಹಕಾರಿಯಾಗಲಿದೆ ಎಂದರು.

ಜಿಲ್ಲಾ ಒಕ್ಕಲಿಗರ ಸಂಘದ ಅಧ್ಯಕ್ಷ ಟಿ. ರಾಜಶೇಖರ್ ಮಾತನಾಡಿ, ವಿದ್ಯಾರ್ಥಿಗಳಲ್ಲಿ ಜ್ಞಾನ ಮತ್ತು ತಂತ್ರಜ್ಞಾನದ ಬಗ್ಗೆ ಅರಿವು ಮೂಡಿಸುವುದೇ ವಿಜ್ಞಾನ ವಸ್ತುಪ್ರದರ್ಶನದ ಉದ್ದೇಶ, ಮನುಷ್ಯನ ಆಸೆಗೆ ತಕ್ಕಂತೆ ತಂತ್ರಜ್ಞಾನ ಬೆಳೆಯುತ್ತಿದ್ದು, ದುರಾಸೆಯಿಂದ ಇಡೀ ಭೂಮಂಡಲವನ್ನು ನಾಶಮಾಡುವ ತಂತ್ರಜ್ಞಾನ ಒಂದೆಡೆಯಾಗಿದೆ ಎಂದು ಹೇಳಿದರು.

ಮುಂದೆ ಎದುರಾಗುವ ಎಲ್ಲಾ ರೀತಿಯ ಸ್ಪರ್ಧೆಗಳನ್ನು ಸಮರ್ಪಕವಾಗಿ ಎದುರಿಸಲು ಜೆವಿಎಸ್ ಶಾಲೆ ವಿದ್ಯಾರ್ಥಿಗಳು ಸಜ್ಜಾಗಬೇಕು ಜೊತೆಗೆ ವಿಜ್ಞಾನದ ಬಗ್ಗೆ ಆಸಕ್ತಿ ಬೆಳೆಸಿಕೊಳ್ಳಬೇಕೆಂದು ಕರೆ ನೀಡಿದರು.

ಇತ್ತೀಚಿನ ದಿನಗಳಲ್ಲಿ ಈ ರೀತಿ ವಸ್ತುಪ್ರದರ್ಶನಗಳು ಕಡಿಮೆಯಾಗುತ್ತಿರುವ ಬಗ್ಗೆ ವಿಷಾಧ ವ್ಯಕ್ತಪಡಿಸಿದ ಅವರು, ಸಮಾಜಕ್ಕೆ ಉಪಯೋಗವಾಗುವಂತಹ ಹೊಸ ಆವಿಷ್ಕಾರಗಳ ಪ್ರದರ್ಶನ ಇದ್ದರೆ ವಿದ್ಯಾರ್ಥಿಗಳಲ್ಲಿ ಕುತೂಹಲ ಮೂಡಲು ಸಹಕಾರಿಯಾಗಲಿದೆ ಎಂದರು.

ಈ ಸಂದರ್ಭದಲ್ಲಿ ಸಂಘದ ಉಪಾಧ್ಯಕ್ಷ ಟಿ.ಡಿ. ಮಲ್ಲೇಶ್, ರಮೇಶ್, ಭವ್ಯ ನಟೇಶ್, ವಿಜಿತ್, ಓಂಕಾರಪ್ಪ, ತ್ಯಾಗರಾಜ್, ತೇಜಸ್, ಕುಳ್ಳೇಗೌಡ ಮತ್ತಿತರರು ಉಪಸ್ಥಿತರಿದ್ದರು. ಮೊದಲಿಗೆ ಕಾರ್ಯದರ್ಶಿ ಪ್ರದೀಪ್ ಕುಮಾರ್ ಸ್ವಾಗತಿಸಿದರು.

# ಉತ್ತರ ಕರ್ನಾಟಕ ಅಭಿವೃದ್ಧಿಗಾಗಿ ಪ್ರತ್ಯೇಕ ಬಜೆಟ್ ಮಂಡಿಸಿ: ರಾಜ್ಯ ಸರ್ಕಾರಕ್ಕೆ ಶಾಸಕರ ಆಗ್ರಹ

**ಬೆಳಗಾವಿ:** ಉತ್ತರ ಕರ್ನಾಟಕದ ಅಭಿವೃದ್ಧಿಗಾಗಿ ಪ್ರತ್ಯೇಕ ಬಜೆಟ್ ಮಂಡಿಸುವಂತೆ ಜೆಡಿಎಸ್ ಶಾಸಕ ಶರಣಗೌಡ ಕುಂದಕೂರ್ ಅವರು ಆಗ್ರಹಿಸಿದ್ದಾರೆ.

ಸದನದಲ್ಲಿ ಮಾತನಾಡಿರುವ ಅವರು, ದಕ್ಷಿಣ ಕರ್ನಾಟಕದಲ್ಲಿ ಸಾಧಿಸಿದ ಪ್ರಗತಿಯ ಬಗ್ಗೆ ನನಗೆ ಯಾವುದೇ ರೀತಿಯ ಅಸೂಯೆ ಇಲ್ಲ. ಆದರೆ, ಉತ್ತರ ಕರ್ನಾಟಕದ ಅಭಿವೃದ್ಧಿಗೆ ಒತ್ತು ನೀಡದಿರುವುದು ಕಳವಳ ತಂದಿದೆ. ಇಲ್ಲಿನ ಪ್ರಸ್ತುತದ ಸ್ಥಿತಿಗೆ ಜನರು ಹಾಗೂ ಚುನಾಯಿತ ಪ್ರತಿನಿಧಿಗಳು ಎಲ್ಲರೂ ಹೊಣೆಗಾರರಾಗಿರುತ್ತಾರೆಂದು ಹೇಳಿದರು.

7-8 ಬಾರಿ ಆಯ್ಕೆಯಾದ ಸದಸ್ಯರು ಈ ಪ್ರದೇಶದ ಅಭಿವೃದ್ಧಿಯ ಬಗ್ಗೆ ಕಳವಳ ವ್ಯಕ್ತಪಡಿಸುತ್ತಲೇ ಇದ್ದಾರೆ. ಹಲವು ಬಾರಿ ಆಯ್ಕೆಯಾದ ಸದಸ್ಯರ ಪರಿಸ್ಥಿತಿ ಹೀಗಿದ್ದರೆ, ಮೊದಲ ಬಾರಿಗೆ ಆಯ್ಕೆಯಾದವರ ಸ್ಥಿತಿ ಏನಾಗಬಹುದು? ಎಂದು ಪ್ರಶ್ನಿಸಿದ್ದಾರೆ,

ಉತ್ತರ ಕರ್ನಾಟಕಕ್ಕೆ ಸರ್ಕಾರ ಪ್ರತ್ಯೇಕ ಬಜೆಟ್ ಮಂಡಿಸಬೇಕು, ಕನಿಷ್ಠ ಐದು ವರ್ಷಗಳ ಕಾಲ 1.5 ರಿಂದ 2 ಲಕ್ಷ ಕೋಟಿ ರೂ.ಗಳನ್ನು ಮೀಸಲಿಡಬೇಕು. ಮಂಡಿಸಲಾದ ಬಜೆಟ್ ಒಂದು ವರ್ಷಕ್ಕೆ ಒಂದೇ ವಿಷಯದ ಮೇಲೆ ಕೇಂದ್ರೀಕರಿಸಬೇಕು. ಮೊದಲ ವರ್ಷ ಶಿಕ್ಷಣದ ಮೇಲೆ ಕೇಂದ್ರೀಕರಿಸಿದರೆ, ನಂತರದ ವರ್ಷಗಳಲ್ಲಿ ಆರೋಗ್ಯ, ನೀರಾವರಿ, ಕುಡಿಯುವ ನೀರು ಮತ್ತು ಮೂಲಸೌಕರ್ಯದ ಮೇಲೆ ಕೇಂದ್ರೀಕರಿಸಬೇಕು. ಇಂತಹ ಕ್ರಮಗಳಿಂದ ಮಾತ್ರ, ಈ ಪ್ರದೇಶದ ಅಭಿವೃದ್ಧಿಯಾಗದ ಸಮಸ್ಯೆಯನ್ನು ಪರಿಹರಿಸಬಹುದು. ಕೈಗಾರಿಕೆ, ಸಣ್ಣ ಪ್ರಮಾಣದ ಕೈಗಾರಿಕೆ, ಐಟಿ-ಬಿಟಿ ಮತ್ತು ಕೌಶಲ್ಯ ಅಭಿವೃದ್ಧಿ ಸಚಿವರು ಈ ಪ್ರದೇಶದವರೇ ಆಗಿದ್ದರೂ, ಕೈಗಾರಿಕಾ ಕ್ಷೇತ್ರದ ಅಭಿವೃದ್ಧಿ ಶೋಚನೀಯವಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಇದೇ ವೇಳೆ ಈ ಪ್ರದೇಶದ ಕಬ್ಬು ಮತ್ತು ಮೆಕ್ಕೆಜೋಳ ಬೆಳೆಗಾರರ ಸಮಸ್ಯೆಯ ಬಗ್ಗೆ ಧ್ವನಿ ಎತ್ತಿದ ಮಾಜಿ ಸಚಿವ ಲಕ್ಷ್ಮಣ್ ಸವದಿಯವರು, ಕೇಂದ್ರ ಸರ್ಕಾರದ ನೀತಿಗಳೇ ಇದಕ್ಕೆ ಕಾರಣ ಎಂದು ಆರೋಪಿಸಿದರು.

ಗುಜರಾತ್‌ನಲ್ಲಿ ಶೇ.100, ಉತ್ತರ ಪ್ರದೇಶದಲ್ಲಿ ಶೇ.69 ಮತ್ತು ಮಹಾರಾಷ್ಟ್ರದಲ್ಲಿ ಶೇ.64ರಷ್ಟು ಎಥೆನಾಲ್ ಉತ್ಪಾದಿಸಲು ಕೇಂದ್ರ ಸರ್ಕಾರ ಅನುಮತಿ ನೀಡಿದ್ದರೂ ಕರ್ನಾಟಕದಲ್ಲಿ ಕೇವಲ ಶೇ.30ರಷ್ಟು ಮಾತ್ರ ಖರೀದಿಸಲು ಅನುಮತಿ ನೀಡಲಾಗಿದೆ. ಹೀಗಾಗಿ ಸರ್ಕಾರ ನವದೆಹಲಿಗೆ ಸರ್ವಪಕ್ಷ ನಿಯೋಗವನ್ನು ಕರೆದೊಯ್ಯಬೇಕು. ರಾಜ್ಯದಲ್ಲಿ ಉತ್ಪಾದಿಸುವ ಹೆಚ್ಚಿನ ಎಥೆನಾಲ್ ಅನ್ನು ಖರೀದಿಸಲು ಕಂಪನಿಗಳಿಗೆ ಅವಕಾಶ ನೀಡುವಂತೆ ಹಾಗೂ ಸಕ್ಕರೆಯ ಒಖಕ ಅನ್ನು 41 ರೂ.ಗೆ ಹೆಚ್ಚಿಸಲು ಕೇಂದ್ರ ಸರ್ಕಾರವನ್ನು ಒತ್ತಾಯಿಸುವಂತೆ ಸಲಹೆ ನೀಡಿದರು.

ಇದೇ ವೇಳೆ ಕೃಷ್ಣಾ ಮೇಲ್ದಂಡೆ ಯೋಜನೆಯ ಮೂರನೇ ಹಂತದ ಅಡಿಯಲ್ಲಿ ನಾಲೆಗಳನ್ನು ನಿರ್ಮಿಸಲು ಭೂಸ್ವಾಧೀನ ಕೈಬಿಟ್ಟು, ಪರ್ಯಾಯ ಯೋಜನೆಯನ್ನು ರೂಪಿಸುವಂತೆ ಸಲಹೆ ನೀಡಿದರು.

ಕಾಲುವೆಗಳ ಬದಲಾಗಿ, ಆಳವಾದ ಭೂಗತ ಪೈಪ್‌ಲೈನ್ ಮೂಲಕ ನೀರನ್ನು ಹರಿಯಲು ಯೋಜನೆ ರೂಪಿಸಬೇಕು. ಈ ಬಗ್ಗೆ ತಜ್ಞರೊಂದಿಗೆ ಸಮಾಲೋಚಿಸಬೇಕೆಂದು ಹೇಳಿದರು.

ನಂತರ ಸಕ್ಕರೆ ಕಾರ್ಖಾನೆಗಳಿಂದ ಕಬ್ಬು ತೂಕ ಮಾಡುವಲ್ಲಿ ರೈತರು ಮೋಸ ಹೋಗುತ್ತಿರುವ ಬಗ್ಗೆ ಸಕ್ಕರೆ ಸಚಿವ ಶಿವಾನಂದ್ ಪಾಟೀಲ್ ಅವರು ಮಾತನಾಡಿದರು.

ಕಬ್ಬು ಬೆಳೆಗಾರರ ಹಿತ ಕಾಯಲು ಸರ್ಕಾರ ಬದ್ಧವಾಗಿದೆ. ರಾಜ್ಯದಲ್ಲಿ ಒಟ್ಟು 81 ಸಕ್ಕರೆ ಕಾರ್ಖಾನೆಗಳಿದ್ದು, ಅಲ್ಲಿ ಡಿಜಿಟಲ್ ವೇ ಬ್ರಿಡ್ಜ್‌ಗಳಿವೆ. ಸರ್ಕಾರದಿಂದಲೇ ಈ ವರ್ಷ 12 ಕಾರ್ಖಾನೆಗಳಲ್ಲಿ ಡಿಜಿಟಲ್ ತೂಕದ ಯಂತ್ರ ಅಳವಡಿಕೆಗಾಗಿ ಈಗಾಗಲೇ ಟೆಂಡರ್ ಕರೆಯಲಾಗಿದೆ.

ಸಕ್ಕರೆ ಕಾರ್ಖಾನೆಗಳಲ್ಲಿ ಕಬ್ಬು ತೂಕ ಮಾಡುವ ಯಂತ್ರದಲ್ಲಿ ಮೋಸ ಆಗುತ್ತಿರುವ ಬಗ್ಗೆ ಯಾವುದೇ ರೈತರು ಇದುವರೆಗೂ ದೂರು ಸಲ್ಲಿಸಿಲ್ಲ ಎಂದು ಹೇಳಿದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**